ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 157
4-12-2025 ಗುರುವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 157

## ಸಂಪಾದಕೀಯ.....

# ಜಾಗತಿಕ ವಿಸ್ಮಯದ ಬೆರಗು ಹುಟ್ಟಿಸಿದ AIಗೆ ಮಾನವ ಶ್ರಮ ತುಂಬುವ Mercor

**ಆಧುನಿಕ ಯುಗದಲ್ಲೂ ಮಾನವ ಜ್ಞಾನ ಮತ್ತು ವಿವೇಕದ ಅಗತ್ಯ ಎಷ್ಟಿದೆ ಎಂಬುದನ್ನು Mercor ತೋರಿಸಿಕೊಟ್ಟಿದೆ. AI ದೊಡ್ಡದಾದರೂ, ಮಾನವ ವಿವೇಕ, ನೈಪುಣ್ಯ, ಮತ್ತು ಅನುಭವ ಇನ್ನೂ ತಾನೇ ಬದಲಾಗುವಂತಿಲ್ಲ ಎಂಬ ಸತ್ಯವನ್ನು Mercor ತೋರಿಸಿದ ವಿಸ್ಮಯದ ಪ್ರಪಂಚದ ಬಾಗಿಲು ತೆರೆದಿದೆ.**



ಜಗತ್ತು AI ಕ್ರಾಂತಿಯಲ್ಲಿ ಮುಳುಗಿರುವಾಗ, ಆ ಕ್ರಾಂತಿಗೆ ಮಾನವ ಬುದ್ಧಿವಂತಿಕೆಯ ನೆರವು ಹೇಗೆ ಅವಶ್ಯಕ ಎಂಬುದನ್ನು Mercor ತೋರಿಸಿಕೊಟ್ಟಿದೆ. ಕೆಲವೇ ವರ್ಷಗಳ ಹಿಂದೆ ಮೂವರು ಯುವಕ ಕಾಲೇಜಿಗೆ ಗುಡ್ ಬೈ ಹೇಳಿ ಆರಂಭಿಸಿದ ಈ ಸಂಸ್ಥೆ ಇತಿಹಾಸ ಸೃಷ್ಟಿಸಿ ಜಾಗತಿಕ ಪಡಸಾಲೆಯಲ್ಲಿ ಚರ್ಚಾ ಕೇಂದ್ರವಾಗಿದೆ.

Mercor ಸಂಸ್ಥೆಯ ಮೂಲ ಉದ್ದೇಶ ತುಂಬಾ ಸರಳವಾಗಿ ಕಾಣುತ್ತದೆ. ಕೃತಕ ಬುದ್ಧಿಮತ್ತೆ ಮಾದರಿಗಳಿಗೆ ಮಾನವ ಸಹಾಯ ಒದಗಿಸುವುದು. ಆದರೆ ಈ ಉದ್ದೇಶದ ಹಿಂದೆ ಮಿಲಿಯನ್ ಗಟ್ಟಲೆ ಉದ್ಯೋಗಗಳು, ಜಾಗತಿಕ ಮಟ್ಟದ ಡೇಟಾ ಸಂಗ್ರಹಣೆ, ತಜ್ಞರ ಪರಿಚಯ ಮತ್ತು AI ಅಭಿವೃದ್ಧಿಗೆ ಹೊಸ ದಿಕ್ಕನ್ನು ತೋರಿಸುವ ಕಾರ್ಯವ್ಯವಸ್ಥೆಯಾಗಿದೆ. Mercor ನಿರ್ಮಿಸಿರುವ "ಗ್ಲೋಬಲ್ ಕನ್ಟ್ರಾಕ್ಟರ್ ನೆಟ್‌ವರ್ಕ್" ಇಂದಿನ ಏಐ ಕಂಪನಿಗಳಿಗೆ ವೇಗ, ಗುಣಮಟ್ಟ ಮತ್ತು ನಿಖರತೆ ನೀಡುತ್ತಿರುವುದರಿಂದ ಜಾಗತಿಕ ಪ್ರೀತಿಗೆ ಪಾತ್ರವಾಗಿದೆ.

ಈ ಸಂಸ್ಥೆ ಸ್ಥಾಪಕರಲ್ಲೊಬ್ಬರಾದ ಆದರ್ಶ ಹಿರೇಮಠ್ ಸೇರಿದಂತೆ ಮೂವರು ಯುವಕರು ಕೇವಲ 21–22 ವಯಸ್ಸಿನಲ್ಲೇ ಬಿಲಿಯನ್ ಡಾಲರ್ ಮೌಲ್ಯದ ಸಂಸ್ಥೆ ಕಟ್ಟಿ ಬೆಳೆಸಿದ್ದಾರೆ. ಇವರು ಜಾಗತಿಕ ಆರ್ಥಿಕ ವ್ಯವಸ್ಥೆಯ ಹೊಸ ತಲೆಮಾರಿನ ಉದ್ಯಮಶೀಲತೆಗೆ ಹೊಸ ದಿಕ್ಕು ತೋರಿಸಿದ್ದಾರೆ. Mercor ಅನ್ನು ಟೈಗರ್ ಗ್ಲೋಬಲ್, ಪೀಟರ್ ಥೀಲ್, ಜಾಕ್ ಡೋರ್ಸಿ ಮೊದಲಾದ ಹೂಡಿಕೆದಾರರು ಬೆಂಬಲಿಸಿದ್ದರಿಂದ, ಕಂಪನಿಯ ಪ್ರಾರಂಭದ ದಿನಗಳಲ್ಲೇ ಜಾಗತಿಕ ಗಮನವನ್ನು ಸೆಳೆದಿತ್ತು. ಆರಂಭದಲ್ಲಿ AI–ಮೂಲಕ ನೇಮಕಾತಿ ವ್ಯವಸ್ಥೆಯ ಕಂಪನಿಯಾಗಿ ಬೆಳೆಯುತ್ತಿದ್ದ Mercor, 2024–2025ರಲ್ಲಿ ದೊಡ್ಡ ಟ್ರಾನ್ಸ್‌ಫರ್ಮೇಶನ್ ಕಂಡಿತು. AI ಮಾದರಿಗಳನ್ನು ತರಬೇತಿ ಮಾಡಲು ಮಾನವ ತಜ್ಞರ ಅಗತ್ಯ ಹೆಚ್ಚಿದಂತೆ, Mercor ತನ್ನ ಕಾರ್ಯಪಟುವನ್ನು 'AI ತರಬೇತಿ–ಎನ್‌ಹಾನ್ಸ್‌ಮೆಂಟ್' ಕಡೆಗೆ ವಿಸ್ತರಿಸಿತು.

ಇಂದಿನ ದಿನಗಳಲ್ಲಿ Mercor ದಿನಕ್ಕೆ ಸುಮಾರು $1.5 ಮಿಲಿಯನ್ ಮಾನವ ಕಂಟ್ರಾಕ್ಟರ್ ಮಾಹಿತಿ ರವಾನಿಸುತ್ತಿದೆ ಎಂಬುದು ವರದಿಗಳಲ್ಲಿ ಕಂಡುಬರುತ್ತದೆ. ಇದು ಏಐ ಯುಗದಲ್ಲೂ ಮಾನವ ಜ್ಞಾನ ಮತ್ತು ವಿವೇಕದ ಅಗತ್ಯ ಎಷ್ಟಿದೆ ಎಂಬುದನ್ನು ತೋರಿಸುವ ಮಹತ್ತರ ದಾಖಲೆ. AI ದೊಡ್ಡದಾದರೂ, ಮಾನವ ವಿವೇಕ, ನೈಪುಣ್ಯ, ಮತ್ತು ಅನುಭವ ಇನ್ನೂ ತಾನೇ ಬದಲಾಗುವಂತಿಲ್ಲ ಎಂಬ ಸತ್ಯವನ್ನು Mercor ಸ್ಪಷ್ಟಪಡಿಸಿದೆ.

ಆದರೆ Mercor ಯುಗವನ್ನು ಕೇವಲ ಯಶಸ್ಸಿನ ಕಥೆ ಎಂದು ಹೇಳುವುದು ಸರಿಯಲ್ಲ. ಹೊಸ ಉದ್ಯೋಗ ವ್ಯವಸ್ಥೆಗಳು ಹೊಸ ಪ್ರಶ್ನೆಗಳನ್ನು, ಸಂತೋಷದ ಜೊತೆಗೆ ಅಸಮಾಧಾನವನ್ನೂ ತರುತ್ತವೆ. Mercor ಕನ್ಟ್ರಾಕ್ಟರ್‌ಗಳ ಕೆಲವು ಗುಂಪುಗಳು ಪಾವತಿ ಕಡಿತ, ಕೆಲಸದ ಆವೃತ್ತಿ ಗತಿ, ಸ್ಥಿರತೆಯ ಕೊರತೆ ಕುರಿತು ಪ್ರಶ್ನೆಗಳನ್ನು ಎತ್ತಿರುವುದು ವರದಿಗಳಲ್ಲಿದೆ. Gig economy ಯ ಶಕ್ತಿಯೊಂದಿಗೆ ಅದರ ದುರ್ಬಲತೆಗಳೂ ಬರುತ್ತವೆ–ಇದಲ್ಲದೆ Mercor ಕೂಡ ಅದಕ್ಕೆ ಹೊರತಲ್ಲ. ಕೆಲಸದ ಭದ್ರತೆ, ಸಮರ್ಪಕ ವೇತನ ಮತ್ತು ಪ್ರಾಮಾಣಿಕ ಕಮಿಷನ್ ವ್ಯವಸ್ಥೆಗಳ ಬಗ್ಗೆ ಚರ್ಚೆಗಳು ಈಗಾಗಲೇ ಆರಂಭವಾಗಿವೆ. AI ಕಂಪನಿಗಳು ಮಾನವ ಶ್ರಮವನ್ನು ಬಳಸಿಕೊಳ್ಳುವಾಗ ನೈತಿಕ ಹೊಣೆಗಾರಿಕೆ ಹೇಗೆ ಕ್ರಮಬದ್ಧವಾಗಬೇಕು ಎಂಬ ಪ್ರಶ್ನೆ ಇಲ್ಲಿ ಉದ್ಭವಿಸುತ್ತದೆ.

**ಯಶಸ್ಸು ಮತ್ತು ವಿವಾದ ಎರಡೂ Mercor ಸಂಸ್ಥೆಯ ಬೆಳವಣಿಗೆಯ ಭಾಗ. ಆದರೆ ಒಂದು ಸತ್ಯ ಅಚಲ:**

Mercor ವಿಶ್ವದ ಉದ್ಯೋಗ ವ್ಯವಸ್ಥೆಯನ್ನು ಹೊಸದಾಗಿ ಕಲ್ಪಿಸುವ ಕಾರ್ಯ ಮಾಡುತ್ತಿದೆ. ಹಿಂದೆ ಡೇಟಾ–ಎನೋಟೇಶನ್ ಎಂದರೆ ಕಡಿಮೆ ಕೌಶಲ್ಯದ ಕೆಲಸ ಎಂದು ಪರಿಗಣಿಸಲಾಗುತ್ತಿತ್ತು. ಆದರೆ ಇಂದು Mercor ಮೂಲಕ ಡಾಕ್ಟರ್‌ಗಳು, ಬ್ಯಾಂಕರ್‌ಗಳು, ಇಂಜಿನಿಯರ್‌ಗಳು, ಅಧ್ಯಾಪಕರು ಸೇರಿದಂತೆ ಹಲವು ವೃತ್ತಿಪರರು AI ಮಾರ್ಗದರ್ಶನಕ್ಕೆ ತಮ್ಮ ಪರಿಣತಿ ನೀಡುತ್ತಿದ್ದಾರೆ. ಈ ಬದಲಾವಣೆ ಭವಿಷ್ಯದ ಉದ್ಯೋಗ ಮೌಲ್ಯವನ್ನು ಸಂಪೂರ್ಣ ಹೊಸ ದಿಕ್ಕಿಗೆ ತರುತ್ತಿದೆ. ಜ್ಞಾನ–ಆಧಾರಿತ ಉದ್ಯೋಗಗಳಿಗೆ ಗಡಿ ರೇಖೆಗಳಿಲ್ಲದ ಅವಕಾಶಗಳು Mercor ಮೂಲಕ ಕಂಡುಬರುತ್ತಿವೆ.

Mercor ಸಂಸ್ಥೆಯ ವೇಗ ಮನ ಸೆಳೆಯುವಂತಿದೆ. ಕೆಲವೇ ವರ್ಷಗಳಲ್ಲಿ $2 ಬಿಲಿಯನ್ ಮೌಲ್ಯ, ನಂತರ $10 ಬಿಲಿಯನ್ ಮೌಲ್ಯ,

ವಿಶ್ವದ "ಯುವಕ ಕೋಟ್ಯಾಧಿಪತಿಗಳ" ಪಟ್ಟಿಯಲ್ಲಿ ಸ್ಥಾಪಕರ ಹೆಸರು, – ಈ ಎಲ್ಲವೂ ಉದ್ಯಮಶೀಲತೆಯ ಹೊಸ ಯುಗವನ್ನು ಸೂಚಿಸುತ್ತವೆ. ಆದರೆ ಈ ಯಶಸ್ಸಿನ ಹಿಂದೆ ತಾಂತ್ರಿಕ ಜ್ಞಾನ, ನಿರಂತರ ಪರಿಶ್ರಮ, ಮತ್ತು ತಂಡವನ್ನು ಕಟ್ಟುವ ಸಾಮರ್ಥ್ಯ ಇದೆ. ಸಾಮಾನ್ಯವಾಗಿ ನಾವು ಸ್ಟಾರ್ಟ್‌ಅಪ್‌ಗಳನ್ನು ಆ್ಯಪ್–ಆಧಾರಿತ ಸೇವೆಗಳಂತೆ ಕಲ್ಪಿಸುತ್ತೇವೆ; Mercor ಅದನ್ನು ಮೀರಿಸಿ ಜಾಗತಿಕ ಮಾನವ ಸಂಪನ್ಮೂಲ ಮತ್ತು AI ಅಭಿವೃದ್ಧಿಯನ್ನು ಒಂದೇ ಜಾಲಕ್ಕೆ ಕೊಂಡೊಯ್ದಿದೆ.

ಭಾರತ ಸೇರಿದಂತೆ ಅನೇಕ ದೇಶಗಳ ಯುವಕರಿಗೆ Mercor ಹೊಸ ದಾರಿ ತೋರಿದೆ. ಯಾವುದೇ ಸ್ಥಳದಲ್ಲಿದ್ದರೂ, ಜ್ಞಾನ ಸಂಪತ್ತು ಮತ್ತು ಪ್ರಾಮಾಣಿಕ ಕಾರ್ಯನಿರ್ವಹಣೆ ಇದ್ದರೆ ಜಾಗತಿಕ AI ಕಂಪನಿಗಳಿಗೆ ಕೆಲಸ ಮಾಡಬಹುದು ಎಂಬ ಅವಕಾಶ Mercor ನೀಡುತ್ತಿದೆ. ಇದರ ಪರಿಣಾಮವಾಗಿ ಗ್ರಾಮೀಣ–ನಗರ, ದೇಶ–ವಿದೇಶ ಎಂಬ ವಿಭಜನೆಗಳು ಹೊಸ ಉದ್ಯೋಗ ವ್ಯವಸ್ಥೆಯಲ್ಲಿ ಮಾಯವಾಗುತ್ತಿವೆ.

ಒಟ್ಟಿನಲ್ಲಿ, Mercor ಒಂದು ಸ್ಟಾರ್ಟ್‌ಅಪ್ ಮಾತ್ರವಲ್ಲ–ಇದು AI ಯುಗದಲ್ಲಿ ಮಾನವ ಕೆಲಸದ ಮರುಪರಿವರ್ತನೆಯ ನವ ಯುಗದ ಸೂಚಕ. ಯಶಸ್ಸು–ಚರ್ಚೆ–ವಿವಾದಗಳ ನಡುವೆ Mercor ನಮ್ಮ ಮುಂದೆ ದೊಡ್ಡ ಪ್ರಶ್ನೆಯನ್ನು ನಿಲ್ಲಿಸುತ್ತದೆ. "AI ಮತ್ತು ಮಾನವ ಶ್ರಮ ಒಟ್ಟಿಗೆ ಕೆಲಸ ಮಾಡಿದಾಗ, ಭವಿಷ್ಯದ ಉದ್ಯೋಗವು ಹೇಗೆ ರೂಪುಗೊಳ್ಳಬೇಕು?"

ಈ ಪ್ರಶ್ನೆಗೆ ಉತ್ತರ ಹುಡುಕುವ ಪ್ರಯತ್ನವೇ Mercor ಎಂಬ ಸಂಸ್ಥೆಯ ಮಹತ್ವ. AI ಜಗತ್ತು ಬೆಳೆಯುವಂತೆ Mercor ಮಾದರಿ ಸಂಸ್ಥೆಗಳು ಭವಿಷ್ಯದ ಆರ್ಥಿಕ–ಸಾಮಾಜಿಕ ವ್ಯವಸ್ಥೆಗಳನ್ನು ನಿರ್ಧರಿಸುವಲ್ಲಿ ಪ್ರಮುಖ ಪಾತ್ರವಹಿಸಲಿದೆ ಎಂಬುದರಲ್ಲಿ ಸಂಶಯವಿಲ್ಲ.



–ಮಲ್ಲಿಕಾರ್ಜುನ್ ಕಬ್ಬೂರು,
ಸಂಪಾದಕರು

# ಮಂಗಳೂರಿನಲ್ಲಿ ಮುಂದುವರಿದ ಸಿಎಂ ಕುರ್ಚಿ ಪಾಲಿಟಿಕ್ಸ್

## ಸಿದ್ದರಾಮಯ್ಯ–ಡಿ.ಕೆ. ಶಿವಕುಮಾರ್ ಬೆಂಬಲಿಗರಿಂದ ಜೈಕಾರ ಘೋಷಣೆ

**ಮಂಗಳೂರು:** ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದಕ್ಕಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಬುಧವಾರ ಬೆಳಗ್ಗೆ ಮಂಗಳೂರಿಗೆ ಆಗಮಿಸಿದರು.

ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬಂದಿಳಿದ ಮುಖ್ಯಮಂತ್ರಿಯನ್ನು ಗೃಹ ಸಚಿವ ಡಾ.ಜಿ.ಪರಮೇಶ್ವರ್, ದ.ಕ. ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ಮಾಜಿ ಸಚಿವ ಬಿ.ರಮಾನಾಥ ರೈ, ವಿಧಾನ ಪರಿಷತ್ ಸದಸ್ಯರಾದ ಮಂಜುನಾಥ್ ಭಂಡಾರಿ, ಐವನ್ ಡಿಸೋಜ ಮತ್ತಿತರರು ಸ್ವಾಗತಿಸಿದರು.

ಈ ವೇಳೆ ಮುಖ್ಯಮಂತ್ರಿ ಪೊಲೀಸರಿಂದ ಗೌರವ ರಕ್ಷೆ ಸ್ವೀಕರಿಸಿದರು. ಶಿವಗಿರಿ ಮಠ, ವರ್ಕಲ ಮತ್ತು ಬ್ರಹ್ಮಶ್ರೀ ನಾರಾಯಣ ಗುರು ಅಧ್ಯಯನ ಪೀಠ, ಮಂಗಳೂರು ವಿಶ್ವವಿದ್ಯಾನಿಲಯದ



ಆಶ್ರಯದಲ್ಲಿ ಕೊಣಾಜೆಯ ಮಂಗಳೂರು ವಿಶ್ವವಿದ್ಯಾನಿಲಯ ಕ್ಯಾಂಪಸ್ ನಲ್ಲಿ ನಡೆಯಲಿರುವ ನಾರಾಯಣ ಗುರು–ಗಾಂಧೀಜಿ ಸಂವಾದ ಶತಮಾನೋತ್ಸವದ ಪ್ರಯುಕ್ತ ಆಯೋಜಿಸಿರುವ ಶ್ರೀ ಮಹಾಗುರುವಿನ ಮಹಾ ಸಮಾಧಿ ಶತಾಬ್ದಿ ಸರ್ವಮತ ಸಮ್ಮೇಳನ ಶತಮಾನೋತ್ಸವ ಕಾರ್ಯಕ್ರಮ ಸಹಿತ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಸಲುವಾಗಿ ಮುಖ್ಯಮಂತ್ರಿ ಮಂಗಳೂರಿಗೆ ಆಗಮಿಸಿದ್ದಾರೆ.

**ಸಿಎಂ ಹುದ್ದೆ ಪಾಲಿಟಿಕ್ಸ್:** ಮಂಗಳೂರಿನಲ್ಲಿ ಕೂಡ ಸಿದ್ದರಾಮಯ್ಯ ಸಿಎಂ, ಡಿ ಕೆ ಶಿವಕುಮಾರ್ ಸಿಎಂ ಎಂಬ ಘೋಷಣೆ ಕೂಗು ಇಬ್ಬರೂ ನಾಯಕರ ಬೆಂಬಲಿಗರಿಂದ ಕೇಳಿಬಂದ ಪ್ರಸಂಗ ನಡೆಯಿತು. ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೆ ಸಿ ವೇಣುಗೋಪಾಲ್ ಇಂದು ಬೆಳಗ್ಗೆ ಮಂಗಳೂರಿಗೆ ಆಗಮಿಸುತ್ತಿದ್ದಂತೆ ಡಿ ಕೆ ಶಿವಕುಮಾರ್ ಬೆಂಬಲಿಗರು ಡಿ ಕೆ ...ಡಿ ಕೆ ಎಂದು ಕೂಗುತ್ತಾ ಮುಂದಿನ ಸಿಎಂ ಡಿ ಕೆ ಶಿವಕುಮಾರ್ ಎಂದು ವೇಣುಗೋಪಾಲ್ ಮುಂದೆಯೇ ಕೂಗಿದರು.

ಇನ್ನೊಂದೆಡೆ ಸಿದ್ದರಾಮಯ್ಯನವರು ಮಂಗಳೂರಿಗೆ ಬಂದಿಳಿಯುತ್ತಿದ್ದಂತೆ ಅವರ ಬೆಂಬಲಿಗರು ಪೂರ್ಣಾವಧಿ ಸಿಎಂ ಸಿದ್ದರಾಮಯ್ಯ ಎಂದು ಘೋಷಣೆ ಕೂಗಿದರು.

### ಡಿಕೆಶಿ ಹೋಗಲಿ ಬಿಡಿ, ಆಹ್ವಾನವಿಲ್ಲದೆ ನಾನು ದೆಹಲಿಗೆ ತೆರಳಲ್ಲ: ಸಿಎಂ

ಮಂಗಳೂರು: ಔಪಚಾರಿಕವಾಗಿ ಆಹ್ವಾನ ನೀಡದ ಹೊರತು ನವದೆಹಲಿಗೆ ಪ್ರಯಾಣಿಸುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬುಧವಾರ ಹೇಳಿದ್ದಾರೆ. ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಬುಧವಾರ ಮದುವೆಯಲ್ಲಿ ಭಾಗವಹಿಸಲು ಮತ್ತು ಪಕ್ಷದ ಕಾರ್ಯಕ್ರಮವನ್ನು ಯೋಜಿಸಲು ನವದೆಹಲಿಗೆ ಭೇಟಿ ನೀಡಿದ ನಂತರ ಅವರ ಹೇಳಿಕೆಗಳು ಬಂದಿವೆ.

## ಡಿ.21 ರಿಂದ 24 ರವರೆಗೆ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ

# 1.40 ಲಕ್ಷ ಮಕ್ಕಳಿಗೆ ಪೋಲಿಯೋ ಲಸಿಕೆ

### ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ, ಪೂರ್ವ ಸಿದ್ಧತಾ ಸಭೆಯಲ್ಲಿ ಡಿಸಿ ಹೇಳಿಕೆ

**ದಾವಣಗೆರೆ:** ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದಡಿ ಇದೇ ಡಿಸೆಂಬರ್ 21 ರಿಂದ 24 ರವರೆಗೆ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ ಹಮ್ಮಿಕೊಂಡಿದ್ದು,. ಜಿಲ್ಲೆಯಲ್ಲಿ 5 ವರ್ಷದೊಳಗಿನ 1,46,126 ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕುವ ಗುರಿ ಹೊಂದಲಾಗಿದೆ ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಆಯೋಜಿಸಲಾಗಿದ್ದ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಪೂರ್ವ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗ್ರಾಮೀಣ ಮತ್ತು ನಗರ ಪ್ರದೇಶದ ಎಲ್ಲಾ ಮಕ್ಕಳಿಗೆ ಪೋಲಿಯೋ ಲಸಿಕಾ ಕಾರ್ಯಕ್ರಮ ಏರ್ಪಡಿಸಲಾಗಿದೆ. ಜಿಲ್ಲೆಯಲ್ಲಿನ 0–5 ವರ್ಷದೊಳಗಿನ ಯಾವುದೇ ಮಗು ಲಸಿಕೆಯಿಂದ





ಹೊರಗುಳಿಯಬಾರದು. ವಿವಿಧ ರಾಜ್ಯಗಳಿಂದ ಉದ್ಯೋಗ ಹರಸಿ ಬಂದಂತಹ ಕಾರ್ಮಿಕ ಕುಟುಂಬ ಮಕ್ಕಳನ್ನೂ ಗುರುತಿಸಿ ಲಸಿಕೆ ಹಾಕಬೇಕು ಎಂದು ತಿಳಿಸಿದ ಅವರು, ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ವಿವಿಧ ಇಲಾಖೆಯ ಅಧಿಕಾರಿಗಳು ತಮ್ಮ ಇಲಾಖೆಯ ವಾಹನಗಳನ್ನು ನಿಗಧಿತ ಸಮಯಕ್ಕೆ ನಿಯೋಜಿಸಬೇಕು. ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ಯಾವುದೇ ರೀತಿಯ ತೊಂದ–ರೆಯಾಗದಂತೆ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ವಾಹನಗಳ ಪೂರೈಸಬೇಕು. ಬೆಸ್ಕಾಂ ಇಲಾಖೆ ನಿರಂತರ ವಿದ್ಯುತ್ ಪೂರೈಕೆಗೆ ಕ್ರಮವಹಿಸಬೇಕು ಎಂದು ಸೂಚಿಸಿದರು. ಈ ಕಾರ್ಯಕ್ರಮ ವ್ಯಾಪಕ ಪ್ರಚಾರಕ್ಕಾಗಿ ಶಾಲಾ ಮಕ್ಕಳಿಂದ ಜಾಥಾ ಏರ್ಪಡಿಸುವುದರ ಮೂಲಕ ಸಾರ್ವಜನಿಕರಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮದ ಕುರಿತು ಜಾಗೃತಿ ಮೂಡಿಸಬೇಕು. ನಗರಸಭೆ ಮತ್ತು ಇನ್ನಿತರೆ ಸ್ಥಳೀಯ ಸಂಸ್ಥೆಗಳ ವತಿಯಿಂದ ಪಲ್ಸ್ ಪೋಲಿಯೋ ಕಾರ್ಯಕ್ರಮದ ಕುರಿತು ಆಡಿಯೋ ಮೂಲಕ ಕಸ ವಿಲೇವಾರಿ ವಾಹನಗಳಲ್ಲಿ ಪ್ರಚುರಪಡಿಸಬೇಕು ಎಂದು ತಿಳಿಸಿದರು.

ಜಿ.ಪಂ. ಸಿಇಓ ಗಿತ್ತೆ ಮಾಧವ ವಿಠಲ ರಾವ್ ಮಾತನಾಡಿ, ಜಿಲ್ಲೆಯಲ್ಲಿನ ಯಾವುದೇ ಒಬ್ಬ ಮಗು ಸಹ ಲಸಿಕೆಯಿಂದ ಹೊರಗುಳಿಯಬಾರದು. ವಿಶೇಷವಾಗಿ ಗ್ರಾಮೀಣ ಮತ್ತು ಅರಣ್ಯ ಪ್ರದೇಶಗಳಲ್ಲಿ ವಾಸಿಸುತ್ತಿರುವ ಮಕ್ಕಳನ್ನು ಗಮನ ಹರಿಸಿ ಅವರಿಗೂ ಕೂಡ ಲಸಿಕೆ ನೀಡಬೇಕು. ಅದರಲ್ಲೂ ಚನ್ನಗಿರಿ ವಲಯದಲ್ಲಿ ಹೆಚ್ಚಾಗಿ ಅರಣ್ಯ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಅಡಿಕೆ ಕೆಲಸಕ್ಕೆ ತೆರಳುವ ಕಾರ್ಮಿಕರು ತಮ್ಮ ಮಕ್ಕಳನ್ನು ಕೆಲಸದ ಸ್ಥಳಗಳಲ್ಲಿ ಕಾಣ ಸಿಗುತ್ತಾರೆ. ಅವರನ್ನು ಗುರುತಿಸಿ ಪ್ರತಿಯೊಂದು ಮಗುವಿಗೂ ಲಸಿಕೆ ನೀಡಬೇಕು ಎಂದು ತಾಕೀತು ಮಾಡಿದರು.

ಸಭೆಯಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ನಾಗೇಂದ್ರಪ್ಪ, ಪೌರಾಯುಕ್ತೆ ರೇಣುಕಾ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಷಣ್ಮುಖಪ್ಪ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕ ರಾಜನಾಯ್ಕ, ಆರ್‌ಸಿಹೆಚ್ ಅಧಿಕಾರಿ ಡಾ. ರೇಣುಕಾರಾಧ್ಯ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಡಿ.9 ರಿಂದ ಲಾರಿ ಮಾಲೀಕರ ಅನಿರ್ದಿಷ್ಟ ಮುಷ್ಕರ

**ದಾವಣಗೆರೆ:** ಕೇಂದ್ರ ಸರ್ಕಾರದಿಂದ ಲಾರಿಗಳ ಎಫ್.ಸಿ ಮತ್ತು ಆರ್.ಆರ್.ಸಿ ಗಳ ಶುಲ್ಕ 1400 ಇದ್ದ ಶುಲ್ಕವನ್ನು 28,000 ರವರೆಗೆ ವರೆಗೆ ಹೆಚ್ಚಿಸಿರುವುದನ್ನು ಖಂಡಿಸಿ, ದಾವಣಗೆರೆ ಲೋಕಲ್ ಮತ್ತು ಗೂಡ್ಸ್ ಶೆಡ್ ಲಾರಿ ಮಾಲೀಕರ ಸಂಘದಿಂದ ಡಿ.9 ರಿಂದ ಲಾರಿಗಳ ಸರಕು ಸಾಗಣೆಯನ್ನು ನಿಲ್ಲಿಸಿ, ಪ್ರತಿಭಟನೆ ಮತ್ತು ಅನಿರ್ದಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳಲಾಗಿದೆ.

ಕೇಂದ್ರ ಸರ್ಕಾರ ಲಾರಿಗಳ ಎಫ್.ಸಿ ಮತ್ತು ಆರ್.ಆರ್.ಸಿ ಗಳ ಶುಲ್ಕವನ್ನು ಒಮ್ಮೆಲೆ ಹೆಚ್ಚಿಸಿದ್ದು, ಇದರಿಂದ ತೊಂದರೆ ಉಂಟಾಗಿದೆ. ನಮ್ಮಿಂದ ಅಷ್ಟು ಮೊತ್ತ ಭರಿಸಲು ಸಾಧ್ಯವಾಗುವುದಿಲ್ಲ. ರಾಷ್ಟ್ರಮಟ್ಟದ ಸರಕು ಸಾಗಣೆಗಳಿಗೆ ಸಂಬಂದಪಟ್ಟಂತೆ ಇಡೀ ದೇಶಾದ್ಯಂತ ಇರುವ ಲಾರಿ ಮಾಲೀಕರು ಹಗಲು ರಾತ್ರಿ ಎನ್ನದೇ ಹೆಚ್ಚಿನ ಶ್ರಮ ವಹಿಸಿ ದುಡಿಯುತ್ತಿದ್ದಾರೆ.

## ಡಿ.5 ಕ್ಕೆ ಅಲರ್ಜಿ–ಅಸಮಾ ರೋಗಿಗಳಿಗೆ ವಿಶೇಷ ಔಷಧಿ ವಿತರಣೆ

**ದಾವಣಗೆರೆ:** ಸುಶ್ರುತ ಆಯುರ್ವೇದ ಕಾಲೇಜು ಮತ್ತು ಆಸ್ಪತ್ರೆ, ಶ್ರೀರಾಮನಗರ, ದಾವಣಗೆರೆಯಲ್ಲಿ ಅಲರ್ಜಿ ಮತ್ತು ಅಸ್ತಮಾ ರೋಗಿಗಳಿಗೆ ವಿಶೇಷ ಔಷಧಿ ವಿತರಣೆ ಮಾಡಲಾಗುತ್ತಿದೆ.

ಚಳಿಗಾಲದಲ್ಲಿ ಕಾಣಿಸಿಕೊಳ್ಳುವ ನೆಗಡಿಯ ನಂತರ ಬಹಳಷ್ಟು ಜನರಲ್ಲಿ ಕಂಡು ಬರುವ ತೊಂದರೆ ಅಸ್ತಮಾ, ಕೆಮ್ಮು, ಕಷ್ಟಕರ ಉಸಿರಾಟ ಇತ್ಯಾದಿ, ಈ ತರಹದ ಸಮಸ್ಯೆಗಳ ಪರಿಹಾರವಾಗಿ ಆಯುರ್ವೇದಲ್ಲಿ ವಿಶಿಷ್ಟವಾದ ಔಷಧೋಪಚಾರವನ್ನು ವಿವರಿಸಲಾಗಿದೆ. ಉಲ್ಲೇಖಿಸಿರುವ ಔಷಧಿಯನ್ನು ಮೃಗಶಿರ ನಕ್ಷತ್ರ ಹುಣ್ಣಿಮೆ ಚಂದ್ರನ ಬೆಳಕಿನಲ್ಲಿ ಇಡೀ ರಾತ್ರಿ ಇಟ್ಟು ಸೂರ್ಯೋದಯದ ನಂತರ ಸೇವಿಸಿದಲ್ಲಿ ರೋಗಿಗಳಿಗೆ ಹೆಚ್ಚಿನ ಪ್ರಯೋಜನವಾಗುವುದರಿಂದ ಡಿಸೆಂಬರ್ 5 ರಂದು ಮಾರ್ಗಶಿರ ಮಾಸ, ಶುಕ್ಲಪಕ್ಷ, ಪೌರ್ಣಮಿ ತಿಥಿಯಂದು ಔಷಧವನ್ನು ಬೆಳಿಗ್ಗೆ 5 ರಿಂದ 7 ಗಂಟೆಯವರೆಗೂ ನೀಡಲಾಗುತ್ತದೆ. ಆರೋಗ್ಯ ಆಕಾಂಕ್ಷಿಗಳು ಈ ಶಿಬಿರದ ಸದುಪಯೋಗ ಪಡೆಯಲು ತಮ್ಮ ಹೆಸರನ್ನು ಡಿಸೆಂಬರ್ 4 ರೊಳಗೆ ಮೊ:9740380466, 08192–272020 ಕರೆ ಮಾಡಿ ಹೆಸರು ನೋಂದಣಿ ಮಾಡಲು ತಿಳಿಸಲಾಗಿದೆ.

# ವಿಶೇಷ ಚೇತನರು ಎಲ್ಲರಿಗಿಂತ ಮಿಗಿಲು

**ದಾವಣಗೆರೆ :** ದೇವರ ಸೃಷ್ಟಿಯಾದ ಅಂಗವೈಕಲ್ಯತೆ ಶಾಪವಲ್ಲ, ಬದಲಾಗಿ ವರವಾಗಿದೆ. ಪ್ರತಿಭೆ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲಿ ಅವರು ತಮ್ಮ ಛಾಪು ಮೂಡಿಸಿದ್ದು ನಾವೆಲ್ಲ ಅವರಿಗೆ ಆತ್ಮವಿಶ್ವಾಸ ತುಂಬುವ ಅವಶ್ಯಕತೆ ಇದೆ ಎಂದು ಶಾಸಕರಾದ ಕೆ.ಎಸ್.ಬಸವಂತಪ್ಪ ಅಭಿಪ್ರಾಯ ವ್ಯಕ್ತಪಡಿಸಿದರು.

ಬುಧವಾರ( ಡಿ.03) ರಂದು ಜಿಲ್ಲಾಡಳಿತ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಮತ್ತು ವಿಕಲಚೇತನರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳು, ದಾವಣಗೆರೆ ಇವರ ಸಂಯುಕ್ತಾಶ್ರಯದಲ್ಲಿ ಇಲ್ಲಿ ಏರ್ಪಡಿಸಲಾಗಿದ್ದ ವಿಶ್ವ ವಿಕಲಚೇತನರ ದಿನಾಚರಣೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ದಿವ್ಯಾಂಗರು ಸರ್ವಾಂಗರಿಗಿಂತ ಎಲ್ಲ ವಿಷಯಗಳಲ್ಲೂ ಮಿಗಿಲಾಗಿದ್ದಾರೆ. ವಿಕಲಚೇತನರು ಆತ್ಮವಿಶ್ವಾಸದಿಂದ ಬದುಕಲು ನಮ್ಮ ಸಹಕಾರ ಅಗತ್ಯವಾಗಿದೆ. ಸರ್ಕಾರ ವಿಶೇಷಚೇತನರ ಶ್ರೇಯೋಭಿವೃದ್ಧಿಗಾಗಿ ಅನೇಕ ಯೋಜನೆ, ಸೌಲಭ್ಯಗಳನ್ನು ನೀಡಿದೆ. ವಿಕಲಚೇತನರಿಗೆ ದೊರೆಯುವ ಸೌಲಭ್ಯವನ್ನು ಅವರಿಗೆ ಸರಿಯಾಗಿ



ತಲುಪಿಸುವ ಕೆಲಸ ಮಾಡಬೇಕು ಎಂದ ಅವರು ವಿಶೇಷಚೇತನರು ಎಲ್ಲ ರೀತಿಯಿಂದ ಸಮರ್ಥರಿದ್ದು ಪ್ರೀತಿ, ವಿಶ್ವಾಸದಿಂದ ಕಂಡಲ್ಲಿ ಎಲ್ಲ ರಂಗಗಳಲ್ಲಿ ಹೆಚ್ಚಿನ ಸಾಧನೆ ಮಾಡಲು ಸಾಧ್ಯವಾಗುತ್ತದೆ. ಸಮಾಜದ ಮುಖ್ಯ ವಾಹಿನಿಗೆ ಇವರನ್ನು ತರಬೇಕು. ಇವರಿಗೆ ಧೈರ್ಯ ತುಂಬಿ ಮುನ್ನಡೆಯುವಂತೆ ಮಾಡಬೇಕು. ನಿರಂತರವಾಗಿ ಅವರು ತಮ್ಮ ಕೆಲಸವನ್ನು ಮಾಡಿಕೊಂಡು ಹೋಗಲು ನೆರವಾಗಬೇಕು. ಸಮಯವನ್ನು ಹಾಗೇ ವ್ಯರ್ಥವಾಗಿ ಹೋಗಲು ಬಿಡದೇ ಅದರ ಸದುಪಯೋಗ ಮಾಡಿಕೊಳ್ಳಬೇಕು ಎಂದರು.

ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ ಮಾತನಾಡಿ ದೇವರ ಎಲ್ಲ ಸೃಷ್ಟಿಯಲ್ಲೂ ಒಂದೊಂದು ವಿಶೇಷತೆಯನ್ನು ನೀಡಿರುತ್ತಾನೆ. ಅದನ್ನು ತಿಳಿದು, ಅಂತಹ ಪ್ರತಿಭೆಯನ್ನು ಗುರುತಿಸಿ, ಪ್ರೋತ್ಸಾಹಿಸಬೇಕು. ಇಲ್ಲಿರುವ ಪ್ರತಿಯೊಬ್ಬ ವಿಕಲಚೇತನರನ್ನು ನಾನು ವಿಶೇಷಚೇತನರೆಂದು ಕರೆಯುತ್ತೇನೆ. ವಿಕಲತೆಯನ್ನು ಶಾಪ ಎಂದು ಚಿಂತಿಸಬಾರದು. ಬಹಳ ಜನ ವಿಕಲಚೇತನರಲ್ಲಿ ಸಾಧನೆ ಮಾಡಿದ ಮಹಿಳೆಯರಿದ್ದಾರೆ. ಅಂತಹವರ ಸಾಧನೆಯನ್ನು ಸ್ಫೂರ್ತಿಯಾಗಿ ತೆಗೆದುಕೊಳ್ಳಬೇಕು. ವಿಶೇಷ ಸಾಧನೆ ಮಾಡಿರುವ ವಿಕಲಚೇತರನ್ನು ಮಾದರಿಯನ್ನಾಗಿಟ್ಟುಕೊಂಡು ಜೀವನ ನಡೆಸೋಣ ಎಂದು ಕರೆ ನೀಡಿದರು.

### ಶಾಸಕ ಬಸವಂತಪ್ಪ

ಜಿವನದಲ್ಲಿ ನಾವು ಯಾರಿಗೂ ಹೊರೆಯಾಗಿರಬಾರದು ಎಂದು ನಿಮ್ಮ ಆಶಯಗಳನ್ನು ನಮಗೆ ತಿಳಿಸಿದ್ದೀರಿ. ನಿಮ್ಮ ಜೊತೆಯಾಗಿ, ನಿಮ್ಮ ಕಷ್ಟಗಳಿಗೆ ಬೆನ್ನೆಲುಬಾಗಿ ಜಿಲ್ಲಾಡಳಿತ ಯಾವಾಗಲೂ ನಿಮ್ಮ ಜೊತೆ ಇರುತ್ತದೆ. ವಿಶೇಷಚೇತನರ ಬಾಳಲ್ಲಿ ಬೆಳಕು ಮೂಡಿಸುವ ಕೆಲಸವನ್ನು ಮಾಡಲು ನಾವು ಸದಾ ನಿಮ್ಮೊಂದಿಗಿದ್ದೇವೆ ಎಂದು ಭರವಸೆ ನೀಡಿದರು.


ವಿವಿಧ ಸ್ಪರ್ಧೆಯಲ್ಲಿ ಭಾಗವಹಿಸಿ ವಿಜೇತರಾದ ವಿಶೇಷಚೇತನರಿಗೆ ಬಹುಮಾನ ನೀಡಲಾಯಿತು.

ಜಿಲ್ಲಾ ಅಂಗವಿಕಲ ಹಾಗೂ ಹಿರಿಯ ನಾಗರಿಕರ ಕಲ್ಯಾಣ ಇಲಾಖೆಯ ಅಧಿಕಾರಿ ಕೆ.ಕೆ ಪ್ರಕಾಶ ಪ್ರಾಸ್ತಾವಿಕ ನುಡಿಗಳನ್ನಾಡಿದರು.

ದೂಡಾ ಅಧ್ಯಕ್ಷರಾದ ದಿನೇಶ್.ಕೆ.ಶೆಟ್ಟಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ರಾಜಾನಾಯ್ಕ, ಜಿ.ಪಂ ಯೋಜನಾ ನಿರ್ದೇಶಕರಾದ ರೇಷ್ಮಾಕೌಸರ್ ಉಪಸ್ಥಿತರಿದ್ದರು.


## ಬಾಗಲಕೋಟೆಯಲ್ಲಿ ಭೀಕರ ರಸ್ತೆ ಅಪಘಾತ : ಕಬ್ಬಿನ ಟ್ರ್ಯಾಕ್ಟರ್‌ಗೆ ಕಾರು ಡಿಕ್ಕಿ

# ಸ್ಥಳದಲ್ಲೇ ನಾಲ್ವರು ಯುವಕರ ದುರ್ಮರಣ



**ಜಮಖಂಡಿ:** ಬಾಗಲಕೋಟೆ ಜಿಲ್ಲೆಯ ಸಿದ್ದಾಪುರ ಪ್ರಭುಲಿಂಗೇಶ್ವರ ಸಕ್ಕರೆ ಕಾರ್ಖಾನೆ ಹತ್ತಿರ ರಾತ್ರಿ 12.30ಕ್ಕೆ ಕಬ್ಬಿನ ಟ್ರ್ಯಾಕ್ಟರ್‌ಗೆ ಕಾರು ಡಿಕ್ಕಿ ಹೊಡೆದ ಪರಿಣಾಮ ಕಾರಿನಲ್ಲಿದ್ದ ನಾಲ್ವರು ಯುವಕರು ಮೃತಪಟ್ಟಿದ್ದಾರೆ.

ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲ್ಲೂಕಿನ ಸಿದ್ದಾಪುರ ಗ್ರಾಮದ ಸಿದ್ದಾಪುರ ಬಳಿ ತಡರಾತ್ರಿ ಈ ಭೀಕರ ರಸ್ತೆ ಅಪಘಾತ ಸಂಭವಿಸಿದ್ದು, ನಾಲ್ವರು ಸಾವನ್ನಪ್ಪಿದ್ದಾರೆ. ವಿಶ್ವನಾಥ್ ಕಂಬಾರ್ (17), ಪ್ರವೀಣ್ ಶೇಡಬಾಳ್ (22), ಗಣೇಶ ಅಳ್ಳಿಮಟ್ಟಿ (20), ಪ್ರಜ್ವಲ್ ಶೇಡಬಾಳ್ (17) ಮೃತ ದುರ್ದೈವಿಗಳು. ಮೃತರೆಲ್ಲರೂ ಸಿದ್ದಾಪುರ ಗ್ರಾಮದ ನಿವಾಸಿಗಳು ಎಂದು ಗುರುತಿಸಲಾಗಿದೆ. ಅಪಘಾತದಲ್ಲಿ ಸಾವನ್ನಪ್ಪಿದವರ ಮೃತದೇಹವನ್ನ ಜಮಖಂಡಿ ಸರ್ಕಾರಿ ಆಸ್ಪತ್ರೆಗೆ ಇರಿಸಲಾಗಿದ್ದು, ಸಿದ್ದಾಪುರ ಗ್ರಾಮದಿಂದ ಸ್ನೇಹಿತರು ತಡರಾತ್ರಿ ಶಿರೋಳ ಕಾಡಸಿದ್ಧೇಶ್ವರ ದೇವರ ಜಾತ್ರೆಗೆ ಹೋಗುತ್ತಿದ್ದ ಸಂದರ್ಭದಲ್ಲಿ ಘಟನೆ ನಡೆದಿದೆ.



# ರಾಶಿ ಭವಿಷ್ಯ

## ಮೇಷ ರಾಶಿ

ಗಾಯಗೊಳ್ಳುವುದನ್ನು ತಪ್ಪಿಸಲು ಕುಳಿತುಕೊಳ್ಳುವಾಗ ವಿಶೇಷ ಕಾಳಜಿ ವಹಿಸಿ. ಅಲ್ಲದೇ ಒಳ್ಳೆಯ ನಿಲುವು ಕೇವಲ ನಿಮ್ಮ ವ್ಯಕ್ತಿತ್ವವನ್ನು ವೃದ್ಧಿಸುವುದಷ್ಟೇ ಅಲ್ಲದೇ ಆರೋಗ್ಯ ಮತ್ತು ವಿಶ್ವಾಸಾರ್ಹತೆಯನ್ನು ಅಭಿವೃದ್ಧಿಪಡಿಸುವಲ್ಲೂ ಪ್ರಮುಖ ಪಾತ್ರ ವಹಿಸುತ್ತದೆ. ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ.

## ವೃಷಭ ರಾಶಿ

ನೀವು ಚೈತನ್ಯದಿಂದ ತುಂಬಿರುತ್ತೀರಿ ಮತ್ತು ಇಂದು ಅಸಾಮಾನ್ಯವಾದದ್ದೇನಾದರೂ ಸಾಧಿಸುತ್ತೀರಿ. ನಿಮ್ಮ ಹೆಚ್ಚುವರಿ ಹಣವನ್ನು ಒಂದು ಸುರಕ್ಷಿತ ಸ್ಥಳದಲ್ಲಿರಿಸಿ ಹಾಗೂ ಇದು ಮುಂದಿನ ಕಾಲದಲ್ಲಿ ನಿಮಗೆ ಒಳ್ಳೆಯ ಆದಾಯ ತರುತ್ತದೆ. ಕುಟುಂಬದ ಸದಸ್ಯರ ಅಗತ್ಯಗಳಿಗೆ ಆದ್ಯತೆ ನೀಡಿ. ನೀವು ಅವರ ಸಲುವಾಗಿ ಕಾಳಜಿ ತೆಗೆದುಕೊಳ್ಳುತ್ತೀರೆಂದು ಅವರಿಗೆ ಅರ್ಥವಾಗುವ ಹಾಗೆ ಅವರ ಸಂತೋಷವನ್ನು ಹಂಚಿಕೊಳ್ಳಿ.

## ಮಿಥುನ ರಾಶಿ

ಒಬ್ಬ ಸಂತನಿಂದ ಆಧ್ಯಾತ್ಮಿಕ ಜ್ಞಾನ ಸಾಂತ್ವನ ಮತ್ತು ಆರಾಮವನ್ನು ಒದಗಿಸುತ್ತದೆ. ನೀವು ನಿಮ್ಮ ತಂತ್ರಗಳನ್ನು ಅಳವಡಿಸಿದಲ್ಲಿ ಇಂದು ಸ್ವಲ್ಪ ಹೆಚ್ಚುವರಿ ಹಣ ಸಂಪಾದಿಸುತ್ತೀರಿ. ನಿಮ್ಮ ಅತಿಯಾದ ಜೀವನಶೈಲಿ ಮನೆಯಲ್ಲಿ ಆತಂಕ ಸೃಷ್ಟಿಸಬಹುದು ಆದ್ದರಿಂದ ತಡರಾತ್ರಿಯನ್ನು ಹಾಗೂ ಇತರರ ಮೇಲೆ ಬಹಳ ಖರ್ಚು ಮಾಡುವುದನ್ನು ತಪ್ಪಿಸಿ.

## ಕರ್ಕ ರಾಶಿ

ನೀವು ಸಾಮಾನ್ಯವಾಗಿ ಇರುವುದಕ್ಕಿಂತ ಕಡಿಮೆ ಚೈತನ್ಯವನ್ನು ಇಂದು ಕಾಣುತ್ತೀರಿ ನಿಮ್ಮ ಮೇಲೆ ನೀವೇ ಹೆಚ್ಚುವರಿ ಕೆಲಸಕ್ಕೆ ಒತ್ತಡ ಹೇರಬೇಡಿ – ಸ್ವಲ್ಪ ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ನಿಮ್ಮ ಕೆಲಸಗಳನ್ನು ಇನ್ನೊಂದು ದಿನಕ್ಕೆ ವರ್ಗಾಯಿಸಿ. ಇಂದು ನಿಮ್ಮ ತಂದೆ ತಾಯಿಯರಲ್ಲಿ ಯಾರಾದರೂ ಒಬ್ಬರು ಹಣವನ್ನು ಸಂಗ್ರಹಿಸುವ ಬಗ್ಗೆ ಉಪನ್ಯಾಸಗಳನ್ನು ನೀಡಬಹುದು, ನೀವು ಅವರ ಮಾತುಗಳನ್ನು ಬಹಳ ಗಮನವಾಗಿ ಕೇಳಬೇಕಾದ ಅಗತ್ಯವಿದೆ. ಇಲ್ಲದಿದ್ದರೆ ಮುಂಬರುವ ಸಮಯದಲ್ಲಿ ನೀವೇ ತೊಂದರೆಗೊಳಗಾಗಬಹುದು.

## ಸಿಂಹ ರಾಶಿ

ಅನಗತ್ಯ ಆಲೋಚನೆಗಳು ನಿಮ್ಮ ಮನಸ್ಸನ್ನು ಆವರಿಸಬಹುದು. ಖಾಲಿ ಮೆದುಳು ದೆವ್ವಗಳ ಕಾರ್ಖಾನೆಯಾದ್ದರಿಂದ ದೈಹಿಕ ವ್ಯಾಯಾಮದಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಲು ಪ್ರಯತ್ನಿಸಿ. ನಿಮ್ಮ ತಾಯಿ ಅಥವಾ ತಂದೆಯ ಆರೋಗ್ಯಕ್ಕಾಗಿ ನೀವು ಇಂದು ಸಾಕಷ್ಟು ಹಣವನ್ನು ಖರ್ಚು ಮಾಡಬೇಕಾಗಬಹುದು. ಇದು ನಿಮ್ಮ ಹಣಕಾಸಿನ ಸ್ಥಿತಿಯನ್ನು ಹದಗೆಡಿಸುತ್ತದೆ ಆದರೆ ಸಂಬಂಧವನ್ನು ಬಲಪಡಿಸುತ್ತದೆ.

## ಕನ್ಯಾ ರಾಶಿ

ನಿಮ್ಮ ಸಂಗಾತಿಯ ನಿಷ್ಠಾವಂತ ಹೃದಯ ಮತ್ತು ಅದ್ಭುತ ಚೈತನ್ಯ ನಿಮಗೆ ಸಂತೋಷ ನೀಡಬಹುದು. ಇಲ್ಲಿಯವರೆಗೆ ಅನಗತ್ಯವಾಗಿ ಹಣವನ್ನು ಖರ್ಚು ಮಾಡುತ್ತಿದ್ದವರು ಜೀವನದಲ್ಲಿ ಹಣದ ಪ್ರಾಮುಖ್ಯತೆ ಏನು ಎಂಬುದನ್ನು ಅರ್ಥಮಾಡಿಕೊಳ್ಳಬಹುದು ಏಕೆಂದರೆ ಇಂದು ಇದ್ದಕ್ಕಿದ್ದಂತೆ ನಿಮಗೆ ಹಣದ ಅಗತ್ಯವಿರುತ್ತದೆ ಮತ್ತು ನಿಮಗೆ ಸಾಕಷ್ಟು ಹಣವಿರುವುದಿಲ್ಲ. ನಿಮ್ಮ ಪ್ರಯತ್ನಗಳು ಹಾಗೂ ನಿಮ್ಮ ಕುಟುಂಬದ ಸದಸ್ಯರು ಒದಗಿಸಿದ ಬೆಂಬಲದ ಫಲವಾದ ಯಶಸ್ಸು ಮತ್ತು ಸಂತೋಷವನ್ನು ಆನಂದಿಸಲು ಈಗ ಒಂದು ಒಳ್ಳೆಯ ಸಮಯ.

## ತುಲಾ ರಾಶಿ

ಗಾಳಿಗೊಡ್ಡಿದ ಆಹಾರ ನಿಮಗೆ ಅನಾರೋಗ್ಯ ತರಬಹುದಾದ್ದರಿಂದ ಅವುಗಳನ್ನು ತಿನ್ನಬೇಡಿ. ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯ ನ್ಯಾಯಾಲಯ ಪ್ರಕರಣದಲ್ಲಿ ಸಿಲುಕಿಕೊಂಡಿದ್ದರೆ, ಇಂದು ನೀವು ಅದರಲ್ಲಿ ವಿಜಯವನ್ನು ಪಡೆಯಬಹುದು ಮತ್ತು ನೀವು ಹಣದ ಲಾಭವನ್ನು ಪಡೆಯಬಹುದು. ನಿಮ್ಮ ಮನೆಯ ಪರಿಸ್ಥಿತಿ ಸ್ವಲ್ಪ ಅನಿರೀಕ್ಷಿತವಾಗಿರುತ್ತದೆ. ಇಂದು ನಿಮ್ಮ ಪ್ರಿಯತಮೆಗೆ ತೀರ ಮಧುರವಾದಂಥದ್ದನ್ನು ಹೇಳಬೇಡಿ.

## ವೃಶ್ಚಿಕ ರಾಶಿ

ಮಾನಸಿಕ ಶಾಂತಿಗಾಗಿ ಕೆಲವು ದಾನ ಧರ್ಮಗಳಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ಹಣಕಾಸಿನಲ್ಲಿ ಸುಧಾರಣೆ ನೀವು ಅಗತ್ಯ ವಸ್ತುಗಳನ್ನು ಖರೀದಿಸುವುದನ್ನು ಅನುಕೂಲಕರವಾಗಿಸುತ್ತದೆ. ಮನೆಯ ಚಟುವಟಿಕೆಗಳಲ್ಲಿ ತೊಡಗಿಕೊಂಡಿರಿ. ಅದೇ ಸಮಯದಲ್ಲಿ ಈ ಲಯವನ್ನು ಮುಂದುವರಿಸಲು ಮತ್ತು ನಿಮ್ಮ ದೇಹವನ್ನು ಚೈತನ್ಯದಾಯಕವಾಗಿರಿಸಲು ಮನರಂಜನಾ ಚಟುವಟಿಕೆಗಳಲ್ಲಿ ಸ್ವಲ್ಪ ಸಮಯ ಕಳೆಯಿರಿ.

## ಧನು ರಾಶಿ

ಉತ್ತಮ ಆರೋಗ್ಯ ಕ್ರೀಡಾ ಸ್ಪರ್ಧೆಯಲ್ಲಿ ಭಾಗವಹಿಸಲು ನಿಮ್ಮನ್ನು ಸಕ್ರಿಯಗೊಳಿಸುತ್ತದೆ. ನೀವು ನಿಮ್ಮ ಇಂದಿನ ದಿನವನ್ನು ಉತ್ತಮಗೊಳಿಸಲು ಕಳೆದ ದಿನಗಳಲ್ಲಿ ಹಣವನ್ನು ಹೂಡಿಕೆ ಮಾಡಿದ್ದರೆ, ಅದರ ಪ್ರಯೋಜನವನ್ನು ಇಂದು ನೀವು ಪಡೆಯಬಹುದು. ನಿಮ್ಮ ಜ್ಞಾನ ಮತ್ತು ಒಳ್ಳೆಯ ಹಾಸ್ಯ ನಿಮ್ಮ ಬಳಿಯಿರುವ ಜನರನ್ನು ಆಕರ್ಷಿಸಬಹುದು. ನಿಮ್ಮ ಪ್ರೇಮಿಯನ್ನು ಭೇಟಿ ಮಾಡುತ್ತಿದ್ದ ಹಾಗೆ ನಿಮ್ಮ ಮನಸ್ಸನ್ನು ಪ್ರಣಯ ಆವರಿಸಿಕೊಳ್ಳುತ್ತದೆ.

## ಮಕರ ರಾಶಿ

ನಿಮ್ಮ ಚೈತನ್ಯವನ್ನು ಹೆಚ್ಚಿಸಲು ನಿಮ್ಮ ಮನಸ್ಸಿನಲ್ಲಿ ಒಂದು ಪ್ರಕಾಶಮಾನವಾದ ಸುಂದರವಾದ ಮತ್ತು ಅದ್ಭುತವಾದ ಚಿತ್ರವನ್ನು ಕಲ್ಪಿಸಿಕೊಳ್ಳಿ. ನೀವು ಇಂದು ಗಣನೀಯ ಪ್ರಮಾಣದ ಹಣವನ್ನು ಸಹ ಹೊಂದಿರುತ್ತೀರಿ ಮತ್ತು ಅದರೊಂದಿಗೆ ಮನಸ್ಸಿನ ಶಾಂತಿ ಇರುತ್ತದೆ. ನಿಮ್ಮ ಮಕ್ಕಳ ಜೊತೆ ಒಂದು ಆರರೋಗ್ಯಕರ ಸಂಬಂಧವನ್ನು ಉತ್ತೇಜಿಸಿ. ಕಳೆದದ್ದನ್ನು ಮರೆತುಬಿಡಿ ಹಾಗೂ ಪ್ರಖರವಾದ ಹಾಗೂ ಸಂತಸದ ಸಮಯಗಳನ್ನು ಎದುರುನೋಡಿ. ನಿಮ್ಮ ಪ್ರಯತ್ನ ಸಫಲವಾಗುತ್ತದೆ.

## ಕುಂಭ ರಾಶಿ

ನಿಮ್ಮ ಆಹಾರವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ ಮತ್ತು ಫಿಟ್ ಆಗಿ ಉಳಿಯಲು ವ್ಯಾಯಾಮ ಮಾಡಿ. ಹೆಚ್ಚು ಖರೀದಿಸಲು ಧಾವಿಸುವ ಮೊದಲು ನೀವು ಈಗಾಗಲೇಹೊಂದಿರುವುದನ್ನು ಬಳಸಿ. ಬಿಕ್ಕಟ್ಟಿನ ಸಮಯದಲ್ಲಿ ನಿಮಗೆ ಸಹಾಯ ಮಾಡಿದ ಸಂಬಂಧಿಗಳಿಗೆ ನಿಮ್ಮ ಕೃತಜ್ಞತೆಯನ್ನು ವ್ಯಕ್ತಪಡಿಸಿ. ನಿಮ್ಮ ಸಣ್ಣ ಕೃತಜ್ಞತೆ ಅವರಿಗೆ ಚೈತನ್ಯ ನೀಡುತ್ತದೆ. ಕೃತಜ್ಞತೆ ಜೀವನದ ಸೊಗಸನ್ನು ಹೆಚ್ಚಿಸುತ್ತದೆ ಮತ್ತು ಕೃತಘ್ನತೆ ಅದಕ್ಕೆ ಕಲೆಗಳನ್ನು ಹಚ್ಚುತ್ತದೆ.

## ಮೀನ ರಾಶಿ

ಸ್ನೇಹಿತರೊಂದಿಗಿನ ಸಂಜೆ ಆಹ್ಲಾದಕರವಾಗಿದ್ದರೂ ಆದರೆ ವಿಪರೀತವಾಗಿ ತಿನ್ನುವುದು ನಿಮ್ಮ ಮರುದಿನದ ಮುಂಜಾನೆಗೆ ಅಸಮಾಧಾನವುಂಟುಮಾಡಬಹುದು. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ಮನರಂಜನೆ ಇಡೀ ಕುಟುಂಬವನ್ನು ಒಳಗೊಂಡಿದ್ದಲ್ಲಿ ಅದು ಮೋಜಿನ ವಿಷಯವಾಗಿರುತ್ತದೆ.

# ಕನಿಷ್ಠ 12 ಕ್ವಿಂಟಲ್ ಗರಿಷ್ಠ 20 ಕ್ವಿಂಟಲ್ ಮೆಕ್ಕೆಜೋಳ ಬೆಂಬಲ ಬೆಲೆಯಡಿ ಖರೀದಿ : ಸಚಿವ ಎಚ್‌.ಕೆ. ಪಾಟೀಲ

**ಗದಗ : (ಮುಳಗುಂದ)** : ಬೆಂಬಲ ಬೆಲೆಯಡಿ ಪ್ರತಿ ರೈತನಿಂದ 5 ಕ್ವಿಂಟಾಲ ಮೆಕ್ಕೆಜೋಳವನ್ನು ಖರೀದಿ ಮಾಡಲು ನಿರ್ಧರಿಸಿತ್ತು ಈ ಆದೇಶವನ್ನು ಪರಿಷ್ಕರಣೆ ಮಾಡಿ ರಾಜ್ಯ ಸರ್ಕಾರ ಕನಿಷ್ಠ 12 ರಿಂದ ಗರಿಷ್ಠ 20 ಕ್ವಿಂಟಲ್ ಮೆಕ್ಕೆಜೋಳ ವನ್ನು ಬೆಂಬಲ ಬೆಲೆಯಡಿ ಪ್ರತಿ ಕ್ವಿಂಟಲ್ ಗೆ 2400 ರೂಗಳಂತೆ ಖರೀದಿಸಲು ಪ್ರಾರಂಭಿಸಲಾಗುವುದು ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್‌.ಕೆ. ಪಾಟೀಲ ಅವರು ಹೇಳಿದರು.



ಗದಗ ಜಿಲ್ಲೆಯ ಮುಳಗುಂದ ಸಮೀಪದ ಕಣವಿ ಗ್ರಾಮದಲ್ಲಿ ಮಂಗಳವಾರ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಿ ಸಚಿವರು ಮಾತನಾಡಿದರು.

ಈಗಾಗಲೇ ಗದಗ ತಾಲೂಕು ಮಲಸಮುದ್ರ ಗ್ರಾಮದಲ್ಲಿ ಧಾರವಾಡ ಹಾಲು ಒಕ್ಕೂಟದ ಹಾಲು ಸಂಗ್ರಹಣ ಕೇಂದ್ರದಲ್ಲಿ ಮೆಕ್ಕೆಜೋಳ ಖರೀದಿ ನೋಂದಣಿ ಪ್ರಕ್ರಿಯೆ ಮಂಗಳವಾರ ಪ್ರಾರಂಭಿಸಲಾಗಿದೆ ಎಂದರು.

ಪ್ರಸಕ್ತ ವರ್ಷ ರಾಜ್ಯದಲ್ಲಿ ಅಂದಾಜು 55 ಲಕ್ಷ ಮೆಟ್ರಿಕ್ ಟನ್ ಮೆಕ್ಕೆಜೋಳ ಬಿತ್ತನೆ ಮಾಡಿ ಬೆಳೆ ಬೆಳೆದಿದ್ದು ಈ ಖರೀದಿ ಪ್ರಕ್ರಿಯೆಯನ್ನು ಹೇಗೆ ಮಾಡಬೇಕೆಂಬುದು ಸರಕಾರಕ್ಕೆ ಒಂದು ದೊಡ್ಡ ಸವಾಲಾಗಿತ್ತು. ರೈತರ ನೆರವಿಗೆ ಸರ್ಕಾರ ಹೇಗಾದರೂ ಮಾಡಿ ಸ್ಪಂದಿಸಬೇಕು ಎಂಬ ಉದ್ದೇಶದಿಂದ ಪ್ರತಿ ರೈತನಿಂದ ಕನಿಷ್ಠ 12 ಕ್ವಿಂಟಲ್ ಗರಿಷ್ಠ 20 ಕ್ವಿಂಟಲ್ ಬೆಂಬಲ ಬೆಲೆಯಡಿ ಮೆಕ್ಕೆಜೋಳ ಖರೀದಿ ಮಾಡಲಾಗುವುದು ಎಂದರು.

ಕಣವಿ ಗ್ರಾಮದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕ್ರೀಡಾ ಮೈದಾನ ಹಾಗೂ ಹೈ ಮಾಸ್ಕ್ ವಿದ್ಯುತ ದೀಪ ಉದ್ಘಾಟಿಸಲಾಯಿತು. ಕ್ರೀಡಾಕೂಟದಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ವಿತರಿಸಲಾಯಿತು. ಅಂದಾಜು 16 ಲಕ್ಷ ರೂಗಳ ವೆಚ್ಚದಲ್ಲಿ ನಿರ್ಮಾಣವಾದ ಗ್ರಾಮ ಪಂಚಾಯಿತಿ ಉಪಕಾರ್ಯಾಲಯವನ್ನು ಸಚಿವರಾದ ಹೆಚ್ ಕೆ ಪಾಟೀಲ ಉದ್ಘಾಟಿಸಿದರು.

ಗ್ರಾಮದ ಹೈಸ್ಕೂಲ್ ಮೈದಾನದಲ್ಲಿ 41 ಲಕ್ಷ ರೂಗಳ ವೆಚ್ಚದಲ್ಲಿ ಮೂರು ಕೊಠಡಿಗಳನ್ನು ಉದ್ಘಾಟಿಸಲಾಯಿತು. ಅಂದಾಜು 18 ಲಕ್ಷ ರೂಗಳ ವೆಚ್ಚದಲ್ಲಿ ನಿರ್ಮಾಣವಾದ

ಅಂಬೇಡ್ಕರ್ ಭವನ ಉದ್ಘಾಟನೆಯನ್ನು ಇದೇ ಸಂದರ್ಭದಲ್ಲಿ ನೆರವೇರಿಸಲಾಯಿತು.

ಅಂದಾಜು 33 ಲಕ್ಷ ರೂಗಳ ವೆಚ್ಚದಲ್ಲಿ ನಿರ್ಮಾಣವಾದ ಹಳ್ಳಿ ಗ್ರಾಮೀಣ ಸಂತೆ ಕಟ್ಟಡದ ಉದ್ಘಾಟನೆ ನೆರವೇರಿಸಲಾಯಿತು, ರಂಗ ಮಂದಿರ ಹಾಗೂ ನಾಟಕ ಮನೆಯನ್ನು ಇದೇ ಸಂದರ್ಭದಲ್ಲಿ ಉದ್ಘಾಟಿಸಲಾಯಿತು.

ವಿಪ ಶಾಸಕರಾದ ಎಸ್ ವಿ ಶಂಕನೂರ ಅವರ ಅನುದಾನದಲ್ಲಿ ನಿರ್ಮಾಣವಾದ ಶುದ್ಧ ಕುಡಿಯುವ ನೀರು ಘಟಕವನ್ನು ಇದೇ ಸಂದರ್ಭದಲ್ಲಿ ಉದ್ಘಾಟಿಸಲಾಯಿತು.

ಈ ಸಂದರ್ಭದಲ್ಲಿ ವಿಪ ಶಾಸಕರಾದ ಎಸ್. ವಿ. ಸಂಕನೂರ, ಜಿಪಂ ಮಾಜಿ ಅಧ್ಯಕ್ಷರಾದ ಸಿದ್ದು ಪಾಟೀಲ, ಗ್ರಾ ಪಂ ಅಧ್ಯಕ್ಷೆ ಹಾಲವ್ವ ಕುರಿ, ಉಪಾಧ್ಯಕ್ಷೆ ರೇಣವ್ವ ತಳವಾರ, ಗದಗ ತಾಪಂ ಮಾಜಿ ಅಧ್ಯಕ್ಷರಾದ ಶರಣ ಬಸನಗೌಡ ಪಾಟೀಲ, ಬಾಬುಸಾಬ ಕಿಲ್ಲೆದಾರ, ಬಸವರಾಜ ಬಂದಕ್ಕನವರ, ಪರಪ್ಪ ಕೋಳಿವಾಡ, ಯಲ್ಲಪ್ಪ ಕೋರಿ ಪ್ರಕಾಶ ಕುರ್ತಕೋಟಿ, ಗಂಗಣ್ಣ ಗಡಾದ, ಕೃಷ್ಣ ನಾಗಲೋಟಿ, ಎಸ್. ವಾಯ್. ಕೋರಿ, ಶರೀಫ ದೊಡ್ಮನಿ, ಅಕ್ಕಮಹಾದೇವಿ ಬಳಿಗಾರ, ಪಾರವ್ವ ಕುರ್ತುಕೋಟಿ, ಮಂಜುನಾಥ ಕೋರಿ, ಶಂಕ್ರಪ್ಪ ಕೋಳಿವಾಡ, ಪ್ರಭು ಹುಡೆದ, ಬಿ.ಟಿ. ಸೋಮರಡ್ಡಿ, ಶಿವಾನಂದ ಮಾದಣ್ಣವರ, ನಿಂಗಪ್ಪ ಛಲವಾದಿ ಮತ್ತಿತರರು ಇದ್ದರು.

## ಗ್ರಾಮೀಣ ಬದುಕು ಅಭಿವೃದ್ಧಿಯಿಂದ ಹಸನಾಗಲಿ

**ಮುಳಗುಂದ:** ಗ್ರಾಮೀಣ ಜನರ ಜೀವನದಲ್ಲಿ ಸಾಮಾಜಿಕವಾಗಿ ಹಾಗೂ ಶೈಕ್ಷಣಿಕವಾಗಿ ಸರ್ಕಾರದಿಂದ ನೀಡಿರುವ ಎಲ್ಲ ಸವಲತ್ತುಗಳನ್ನು ಸದುಪಯೋಗಪಡಿಸಿಕೊಂಡು ಅಭಿವೃದ್ಧಿ ಕಾರ್ಯಗಳನ್ನು ಬೆಳವಣಿಗೆಗೆ ಊರುಗೋಲನ್ನಾಗಿಸಿ ಜನರ ಬದುಕು ಒಟ್ಟಾರೆ ಹಸನಾಗಬೇಕು ಅಂದಾಗ ಮಾತ್ರ ಮಹಾತ್ಮ ಗಾಂಧಿಜಿಯವರು ಕಂಡ ರಾಮ ರಾಜ್ಯದ ಕನಸು ನನಸಾಗಿಸುವ ನಿಟ್ಟಿನಲ್ಲಿ ಸರ್ಕಾರ ವಿಶೇಷ ಅವಕಾಶಗಳನ್ನು, ಅನುದಾನವನ್ನು ನೀಡಿ ಪ್ರೋತ್ಸಾಹಿಸುತ್ತಿದೆ ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್‌.ಕೆ. ಪಾಟೀಲ ಹೇಳಿದರು.

ಕಣಿವಿ ಗ್ರಾಮದಲ್ಲಿ ಮಂಗಳವಾರ ನೂತನ ಗ್ರಾಮ ಪಂಚಾಯಿತಿ ಉಪಕಾರ್ಯವನ್ನು ಉದ್ಘಾಟಿಸಿ ಮಾತನಾಡಿದ ಅವರು ಸಮಾಜದ ಕಟ್ಟ ಕಡೆಯ ವ್ಯಕ್ತಿಯು ಉತ್ತಮವಾಗಿ ಬದುಕಬೇಕು ಆ ನಿಟ್ಟಿನಲ್ಲಿ ಸರ್ಕಾರದ ವಿವಿಧ ಯೋಜನೆಗಳು ಜನರ ಮನೆ ಬಾಗಿಲಿಗೆ ತಲುಪುತ್ತಿದ್ದು ಪ್ರತಿಯೊಬ್ಬರೂ ಜವಾಬ್ದಾರಿಯುತವಾಗಿ ಯೋಜನೆಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.

# ನಶಾಮುಕ್ತ ಭಾರತ ಹಾಗೂ ಅಂಗಾಂಗ ದಾನ ಅಭಿಯಾನ

**ಚಿತ್ರದುರ್ಗ:** ನಶಾಮುಕ್ತ ಭಾರತ ಮತ್ತು ಅಂಗಾಂಗ ವಾಸ ಅಭಿಯಾನ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದೊಂದಿಗೆ ಸಂಯೋಜನೆಗೊಂಡಿರುವ ಚಿತ್ರದುರ್ಗ ಜಿಲ್ಲೆಯ ಎಲ್ಲಾ ಮಹಾವಿದ್ಯಾಲಯದೊಂದಿದೆ ಹಮ್ಮಿಕೊಂಡಿರುವ ನಶಾಮುಕ್ತ ಭಾರತ ಹಾಗೂ ಅಂಗಾಂಗ ದಾನ ಅಭಿಯಾನ ಮತ್ತು ಜಾಥಾ(ವಾಕಥಾನ್) ಕಾರ್ಯಕ್ರಮ ಡಿ. 3ರ ಬುಧವಾರ ಚಿತ್ರದುರ್ಗ ನಗರದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಖಾಸಗಿ ನರ್ಸಿಂಗ್ ಕಾಲೇಜುಗಳ ಒಕ್ಕೂಟದ ಕಾರ್ಯದರ್ಶಿ ಹೆಚ್. ಶ್ರೀನಿವಾಸ್ ತಿಳಿಸಿದ್ದಾರೆ.




ಚಿತ್ರದುಗರ್ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಈ ಹಿಂದೆ ಡ್ರಗ್ಸ್ ಮೆಡಿಕಲ್ ಕಾಲೇಜುಗಳಲ್ಲಿ ಮಾತ್ರ ಇತು ಆದರೆ ಇಂದಿನ ದಿನದಲ್ಲಿ ಇದು ಕಾಲೇಜುಗಲ ಹಂತಕ್ಕೆ ಬಂದಿದೆ ಇದರ ಬಗ್ಗೆ ವಿದ್ಯಾರ್ಥಿಗಳಲ್ಲಿ ಜಾಗೃತಿಯನ್ನು ಮೂಡಿಸಬೇಕಿದೆ ಇದ್ದಲ್ಲದೆ ಸಾರ್ವಜನಿಕರಲ್ಲಿ ಅಂಗಾಂಗ ದಾನದ ಬಗ್ಗೆ ಮಾಹಿತಿಯನ್ನು ನೀಡಿ ಜಾಗೃತಿಯನ್ನು ಮೂಡಿಸಬೇಕಿದೆ ಎಂದರು.

ಡಿ 3ರ ಬೆಳಿಗ್ಗೆ 8.30 ಗಂಟೆಯಿಂದ, ಗಾಂಧಿ ಸರ್ಕಲ್ ನಿಂದ ಜಾಥಾ ಪ್ರಾರಂಭವಾಗಿ ಜಿಲ್ಲಾಧಿಕಾರಿಗಳ ಕಚೇರಿ ವೃತ್ತದಲ್ಲಿ ಅಂತ್ಯವಾಗಲಿದೆ 10 ಗಂಟೆಯಿಂದ ಸಭಾ ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯವನ್ನು ಸದ್ಗುರು ಕಬೀರಾನಂದ ಸ್ವಾಮಿ ಮಠದ ಶ್ರೀ ಶಿವಲಿಂಗಾನಂದ ಸ್ವಾಮಿಗಳು, ಮಾದಾರ ಚೆನ್ನಯ್ಯ ಗುರುಪೀಠದ ಬಸವಮೂರ್ತಿ ಮಾದಾರ ಚೆನ್ನಯ್ಯ ಸ್ವಾಮಿಗಳು ಹಾಗೂ ಎಸ್.ಜೆ.ಎಂ. ವಿದ್ಯಾಪೀಠದ ಆಡಳಿತ ಮಂಡಳಿ ಸದಸ್ಯರಾದ ಡಾ॥ ಬಸವಕುಮಾರ ಸ್ವಾಮಿಗಳು ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಶಾಸಕರುಗಳಾದ ಡಾ॥ ಎಂ. ಚಂದ್ರಪ್ಪ ಕೆ.ಎಸ್. ನವೀನ್, ಅಪರ ಜಿಲ್ಲಾಧಿಕಾರಿಗಳು, ಬಿ.ಟಿ. ಕುಮಾರಸ್ವಾಮಿ, ಸೂಪರಿಂಟೆಂಡೆಂಟ್ ಆಫ್ ಪೊಲೀಸ್ ರಂಜಿತ್ ಕುಮಾರ್ ಬಂಡಾರು, ಬಸವೇಶ್ವರ ವೈದ್ಯಕಿಯ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ॥ ಪ್ರಶಾಂತ್ ಜಿ. ಚಿತ್ರದುರ್ಗ ಇನ್ಸ್ ಸ್ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸನ ನಿರ್ದೇಶಕರಾದ ಡಾ॥ ಯುವರಾಜ್ ವಿ. ಚಿತ್ರದುರ್ಗ ಭಾರತೀಯ ವೈದ್ಯಕಿಯ ಸಂಘದ ಅಧ್ಯಕ್ಷರಾದ ಡಾ. ಪಾಲಾಕ್ಷಯ್ಯ ಎಲ್. ರಾಜೀವ್ ಗಾಂಧಿ ವಿಶ್ವವಿದ್ಯಾಲಯದ ಮಾಜಿ ಸಿಂಡಿಕೇಟ್ ಸದಸ್ಯರಾದ ಡಾ॥ ವೆಂಕಟಗಿರಿ ಕೆ ಹಾಗೂ ರೇಡಿಯೋಲಜಿಸ್ಟ್ ಡಾ॥ಸಿದ್ದಾಗುಂಡಾರ್ಪಿ ಭಾಗವಹಿಸಲಿದ್ದಾರೆ.

ಬೆಳಿಗ್ಗೆ ನಡೆಯುವ ಜಾಥಾ ಹಾಗೂ ಕಾರ್ಯಕ್ರಮದಲ್ಲಿ ಚಿತ್ರದುರ್ಗದಲ್ಲಿನ ನರ್ಸಿಂಗ್, ಮೆಡಿಕಲ್, ಆರ್ಯುವೇದ ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ.

ಗೋಷಟಿಯಲ್ಲಿ ಜಿಲ್ಲಾ ಖಾಸಗಿ ನರ್ಸಿಂಗ್ ಕಾಲೇಜಾಗಳ ಒಕ್ಕೂಟದ ಅಧ್ಯಕ್ಷರಾದ ಡಾ. ಪಿ.ವಿ. ಶ್ರೀಧರಮೂರ್ತಿ, ರಂಗಪ್ಪ ರೆಡ್ಡಿ, ಮಹಾಂತೇಶ್, ಸಂತೋಷ್, ಡಾ.ಸವಿತಾ, ವೆಂಕಟೇಶ ರೆಡ್ಡಿ, ಸಂತೋಷ್, ಸೇರಿದಂತೆ ಇತರರು ಭಾಗವಹಿಸಿದ್ದರು.

# ನೋಟರಿಯಾಗಿ ನೇಮಕ



**ಗದಗ:** ತಾಲ್ಲೂಕಿನ ತಿಮ್ಮಾಪೂರ ಗ್ರಾಮದ ನಿವಾಸಿ, ವಕೀಲರಾದ ಸುರೇಶ ಬಿಸನಳ್ಳಿ ಅವರು ನೋಟರಿಯಾಗಿ ನೇಮಕಗೊಂಡಿದ್ದಾರೆ.

ಸುರೇಶ ಬಿಸನಳ್ಳಿ ಅವರು ಕಳೆದ ಹನ್ನೆರಡು ವರ್ಷಗಳಿಂದ ಗದಗನಲ್ಲಿ ವಕೀಲರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಇದೀಗ ಕರ್ನಾಟಕ ರಾಜ್ಯ ಸರ್ಕಾರವು ಅವರನ್ನು ನೋಟರಿಯಾಗಿ ನೇಮಕ ಮಾಡಿದೆ.

ಅಭಿನಂದನೆ: ನೂತನವಾಗಿ ನೋಟರಿಯಾಗಿ ನೇಮಕಗೊಂಡ ಸುರೇಶ ಬಿಸನಳ್ಳಿ ಅವರಿಗೆ ಜಿಲ್ಲಾ ಉಸ್ತುವಾರಿ ಸಚಿವ ಎಚ್‌.ಕೆ. ಪಾಟೀಲ, ರೋಣ ಶಾಸಕರಾದ ಜಿ.ಎಸ್. ಪಾಟೀಲ, ಗದಗ ಜಿಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ವಿ.ಆರ್. ಗುಡಿಸಾಗರ, ಗದಗ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಆರ್.ಜಿ. ಕಲ್ಲೂರ, ನ್ಯಾಯವಾದಿ ಹಾಗೂ ಕರ್ನಾಟಕ ವಕೀಲರ ಪರಿಷತ್‌ನ ವಕೀಲರ ಕಲ್ಯಾಣ ನಿಧಿ ಸದಸ್ಯ ಎಸ್.ಕೆ. ನದಾಫ ಸೇರಿ ಎಲ್ಲ ಹಿರಿಯ-ಕಿರಿಯ ನ್ಯಾಯವಾದಿಗಳು ಅಭಿನಂದಿಸಿದ್ದಾರೆ.

# ಒಂದು ದಿನದ ರಾಜ್ಯಮಟ್ಟದ ವಿಚಾರ ಸಂಕಿರಣ

**ದಾವಣಗೆರೆ** : ಗಾಂಧೀಜಿ ಅವರ ಆತ್ಮಕಥೆ ನೂರರ ಸಂಭ್ರಮ ಯುವ ಜನತೆಗೆ ಗಾಂಧೀಜಿಯವರ ವಿಚಾರ ಪ್ರಸ್ತುತತೆ ಒಂದು ದಿನದ ರಾಜ್ಯಮಟ್ಟದ ವಿಚಾರ ಸಂಕಿರಣ.

ಕಾರ್ಯಕ್ರಮದ ಉದ್ಘಾಟನೆಯನ್ನು ರುದ್ರಪ್ಪ ಹನಗವಾಡಿ ನಿವೃತ್ತ ಹಿರಿಯ ಕೆಎಎಸ್ ಅಧಿಕಾರಿ ಮತ್ತು ಪ್ರೊ.ಬಿ ಕೃಷ್ಣಪ್ಪ ಟ್ರಸ್ಟ ಟ್ರಸ್ಟಿ ರವರು ನೆರವೇರಿಸುವರು.

ಉಪಸ್ಥಿತಿ: ಡಾ. ಅಶೋಕ್ ಕುಮಾರ್ ವೀ ಪಾಳೇದ ಸಂಯೋಜನಾಧಿಕಾರಿಗಳು, ರಾ.ಸೇ.ಯೋ ಕೋಶ, ದಾವಣಗೆರೆ ವಿಶ್ವವಿದ್ಯಾಲಯ ದಾವಣಗೆರೆ, ಪ್ರೊ. ವೆಂಕಟರಾವ್ ಎಂ ಪಲಾಟೆ ಮುಖ್ಯಸ್ಥರು, ಇತಿಹಾಸ ಮತ್ತು ಪುರಾತತ್ವ ವಿಭಾಗ, ದಾವಣಗೆರೆ ವಿಶ್ವವಿದ್ಯಾಲಯ ದಾವಣಗೆರೆ, ಪ್ರೊ. ಜಗದೀಶ ಸಿ ಮುಖ್ಯಸ್ಥರು, ಇತಿಹಾಸ ವಿಭಾಗ ಸ.ಪ್ರ.ದ ಕಾಲೇಜು ದಾವಣಗೆರೆ ಮುಂತಾದವರು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು.ಅಧ್ಯಕ್ಷತೆ: ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಂಶುಪಾಲರಾದ ಪ್ರೊ. ಬಸವರಾಜ ಸಿ ತಹಸೀಲ್ದಾರ್ ರವರು ವಹಿಸುವರು.ವಿಚಾರಗೋಷ್ಠಿಗಳು: ಮೊದಲನೇ ಗೋಷ್ಠಿಯನ್ನು ಮಾನವ ಬಂಧುತ್ವ ವೇದಿಕೆಯ ರಾಜ್ಯ ಸಂಚಾಲಕರಾದ ಡಾ. ಎ ಬಿ ರಾಮಚಂದ್ರಪ್ಪರವರು 'ಗಾಂಧಿ ಮತ್ತು ಸಮಕಾಲಿನತೆ' ಕುರಿತು, ಎರಡನೇ ವಿಚಾರಗೋಷ್ಠಿಯನ್ನು ಡಾ. ಅಬಿದ ಬೇಗಮ್ 'ಸ್ವಾವಲಂಬಿ ಗಾಂಧಿ ಮತ್ತು ಯುವ ಜನತೆ ಕುರಿತು ಮಾತನಾಡಲಿದ್ದಾರೆ.ವಿದ್ಯಾರ್ಥಿಗಳಿಂದ ಪ್ರಬಂಧ ಮಂಡನೆಗೆ ಅವಕಾಶ ನೀಡಿದ್ದು ಅತ್ಯುತ್ತಮ ಪ್ರಬಂಧಗಳಿಗೆ ಬಹುಮಾನ ನೀಡಲಾಗುತ್ತಿದೆ. ರಾಜ್ಯದ ಬೇರೆ ಬೇರೆ ಕಾಲೇಜುಗಳಿಂದ ವಿದ್ಯಾರ್ಥಿಗಳು ಹಾಜರಾಗುವರು ಎಂದು ಕಾಲೇಜಿನ ಪ್ರಾಂಶುಪಾಲರು ಮಾಹಿತಿ ನೀಡಿರುತ್ತಾರೆ.

# ವಾರ್ಷಿಕ ವಿಶೇಷ ಶಿಬಿರ

**ಹಾಸನ** : ಕರ್ನಾಟಕ ಸರ್ಕಾರ, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ,ಬೆಂಗಳೂರು, ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ರಾಷ್ಟ್ರೀಯ ಸೇವಾ ಯೋಜನೆಯ ಸಹಯೋಗದಲ್ಲಿ 2025-26 ರ ಕಾರ್ಯಕ್ರಮವನ್ನು ಡಿ.07 ರಿಂದ ಡಿ.13 ರವರೆಗೆ ಹಾಸನ ತಾಲ್ಲೂಕು, ಕಟ್ಟಾಯ ಹೋಬಳಿ, ಅಂಕಪುರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಾರ್ಷಿಕ ವಿಶೇಷ ಶಿಬಿರ ಆಯೋಜಿಸಲಾಗಿದೆ.ಡಿ.07 ರಂದು ಸಂಜೆ.6.30 ಕ್ಕೆ ಶಿಬಿರ ಉದ್ಘಾಟನಾ ಸಮಾರಂಭವನ್ನು ಆಯೋಜಿಸಲಾಗಿದೆ. ಸಂಸದರಾದ ಶ್ರೇಯಸ್ ಎಂ. ಪಟೇಲ್ ರವರು ಗೌರವ ಉಪಸ್ಥಿತಿ ವಹಿಸಲಿದ್ದಾರೆ. ಶಾಸಕರಾದ ಸಿಮೆಂಟ್ ಮಂಜು ರವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಹಿಮ್ಸ್ ನಿರ್ದೇಶಕರಾದ ಡಾ॥ರಾಜಣ್ಣ ಅವರು ಅಧ್ಯಕ್ಷತೆವಹಿಸಲಿದ್ದಾರೆ.

# ಪದವಿಗಿಂತ ಕೌಶಲ್ಯವೇ ಇಂದಿನ ಯುಗದ ನಿಜವಾದ ಪದವಿ" ಡಾ ಬಾಬು

## ದೇವರಾಜ ಅರಸು ಪ್ರಥಮ ದರ್ಜೆ ಕಾಲೇಜಿನಲ್ಲಿ ಕೌಶಲ್ಯ ಕುರಿತು ವಿಶೇಷ ಉಪನ್ಯಾಸ

**ದಾವಣಗೆರೆ:** ನಗರದ ಹೊರವಲಯದಲ್ಲಿರುವ ದೇವರಾಜ್ ಅರಸು ಪ್ರಥಮ ದರ್ಜೆ ಕಾಲೇಜಿನಲ್ಲಿ "ಕೌಶಲ್ಯ ಮತ್ತು ಇಂದು ಅದರ ಅಗತ್ಯತೆ" ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಮಂಗಳವಾರ ಹಮ್ಮಿಕೊಳ್ಳಲಾಗಿತ್ತು.




ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿದ್ದ ದಾವಣಗೆರೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹ ಪ್ರಾಧ್ಯಾಪಕರು ಹಾಗೂ ಕೌಶಲ್ಯ ತರಬೇತಿದಾರರಾದ ಡಾ. ವೆಂಕಟೇಶ್ ಬಾಬು ಎಸ್. ಅವರು ಮಾತನಾಡಿ, "ಇಂದಿನ ಕಾಲದಲ್ಲಿ ಪದವಿಯಿಗಿಂತ ಕೌಶಲ್ಯವೇ ನಿಜವಾದ ಪದವಿ. ಕೇವಲ ಪದವಿಯಲ್ಲದೆ, ಕೌಶಲ್ಯವನ್ನು ಹೊಂದಿದಾಗ ಮಾತ್ರ ಉದ್ಯೋಗ ಕ್ಷೇತ್ರದಲ್ಲಿ ಉತ್ತಮ ಅವಕಾಶಗಳು ದೊರೆಯುತ್ತವೆ. ಕಾಲ ಬದಲಾಗುತ್ತಿದೆ; ಆದ್ದರಿಂದ ಪದವಿಯೊಂದಿಗೆ ಕೌಶಲ್ಯಪರಿಣಿತರಾಗುವುದು ಪ್ರತಿಯೊಬ್ಬರಿಗೂ ಅವಶ್ಯಕ," ಎಂದು ವಿದ್ಯಾರ್ಥಿಗಳಿಗೆ ಮನವಿ ಮಾಡಿದರು.

ಅವರು ಮುಂದುವರಿದು, ಕೌಶಲ್ಯಾಭಿವೃದ್ಧಿ ಮೂಲಕ ಉದ್ಯೋಗಾವಕಾಶಗಳನ್ನು ನಿರ್ಮಿಸಿಕೊಳ್ಳುವ ಮಹತ್ವವನ್ನು ತಿಳಿಸಿ, ವಿದ್ಯಾರ್ಥಿಗಳು ತಮ್ಮ ಆಸಕ್ತಿಗೆ ಅನುಗುಣವಾಗಿ ಕನಿಷ್ಠ ಒಂದು ಕೌಶಲ್ಯವನ್ನು ಸಂಪಾದಿಸಬೇಕಿರುವ ಅಗತ್ಯವನ್ನು ಹೇಳಿದರು.

ನಗರದ ಎಜಿಬಿ ಕಾಲೇಜಿನ ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಪ್ರೊ ಶಶಿಕುಮಾರ್ ಅವರು ಮುಖ್ಯ ಅತಿಥಿಗಳಾಗಿ ಮಾತನಾಡಿದರು

ವಾಣಿಜ್ಯ ವಿಭಾಗದ ಮುಖ್ಯಸ್ಥ ಪ್ರೊ ದೇವೇಂದ್ರಪ್ಪ ರವರು ಪ್ರಾಥಮಿಕವಾಗಿ ಮಾತನಾಡಿದರು

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲರು ಅಧ್ಯಕ್ಷತೆ ವಹಿಸಿದ್ದರು. ಉಪನ್ಯಾಸಕ್ಕೆ ಉಪನ್ಯಾಸಕರು, ಸಿಬ್ಬಂದಿಗಳ ಜೊತೆ ಕಾಲೇಜಿನ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಹಾಜರಿದ್ದರು.

# ಭೋವಿ ಅಭಿವೃದ್ಧಿ ನಿಗಮಕ್ಕೆ ಅನುದಾನದ ಕೊರತೆ ಇಲ್ಲ

**ಚಿತ್ರದುರ್ಗ:** ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದಲ್ಲಿ ಸದ್ಯ ರೂ.200 ಕೋಟಿ ಹಣವಿದೆ. ಸರ್ಕಾರ ಕಾಲ ಕಾಲಕ್ಕೆ ಆಯವ್ಯಯದಲ್ಲಿ ಅನುದಾನ ಮಂಜೂರು ಮಾಡುತ್ತಿದ್ದು, ಅನುದಾನದ ಕೊರತೆ ಇಲ್ಲ. ಬಿಡುಗಡೆಯಾದ ಅನುದಾನ ಪೂರ್ಣ ಪ್ರಮಾಣದಲ್ಲಿ ಬಳಕೆಯಾದರೆ ಮಾತ್ರ ಸರ್ಕಾರಕ್ಕೆ ಇನ್ನೂ ಹೆಚ್ಚಿನ ಅನುದಾನ ಕೇಳಲು ಅನುವಾಗುತ್ತದೆ. ನಿಗಮದಲ್ಲಿ ಅನುದಾನ ಕೊರತೆ ಇದೆ ಎನ್ನುವುದು ಊಹಾಪೋಹದ ಮಾತುಗಳಾಗಿವೆ ಎಂದು ಕರ್ನಾಟಕ ಭೋವಿ ಅಭಿವೃದ್ಧಿ ನಿಮಗದ ಅಧ್ಯಕ್ಷ ಎಂ.ರಾಮಪ್ಪ ಸ್ಪಷ್ಟಪಡಿಸಿದರು.




ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ಚಿತ್ರದುರ್ಗ ಜಿಲ್ಲೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿ ಅವರು ಮಾತನಾಡಿದರು.

ನಿಗಮದಿಂದ ಸ್ವಯಂ ಉದ್ಯೋಗ ನೇರ ಸಾಲ, ಉದ್ಯಮಶೀಲತೆ, ಸ್ವಾವಲಂಭಿ ಸಾರಥಿ, ಮಹಿಳಾ ಸ್ವ ಸಹಾಯ ಗುಂಪುಗಳಿಗೆ ಕಿರುಸಾಲ, ಗಂಗಾ ಕಲ್ಯಾಣ, ಭೂ ರಹಿತಿ ಕೃಷಿ ಕಾರ್ಮಿಕರಿಗೆ ಭೂ ಒಡೆತನ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಮೂಲಕ ರಾಜ್ಯದಲ್ಲಿನ ಭೋವಿ, ಒಡ್, ಒಡ್ಡ, ಒಡ್ಡರ್, ವಡ್ಡರ್, ವಡ್ಡರ, ಕಲ್ಲು ಒಡ್ಡರ, ಬೆಸ್ತರಲ್ಲದ ಭೋವಿ, ಮಣ್ಣು ವಡ್ಡರ ಜಾತಿಗಳಲ್ಲಿ ಆರ್ಥಿಕವಾಗಿ ಹಿಂದುಳಿದವರಿಗೆ ನೆರವು ನೀಡಲಾಗುತ್ತಿದೆ ಎಂದು ಎಂ.ರಾಮಪ್ಪ ತಿಳಿಸಿದರು.

ಚಿತ್ರದುರ್ಗ ಜಿಲ್ಲೆಗೆ 2025-26ನೇ ಸಾಲಿಗೆ ಸ್ವಯಂ ಉದ್ಯೋಗ ನೇರಸಾಲ ಯೋಜನೆಗೆ 103 ಭೌತಿಕ ಗುರಿ ನಿಗದಿಪಡಿಸಿದ್ದು, ರೂ.1.3 ಕೋಟಿ ಅನುದಾನ ಮೀಸಲಿರಿಸಲಾಗಿದೆ. ಇದೇ ಮಾದರಿಯಲ್ಲಿ ಹೈನುಗಾರಿಕೆ ಕೈಗೊಳ್ಳಲು ಉದ್ಯಮಶೀಲತಾ ಯೋಜನೆಯಡಿ ಘಟಕ ವೆಚ್ಚದ ರೂ.1.25 ಲಕ್ಷ ಸಹಾಯಧನ ನೀಡಲು 39 ಭೌತಿಕ ಗುರಿ ನಿಗದಿ ಪಡಿಸಲಾಗಿದೆ. ಇದಕ್ಕಾಗಿ ರೂ.48.75 ಲಕ್ಷ ಅನುದಾನ ಮೀಸಲಿರಿಸಲಾಗಿದೆ. ಇತರೆ ಉದ್ದಿಮೆಗಳನ್ನ ಕೈಗೊಳ್ಳಲು ಉದ್ಯಮಶೀಲತಾ ಯೋಜನೆಯಡಿ ಘಟಕ ವೆಚ್ಚದ ರೂ.2 ಲಕ್ಷ ಸಹಾಯಧನ ನೀಡಲು 29 ಭೌತಿಕ ಗುರಿ ನಿಗದಿಪಡಿಸಲಾಗಿದೆ. ಸ್ವಾವಲಂಬಿ ಸಾರಥಿ ಯೋಜನೆಯಡಿ ಟ್ಯಾಕ್ಸಿ ಖರೀದಿಗೆ ರೂ.4 ಲಕ್ಷದ ವರೆಗೆ ಸಹಾಯಧನ ನೀಡಲು 65 ಭೌತಿಕ ಗುರಿ ನಿಗದಿಪಡಿಸಲಾಗಿದೆ. ಇದಕ್ಕಾಗಿ ರೂ.2.60 ಕೋಟಿ ನೀಡಲಾಗಿದೆ. ಮಹಿಳಾ ಸ್ವ ಸಹಾಯ ಗುಂಪುಗಳಿಗೆ ಕಿರು ಸಾಲ ನೀಡಲು 140 ಭೌತಿಕ ಗುರಿ ನಿಗದಿ ಪಡಿಸಲಾಗಿದ್ದು, ರೂ.70 ಲಕ್ಷ ಮೀಸಲಿರಿಸಲಾಗಿದೆ.

ಗಂಗಾ ಕಲ್ಯಾಣ ಯೋಜನೆಯಡಿ ಕೊಳವೆಬಾವಿ ಕೊರೆಯಲು 47 ಭೌತಿಕ ಗುರಿ ನೀಡಿದ್ದು, ರೂ.1.76 ಕೋಟಿ ಮೀಸಲಿರಿಸಲಾಗಿದೆ. ಒಟ್ಟಾರೆ ಎಲ್ಲಾ ಯೋಜನೆಗಳಿಂದ 423 ಭೌತಿ ಗುರಿ ನೀಡಿದ್ದು, ರೂ.7.16 ಕೋಟಿ ಜಿಲ್ಲೆಗೆ ಹಂಚಿಕೆ ಮಾಡಲಾಗಿದೆ. ಜಿಲ್ಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭೋವಿ ಜನಾಂಗದವರು ಇದ್ದು ಜನಸಂಖ್ಯೆಗೆ ಅನುಗುಣವಾಗಿ ಇನ್ನೂ ಹೆಚ್ಚಿನ ಅನುದಾನವನ್ನು ನೀಡುವುದಾಗಿ ಅಧ್ಯಕ್ಷ ಬಿ.ರಾಮಪ್ಪ ಹೇಳಿದರು.

## ಐದು ಪಾಲಿಕೆಗಳಿಗೂ ಒಂದೇ ಮಾದರಿ ಪ್ರತ್ಯಾಯೋಜನೆ ಅಗತ್ಯ ; ಎನ್‌ಆರ್‌ಆರ್




**ಬೆಂಗಳೂರು:** ಗೊಂದಲಗಳ ಗೂಡಾಗಿರುವ ಬೆಂಗಳೂರು ಮಹಾನಗರದ ಐದು ನಗರ ಪಾಲಿಕೆಗಳಿಗೆ ಒಂದೇ ಮಾದರಿಯ ಅಧಿಕಾರ ಪ್ರತ್ಯಾಯೋಜನೆಯನ್ನು ರೂಪಿಸಬೇಕೆಂದು ಬಿಜೆಪಿ ಮುಖಂಡ ಎನ್.ಆರ್.ರಮೇಶ್ ಆಗ್ರಹಿಸಿದ್ದಾರೆ.

ಬಿಬಿಎಂಪಿಯನ್ನು ಅವೈಜ್ಞಾನಿಕವಾಗಿ ಐದು ನಗರ ಪಾಲಿಕೆಗಳನ್ನು ವಿಭಜನೆ ಮಾಡಿರುವುದನ್ನು ನೋಡಿದರೆ ಹುಚ್ಚು ದೊರೆ ಮಹಮದ್ ಬಿನ್ ತುಘಲಕ್ ನ ಆಡಳಿತದ ವೈಖರಿಯನ್ನೆನಾಚಿಸುವಂತಹ ಆಡಳಿತವನ್ನು ನೋಡುವ ದೌರ್ಭಾಗ್ಯ ಬೆಂಗಳೂರು ಮಹಾನಗರದ ಜನತೆಯದ್ದಾಗಿದೆ ಎಂದು ಅವರು ಲೇವಡಿ ಮಾಡಿದ್ದಾರೆ.

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಗೆ ಒಳಪಡುವ ಐದು ನಗರ ಪಾಲಿಕೆಗಳಲ್ಲಿ ವಾಸ್ತವವಾಗಿ ಒಂದೇ ತೆರನಾದ ಆಡಳಿತ ವ್ಯವಸ್ಥೆ ಜಾರಿಗೆ ಬರಬೇಕಿತ್ತು. ಇದಾಗದಿರುವ ಹಿನ್ನೆಲೆಯಲ್ಲಿ ಎತ್ತು ಏರಿಗೆ ಎಳೆದರೆ, ಕೋಣ ನೀರಿಗೆ ಎಳೆಯಿತು ಎನ್ನುವ ಮಾತಿನಂತೆ ಒಂದೊಂದು ನಗರ ಪಾಲಿಕೆಯಲ್ಲಿ ಒಂದೊಂದು ಮಾದರಿಯ ಗೊಂದಲಮಯ ಅಧಿಕಾರ ಪ್ರತ್ಯಾಯೋಜನೆಗಳು ಜಾರಿಗೆ ಬಂದಿರುವುದರಿಂದ ಅಧಿಕಾರಿಗಳು, ನೌಕರರು ಮತ್ತು ಸಾರ್ವಜನಿಕರಲ್ಲಿ ಬಹಳಷ್ಟು ಗೊಂದಲಗಳು ಉಂಟಾಗಿವೆ.

ಈ ಹಿಂದೆ ಟೆಂಡರ್ ಪ್ರಕ್ರಿಯೆಗಳ ಅನುಮೋದನೆ, ಯೋಜನೆಗಳ ಅನುಷ್ಠಾನದ ಅನುಮೋದನೆ ಹಾಗೂ ಉದ್ಯಾನವನಗಳು, ಬೀದಿ ದೀಪಗಳು, ಕೆರೆಗಳು, ರಾಜಕಾಲುವೆಗಳು, ಅಧಿಕಾರಿಗಳ ಕಛೇರಿಗಳ ನಿರ್ವಹಣೆ ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಗುತ್ತಿಗೆದಾರರಿಗೆ ಹಣ ಬಿಡುಗಡೆ ಮಾಡುವ ಸಂಬಂಧದ ಕಡತಗಳಲ್ಲಿ ಪಾಲಿಕೆಯ ಆಯುಕ್ತರು ಅಂತಿಮವಾಗಿ ಒಂದು ಸಲ ಅನುಮೋದನೆ ನೀಡಿದರೆ ಸಾಕಿತ್ತು. ಆದರೆ, ವಿಚಿತ್ರ ಮತ್ತು ಹಾಸ್ಯಾಸ್ಪದ ಎಂಬಂತೆ ಈಗಿನ ಐದು ಪಾಲಿಕೆಗಳ ಆಯುಕ್ತರುಗಳಿಗೆ ಪ್ರತೀ ಕಡತವೂ ಸಹ ಕನಿಷ್ಠ ನಾಲ್ಕೈದು ಸಲ ರವಾನೆಯಾಗಿ ಆಯುಕ್ತರ ಸಹಿಗಳನ್ನು ಪಡೆದುಕೊಳ್ಳುವ ಪದ್ಧತಿ ಜಾರಿಗೆ ಬಂದಿದೆ.

ಒಂದು ಹುಲ್ಲು ಕಡ್ಡಿಯೂ ಸಹ ತಮ್ಮ ಅನುಮತಿ ಪಡೆದ ನಂತರವಷ್ಟೆ ಅಲುಗಾಡಬೇಕು ಎಂಬ ಮನಸ್ಥಿತಿ ಹೊಂದಿರುವ ಒಂದಿಬ್ಬರು ಆಯುಕ್ತರು ತಮ್ಮ ಅಧಿಕಾರ ವ್ಯಾಪ್ತಿಯ ಪಾಲಿಕೆಗಳಲ್ಲಿ ಸರ್ವಾಧಿಕಾರಿ ಆಡಳಿತ ನಡೆಸುತ್ತಿದ್ದಾರೆ, ನಗರ ಪಾಲಿಕೆಗಳ 10 ವಲಯಗಳಲ್ಲಿರುವ ಶ್ರೇಣಿಯ ಜಂಟಿ ಆಯುಕ್ತರುಗಳ ಅನುಮೋದನೆ ಕಾರ್ಯಗಳಿಗೆ ಒಂದೇ ಒಂದು ಕಡತವೂ ರವಾನೆಯಾಗುತ್ತಿಲ್ಲ ಮತ್ತು ಈ ಸಂಬಂಧದ ಅಧಿಕಾರ ಪ್ರತ್ಯಾಯೋಜನೆಯನ್ನು ಇದುವರೆಗೂ ಯಾವೊಂದು ಪಾಲಿಕೆಯಲ್ಲೂ ಹೊರಡಿಸಿಲ್ಲ.

## ಪ್ರಥಮ ಚಿಕಿತ್ಸೆ ಜಾಗೃತಿ ಕಾರ್ಯಕ್ರಮ






**ದಾವಣಗೆರೆ :** ಬಡವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಪ್ರತಿ ತಿಂಗಳು ಧನಸಹಾಯ ನೀಡುತ್ತಾ ವಿದ್ಯಾರ್ಥಿಗಳ ಉನ್ನತ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹ ನೀಡುತ್ತಾ ಬರುತ್ತಿರುವ ಸಾಮಾಜಿಕ ಸೇವಾ ಕಾರ್ಯಚಟುವಟಿಕೆಗಳನ್ನು ನೆಡೆಸುತ್ತಿರುವ ಗುಂಪು ಸುವಿದ್ಯಾ ನಿಧಿ ಗುಂಪು. ದಿನಾಂಕ= 02/12/2025 ಮಂಗಳವಾರದಂದು ಸುವಿದ್ಯಾನಿಧಿ ದಾವಣಗೆರೆ ವತಿಯಿಂದ ಅಶ್ವಿನಿ ಆಯುರ್ವೇದಿಕ್ ಮೆಡಿಕಲ್ ಕಾಲೇಜು ಮತ್ತು ಸ್ನಾತಕೋತರ ಕೇಂದ್ರ ದಾವಣಗೆರೆ ಇವರ ಸಹಯೋಗದೊಂದಿಗೆ ಡಾ.ಎ.ಎಂ.ಶಿವಕುಮಾರ್ ಅವರ ನೇತ್ರತ್ವದಲ್ಲಿ ಕಾರ್ಯಕ್ರಮ ಆಯೋಜಿಸಿದ್ದು ಆಯುರ್ವೇದ ಬಿಎಎಂಎಸ್ ವಿದ್ಯಾರ್ಥಿಗಳಿಗೆ ಪ್ರಥಮ ಚಿಕಿತ್ಸೆ ಕುರಿತು ಜಾಗೃತಿ ಕಾರ್ಯಕ್ರಮವನ್ನು ಅಶ್ವಿನಿ ಆಯುರ್ವೇದಿಕ್ ಮೆಡಿಕಲ್ ಕಾಲೇಜು ಮತ್ತು ಸ್ನಾತಕೋತರ ಕೇಂದ್ರ ದಾವಣಗೆರೆಯಲ್ಲಿ ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮದಲ್ಲಿ ಪ್ರಸಿದ್ಧ ರಾಷ್ಟ್ರೀಯ ತರಬೇತುದಾರರಾದ ಡಾ. ಕುಮಾರ್ ವಿ ಎಲ್ ಎಸ್ ರವರು ತುರ್ತುಸ್ಥಿತಿಗಳ ನಿರ್ವಹಣೆ ಮತ್ತು ಜೀವ ಉಳಿಸುವ ಪ್ರಥಮ ಚಿಕಿತ್ಸೆ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಆಯುರ್ವೇದಿಕ್ ಮೆಡಿಕಲ್ ಕಾಲೇಜು ವಿದ್ಯಾರ್ಥಿಗಳಿಗೆ ಹಮ್ಮಿಕೊಳ್ಳಲಾಗಿತ್ತು. ಇದರಲ್ಲಿ ತುರ್ತು ಸಂದರ್ಭದಲ್ಲಿ ವಿದ್ಯಾರ್ಥಿಗಳು ಕೈಗೊಳ್ಳಬೇಕಾದ ಪ್ರಥಮ ಚಿಕಿತ್ಸೆ ಕುರಿತು ವಿದ್ಯಾರ್ಥಿಗಳಿಗೆ ಪ್ರಾತ್ಯಕ್ಷಕವಾಗಿ ಗಾಯಾಳುಗಳನ್ನು ಪರೀಕ್ಷೆಸುವ ವಿಧಾನ, ಸಿ.ಪಿ.ಆರ್ ವಿಧಾನ, ಸಿ ಪಿ ಆರ್ ಕೈಗೊಳ್ಳುವ ಮುನ್ನೆಚ್ಚರಿಕೆ ಕ್ರಮಗಳು ಈಗೆ ಮುಂತಾದ ಸನ್ನಿವೇಶಗಳಲ್ಲಿ ಎದುರಿಸುವ ಕ್ರಮಗಳ ಕುರಿತಾಗಿ ಎಲ್ಲಾ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಿದರು.

ಈ ಕಾರ್ಯಕ್ರಮದಲ್ಲಿ ಅಶ್ವಿನಿ ಆಯುರ್ವೇದಿಕ್ ಮೆಡಿಕಲ್ ಕಾಲೇಜು ಮತ್ತು ಸ್ನಾತಕೋತರ ಕೇಂದ್ರ, ದಾವಣಗೆರೆಯ ಪ್ರಾಂಶುಪಾಲರಾದ ಡಾ.ಮುಕ್ತ ಎಂ.ಹೆಚ್, ಮೆಡಿಕಲ್ ಡೈರೆಕ್ಟರ್ ರಾದ ಡಾ.ಮೃತ್ಯುಂಜಯ ಎನ್ ಹಿರೇಮಠ್, ಡಾ.ಮಂಜುಳಾ ಎಂಎಸ್, ಡಾ. ಸೀಮಾ ಎಂ ಎಂ, ಡಾ. ಸಲ್ಮಾ, ಡಾ. ಪ್ರಿಯಾಂಕ, ಡಾ. ಅಕ್ಷಯ್, ಡಾ. ವಿಂದ್ಯಾ, ಕುಮಾರ್ ಎಂ, ಶಿವಕುಮಾರ ಎನ್ ಜಿ ಇತರರು ಉಪಸ್ಥಿತರಿದ್ದರು.

## ಕಾಫಿ ಬೆಳೆಗಾರರಿಗೆ ಒಂದೆಡೆ ಕಾಡಾನೆಗಳ ಉಪಟಳ ಮತ್ತೊಂದೆಡೆ ಕಳ್ಳರ ಕಾಟ



**ಬೇಲೂರು:** ಕಾಫಿಗೆ ಉತ್ತಮ ಧಾರಣೆ ಬಂದಿರುವ ಹಿನ್ನಲೆಯಲ್ಲಿ ಬೇಲೂರಿನಲ್ಲಿ ಕಾಫಿ ಬೀಜ ಕಳ್ಳರ ಕಾಟ ಹೆಚ್ಚಾಗಿದ್ದು, ತಾಲೂಕಿನ ಅರೇಹಳ್ಳಿ ಹಾಗೂ ಬಿಕ್ಕೋಡು ಸಮೀಪದ ಮಳವಳ್ಳಿ (ಕೌರಿ) ಗ್ರಾಮದಲ್ಲಿ ಕಳವಾಗಿದ್ದು, ಬೆಳೆಗಾರರಲ್ಲಿ ಆತಂಕ ಮನೆಮಾಡಿದೆ.ತಾಲೂಕಿನ ಅರೇಹಳ್ಳಿ-ಬಿಕ್ಕೋಡು ಹೋಬಳಿಗಳಲ್ಲಿನ ಕಾಡಾನೆಗಳ ಉಪಟಳದ ನಡುವೆಯೂ ಬೆಳೆ ಬೆಳೆದಿರುವ ಬೆಳೆಗಾರರಿಗೆ ಒಂದೆಡೆ ಕಾಡಾನೆಗಳ ಉಪಟಳವಾದರೆ ಮತ್ತೊಂದು ಕಡೆ ಕಳ್ಳರ ಕಾಟ ಕಾಡತೊಡಗಿದೆ. ಇತ್ತೀಚೆಗೆ ಮಾರುಕಟ್ಟೆಯಲ್ಲಿ ಕಾಫಿಗೆ ಉತ್ತಮ ಬೆಲೆ ನಿಗದಿಯಾಗಿದ್ದು, ಕಳ್ಳಕಣ್ಣು ಕೊಯ್ಲು ಮಾಡಿಟ್ಟಿರುವ ತೋಟ ಹಾಗೂ ಮನೆಯ ಅಂಗಳದಲ್ಲಿ ಒಣಗಲು ಹಾಕಿರುವ ಕಾಫಿಯ ಮೇಲೆ ಬಿದ್ದಿದೆ.ಈ ಕಾರಣಗಳಿಂದಾಗಿ ತಾಲೂಕಿನ ಅರೇಹಳ್ಳಿಯ ಮುನೀರ್‌ಎಂಬುವವರ ಕಣದಲ್ಲಿದ್ದ ಕಾಫಿ ಹಾಗೂ ಧನಂಜಯಮೂರ್ತಿಯವರು ಕೊಯ್ಲು ಮಾಡಿ ತೋಟದಲ್ಲಿದ್ದ 20 ಕ್ಕೂ ಹೆಚ್ಚು ಚೀಲಗಳಲ್ಲಿದ್ದ ಕಾಫಿಯನ್ನು ಕಳ್ಳರು ಕದ್ದಿರುವುದು ಕಂಡು ಬಂದಿರುವುದು ಬೆಳೆಗಾರರ ಮತ್ತು ಸಣ್ಣ ರೈತರ ಆತಂಕಕ್ಕೆ ಕಾರಣವಾಗಿದ್ದು ಕಾಫಿ ಕಳ್ಳರ ಕೈಚಳಕಕ್ಕೆ ಕಡಿವಾಣ ಹಾಕಬೇಕಿದೆ.ಪೊಲೀಸರು ಇನ್ನಾದರೂ ರಾತ್ರಿ ಸಮಯ ಗ್ರಾಮಗಳಿಗೆ ಬೀಟ್ ಹೆಸರಲ್ಲಿ ಬಂದು ಹೋದರೆ ಮತ್ತು ಅನುಮಾನಾಸ್ಪದ ವ್ಯಕ್ತಿಗಳ ವಿರುದ್ಧ ಕ್ರಮ ಕೈಗೊಂಡರೆ ಕಳ್ಳತನಕ್ಕೆ ಕಡಿವಾಣ ಹಾಕಬಹುದಾಗಿದ್ದು, ಈ ನಿಟ್ಟಿನಲ್ಲಿ ಪೊಲೀಸ್ ಅಧಿಕಾರಿಗಳು ಕ್ರಮಕ್ಕೆ ಮುಂದಾಗಬೇಕಿದೆ. ಜತೆಗೆ ಕಾಫಿ ಕಳ್ಳತನ ಸಂಬಂಧ ಅರೇಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿ ಪೊಲೀಸರು ತನಿಖೆ ಕೈಗೊಂಡಿದ್ದಾರೆ.

## ದತ್ತ ಪೀಠದ ವಿಚಾರದಲ್ಲಿ ಸಿಎಂ ಸಿದ್ದರಾಮಯ್ಯನವರು ನ್ಯಾಯದ ಪರಿಪಾಲಕರಾಗಬೇಕು



**ಚಿಕ್ಕಮಗಳೂರು:** ದತ್ತ ಪೀಠದ ವಿಚಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸರ್ಕಾರಿ ದಾಖಲೆ ಪರಿಶೀಲಿಸಿ ನ್ಯಾಯದ ಪರಿಪಾಲಕರಾಗಿ ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ವಿನಂತಿಸಿದರು.

ದತ್ತ ಜಯಂತಿ ಎರಡನೇ ದಿನವಾದ ಇಂದು ಬೆಳಿಗ್ಗೆ ದತ್ತ ಮಾಲಾಧಾರಿಗಳೊಂದಿಗೆ ನಗರದ ನಾರಾಯಣಪುರ ಮತ್ತು ರಾಘವೇಂದ್ರ ಸ್ವಾಮಿ ಮಠದ ರಸ್ತೆಯಲ್ಲಿರುವ ಮನೆಗಳಿಗೆ ತೆರಳಿ ಭಿಕ್ಷಾಟನೆ ಮಾಡಿ ಪಡಿ ಸಂಗ್ರಹಿಸಿ ನಂತರ ಮಾತನಾಡಿದ ಅವರು, ನಾವು ಪೂರ್ಣ ಪ್ರಮಾಣದಲ್ಲಿ ನ್ಯಾಯ ಕೇಳುತ್ತಿದ್ದೇವೆ. ಹಾಲಿ ನ್ಯಾಯಾಧೀಶರ ನೇತೃತ್ವದಲ್ಲಿ ನ್ಯಾಯದ ಬೇಡಿಕೆ ಇಟ್ಟಿದ್ದೇವೆ.

ಅದು ಆಗಿಲ್ಲ. ಹಾಗಾಗಿ ಮುಖ್ಯಮಂತ್ರಿಗಳಿಗೆ ವಿನಂತಿ ಮಾಡುತ್ತೇವೆ. ಹಾಲಿ ನ್ಯಾಯಾಧೀಶರ ನೇತೃತ್ವದಲ್ಲಿ ತನಿಖೆ ನಡೆಸಿ ಸರ್ಕಾರಿ ದಾಖಲೆಗಳನ್ನು ಪರಿಶೀಲಿಸಿ ದತ್ತಪೀಠ ಬೇರೆ, ಬಾಬಾಬುಡನ್ ದರ್ಗಾ ಬೇರೆ, ಎಂದು ನಾವು ಹೇಳುತ್ತಾ ಬಂದಿದ್ದೇವೆ. ಎರಡು ಒಂದೇ ಎಂದು ಭಾವಿಸಿರುವುದೇ ವಿವಾದಕ್ಕೆ ಕಾರಣವಾಗಿದೆ ಎಂದರು.

ಐದು ದಶಕದಿಂದ ಹೋರಾಟ ಮಾಡುತ್ತಿದ್ದೇವೆ. ನ್ಯಾಯಾಂಗ ವ್ಯವಸ್ಥೆಯಲ್ಲಿ ತಕ್ಷಣ ನ್ಯಾಯ ಪಡೆಯುವುದು ಕಷ್ಟ . ನಿರಂತರ ಹೋರಾಟ ಮಾಡಿಯೇ ನ್ಯಾಯ ಪಡೆಯಬೇಕು. ಹಾಗಾಗಿ ಅದರ ಹೊರತಾಗಿಯೂ ಸರ್ಕಾರ ನ್ಯಾಯ ಕೊಡಲು ಸಾಧ್ಯ. ತಕ್ಷಣ ಹಾಲಿ ನ್ಯಾಯಾಧೀಶರ ನೇತೃತ್ವದಲ್ಲಿ ಸಮಿತಿ ನೇಮಕ ಮಾಡಿ ಎಂದರು.

ದತ್ತಾತ್ರೆಯ ಪೀಠ ಹಾಗೂ ಬಾಬಾಬುಡನ್ ದರ್ಗಾ ಎರಡು ಒಂದೇ ಎಂದು ಭಾವಿಸುವುದು ಅನ್ಯಾಯ ಪಶ್ಚಿಮ ಘಟ್ಟ ಸಾಲಿನಲ್ಲಿ ಬರುವ ನಾಗೇನಹಳ್ಳಿ ಯಲ್ಲಿ ಬಾಬಾಬುಡನ್ ದರ್ಗಾ ಇದೆ ಹಾಗಾಗಿ ನ್ಯಾಯದ ಪರಿಪಾಲಕರಾಗಿ ಎಂದು ಮುಖ್ಯಮಂತ್ರಿಗಳನ್ನು ಒತ್ತಾಯಿಸಿದರು.

ಪಡಿ ಸಂಗ್ರಹಿಸುವ ಕಾರ್ಯಕ್ರಮದಲ್ಲಿ ಸಿ.ಟಿ.ರವಿಯೊಂದಿಗೆ ವಿಶ್ವ ಹಿಂದೂ ಪರಿಷತ್, ಬಜರಂಗದಳ ಕಾರ್ಯಕರ್ತರು ಬಿಜೆಪಿ ಮುಖಂಡರಾದ ಕೋಟೆ ರಂಗನಾಥ್, ಸಚಿನ್ ಗೌಡ ಮೊದಲದವರಿದ್ದರು. ಶೋಭಾ ಯಾತ್ರೆ ಹೋಗುವ ದಾರಿಯುದ್ದಕ್ಕೂ ಬಿಗಿ ಪೊಲೀಸ್ ಸರ್ಪಗಾವಲು ಏರ್ಪಡಿಸಲಾಗಿತ್ತು. ನಾಳೆ ದತ್ತಪೀಠದಲ್ಲಿ ದತ್ತ ಜಯಂತಿ ಕಾರ್ಯಕ್ರಮ ನಡೆಯಲಿದೆ.

## ರಾಜ್ಯಪಾಲ ನಿವಾಸ 'ರಾಜಭವನ'ಕ್ಕೆ 'ಲೋಕಭವನ' ಎಂದು ಮರು ನಾಮಕರಣ




### ಏಕೆ ಈ ಬದಲಾವಣೆ?

ಈ ಮೊದಲೇ ಹೇಳಿದಂತೆ ಮೋದಿ ಸರ್ಕಾರ ಜನಸೇವೆಯ ಆಯಂಗಲ್‌ನಲ್ಲೆ ಸರ್ಕಾರಿ ಬಂಗಲೆಗಳ ಹೆಸರುಗಳನ್ನು, ರಸ್ತೆಗಳನ್ನು ಬದಲಾಯಿಸಿದೆ. ದೆಹಲಿಯ ರೇಸ್‌ಕೋರ್ಸ್ ರಸ್ತೆಯನ್ನು ಲೋಕ ಕಲ್ಯಾಣ್‌ಮಾರ್ಗ್ ಎಂದು ಬದಲಾಯಿಸಿದ್ದು, ಹಳೆಯ ಸಂಸತ್ ಭವನವನ್ನು ಸಂವಿಧಾನ್ ಸದನ್ ಎಂದು ಬದಲಾಯಿಸಲಾಗಿದೆ. ಅದೇ ನಿಟ್ಟಿನಲ್ಲಿ ರಾಜಭವನದ ಹೆಸರುಗಳನ್ನು ಬದಲಾಯಿಸಲು ನಿರ್ಧರಿಸಲಾಗಿದ್ದು, ಈ ನಿಟ್ಟಿನಲ್ಲಿ ಎಲ್ಲಾ ರಾಜ್ಯಗಳಿಗೆ ಸೂಚನೆ ನೀಡಲಾಗಿದೆ. ಕರ್ನಾಟಕದಲ್ಲಿ ಈ ಬಗ್ಗೆ ಇನ್ನೂ ಅಧಿಕೃತ ಆದೇಶ ಹೊರಬಿದ್ದಿಲ್ಲ. ಅದೇನೂ ಪಕ್ಷಗಳ ಪ್ರತಿಷ್ಠೆಯ ವಿಚಾರವೇನಲ್ಲವಾದ್ದರಿಂದ ಕರ್ನಾಟಕದಲ್ಲೂ ಜಾರಿಗೊಳಿಸುವ ಸಾಧ್ಯತೆಯಿದೆ.

**ಬೆಂಗಳೂರು:** ಕೇಂದ್ರ ಗೃಹ ಇಲಾಖೆಯ ನಿರ್ದೇಶನದಂತೆ ಕರ್ನಾಟಕದ ರಾಜಭವನ ಇನ್ನು ಮುಂದೆ ಭವಿಷ್ಯದಲ್ಲಿ ಲೋಕಭವನ ಎಂದು ಮರು ನಾಮಕರಣಗೊಳ್ಳಲಿದೆ. ಈಗಾಗಲೇ ಪಶ್ಚಿಮ ಬಂಗಾಳ, ಮಹಾರಾಷ್ಟ್ರ, ಉತ್ತರಪ್ರದೇಶ, ಉತ್ತರಖಂಡ್, ಗುಜರಾತ್ ಸೇರಿದಂತೆ 8 ರಾಜ್ಯಗಳು ಕೇಂದ್ರ ಗೃಹ ಇಲಾಖೆಯ ನಿರ್ದೇಶನದಂತೆ ರಾಜಭವನವನ್ನು ಲೋಕಭವನ ಎಂದು ಬದಲಾಯಿಸಲಾಗಿದೆ.

ಈಗ ಕರ್ನಾಟಕದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ರಾಜಭವನದ ಹೆಸರನ್ನು ಬದಲಾಯಿಸಿ ಲೋಕಭವನ ಎಂದು ಮರುನಾಮಕರಣ ಮಾಡಿ ಶೀಘ್ರವೇ ಅಧಿಕೃತ ಆದೇಶವನ್ನು ಹೊರಡಿಸಲಿದ್ದಾರೆ.

ರಾಜಭವನವು ಕಾರ್ಯಾಂಗದ ಮುಖ್ಯಸ್ಥರಾಗಿರುವ ರಾಜ್ಯಪಾಲರ ವ್ಯಾಪ್ತಿಗೆ ಒಳಪಡುವುದರಿಂದ ಹೆಸರು ಬದಲಾಯಿಸಲು ರಾಜ್ಯ ಸರ್ಕಾರದ ಒಪ್ಪಿಗೆ ಇಲ್ಲವೇ ಅನುಮತಿ ಬೇಕಾಗಿರುವುದಿಲ್ಲ. ರಾಷ್ಟ್ರಪತಿ ಭವನದ ವ್ಯಾಪ್ತಿಗೆ ಬರುವುದರಿಂದ ಕೇಂದ್ರ ಗೃಹ ಇಲಾಖೆಯ ನಿರ್ದೇಶನವನ್ನು ಪಾಲನೆ ಮಾಡಬೇಕಾಗುತ್ತದೆ.

ಈಗಾಗಲೇ ಪಶ್ಚಿಮ ಬಂಗಾಳ, ಉತ್ತರಾಖಾಂಡ್ ಕೇರಳ, ತಮಿಳುನಾಡು, ತ್ರಿಪುರಾ, ಗುಜರಾತ್ ರಾಜ್ಯಗಳಲ್ಲಿನ ರಾಜಭವನದ ಹೆಸರುಗಳನ್ನು ಬದಲಾಯಿಸಲಾಗಿದೆ.

## ಪ್ರಾಧಿಕಾರದ ಪ್ರಕಟಣೆಗಳಿಗೆ ಶೇ.50 ರಿಯಾಯಿತಿ

**ಚಿತ್ರದುರ್ಗ:** ಕನ್ನಡ ರಾಜ್ಯೋತ್ಸವ ಅಂಗವಾಗಿ 2025ರ ನವೆಂಬರ್ ತಿಂಗಳು ಪೂರ್ತಿ ಕನ್ನಡ ಪುಸ್ತಕ ಪ್ರಾಧಿಕಾರದ ಎಲ್ಲಾ ಪುಸ್ತಕಗಳನ್ನು ಶೇ.50ರ ರಿಯಾಯಿತಿ ದರಗಳಲ್ಲಿ ಮಾರಾಟ ಮಾಡಲಾಗುವುದು. ಪುಸ್ತಕ ಪ್ರಿಯರು ಈ ಅವಕಾಶ ಬಳಸಿಕೊಳ್ಳಲು ಕೋರಿದೆ.

ಬೆಂಗಳೂರಿನ ಕನ್ನಡ ಭವನದ ಸಿರಿಗನ್ನಡ ಪುಸ್ತಕ ಮಳಿಗೆಯಲ್ಲಿ (ಸಂಪರ್ಕ ಸಂಖ್ಯೆ:080-22107705) ಹಾಗೂ ಎಲ್ಲಾ ಜಿಲ್ಲೆಗಳ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದಿಂದ ತೆರೆಯಲಾದ ಎಲ್ಲಾ ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆಗಳಲ್ಲಿ ಈ ರಿಯಾಯಿತಿ ಸೌಲಭ್ಯ ದೊರೆಯಲಿದೆ

.ಅಲ್ಲದೆ ಕನ್ನಡ ಪುಸ್ತಕ ಪ್ರಾಧಿಕಾರದ ಆನ್ ಲೈನ್ https://kpp.karnataka.gov.in (ಆನ್‌ಲೈನ್ ಪುಸ್ತಕ ಖರೀದಿಗೆ ಇಲ್ಲಿ ವೀಕ್ಷಿಸಿ ವಿಭಾಗ) ನಲ್ಲಿ ಕೂಡ ಈ ಶೇ.50 ರಿಯಾಯಿತಿ ಲಭ್ಯವಿದೆ.


## ಕರ್ನಾಟಕ ಸರ್ಕಾರ
## ಗ್ರಾಮ ಪಂಚಾಯಿತಿ ಕಾರ್ಯಾಲಯ ಅತ್ತಿಗೆರೆ

(gmail-attigere.dvg.dvg@gmail.com) ಮೊಬೈಲ್: 8951079840

ಸಂಖ್ಯೆ: ಗ್ರಾ.ಪಂ/ಇ-ಟೆಂಡರ್‌ಪ್ರಕಟಣೆ/01/2025-26 ದಿನಾಂಕ: 03-12-2025

### -:ಟೆಂಡರ್ ಪ್ರಕಟಣೆ:-
**ಇ-ಪ್ರಕ್ಯೂರ್ ಮೆಂಟ್ ಮೂಲಕ**
**(ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ 1999)**

ಕರ್ನಾಟಕ ರಾಜ್ಯಪಾಲರ ಪರವಾಗಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಗ್ರಾಮ ಪಂಚಾಯತಿ ಅತ್ತಿಗೆರೆ ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ ಇವರು ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಲ್ಲಿನ 15ನೇ ಹಣಕಾಸು ಯೋಜನೆ (2025-26 ಸಾಲಿನ) ನೊಂದಾಯಿತ ಅರ್ಹ ಹಾಗೂ ಇ-ಟೆಂಡರ್‌ಗಾಗಿ ಇ-ಪ್ರಕ್ಯೂರ್‌ಮೆಂಟ್ ಸೆಲ್‌ನಲ್ಲಿ ನೊಂದಾಯಿಸಲ್ಪಟ್ಟ ಸಾಮಾಗ್ರಿ ಸರಬರಾಜುದಾರರಿಂದ ಇಲಾಖಾ ನಿಯಮಾವಳಿಯ ಮೇರೆಗೆ ಇ- ಪ್ರಕ್ಯೂರ್‌ಮೆಂಟ್ ಮುಖಾಂತರ ಐಟಂವಾರು ಟೆಂಡರ್‌ಗಳನ್ನು Standard Tender Documents for E-Procurement For Goods ನಮೂನೆಯಲ್ಲಿ ಅಹ್ವಾನಿಸಲಾಗಿದೆ.

| ಕ್ರ.ಸಂ | ಟೆಂಡರ್‌ಗೆ ಇಟ್ಟ ಮೊತ್ತದ ವಿವರ | |
|---|---|---|
| 1 | ಅತ್ತಿಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿನ ಮೋಟರ್‌ಗಳ ನಿರ್ವಹಣೆ (ಎಸ್.ಸಿ/ಎಸ್.ಟಿ ಕಾಲೋನಿಗೆ ನೀರು ಸರಬರಾಜು ಸೇರಿದಂತೆ) 15ನೇ ಹಣಕಾಸು ಯೋಜನೆ ಸಂಖ್ಯೆ :RDPR/2025-26/SE3092/CALL-2 ಮೊತ್ತ:250000.00 | 1) ಟೆಂಡರ್ ಗೆ ಅರ್ಜಿ ಸಲ್ಲಿಸುವ ದಿನಾಂಕ : 03-12-2025<br>2) ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ: 10-12-2025<br>3)ತಾಂತ್ರಿಕ ಬಿಟ್ ಗಳನ್ನು ತೆರೆಯುವ ದಿನಾಂಕ: 12-12-2025<br>4) ಆರ್ಥಿಕ ಬಿಡ್ ಗಳನ್ನು ತೆರೆಯುವ ದಿನಾಂಕ: 15-12-2025 |
| 2 | ಅತ್ತಿಗೆರೆಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಬೀದಿದೀಪ ಸಾಮಗ್ರಿ ಖರೀದಿ ಮತ್ತು ನಿರ್ವಹಣೆ.<br>15ನೇ ಹಣಕಾಸು ಯೋಜನೆ<br>ಟೆಂಡರ್ ಸಂಖ್ಯೆ: 2025-26 RDPR/2025-26/SE3091/CALL-2<br>ಮೊತ್ತ:200000.00 | 1) ಮುಂಗಡ ಕೇವಣಿ ಮೊತ್ತ ರೂ ಅಂದಾಜು ಮೊತ್ತದ ಶೇ 2.5ರ ಮೊತ್ತವನ್ನು ಡಿ ಡಿ ರೂಪದಲ್ಲಿ ಸಲ್ಲಿಸುವುದು<br>2) ಪ್ರತಿಯೊಂದು ಕಾಮಗಾರಿಗೂ ಪ್ರತ್ಯೇಕ ಅರ್ಜಿ ಸಲ್ಲಿಸುವುದು |
| 3 | ಅತ್ತಿಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಕುಡಿಯುವ ನೀರು ಸಾಮಗ್ರಿ ಖರೀದಿ ಮತ್ತು ನಿರ್ವಹಣೆ 15ನೇ ಹಣಕಾಸು ಯೋಜನೆ ಟೆಂಡರ್ ಸಂಖ್ಯೆ: 2025-26 RDPR/2025-26/IND11892/ CALL-2<br>ಮೊತ್ತ:235409.00 | 3) ವ್ಯವಹರಿಸ ಬೇಕಾದ ಅಧಿಕಾರಿ ಹಾಗೂ ವಿಳಾಸ ಮತ್ತು ದೂರವಾಣಿ ಸಂಖ್ಯೆ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಗ್ರಾಮಪಂಚಾಯತಿ ಅತ್ತಿಗೆರೆ ಮೊ: 8951079840.<br>4) ಟೆಂಡರ್ ರದ್ದು ಪಡಿಸುವ ಅಥವಾ ಹಿಂಪಡೆಯುವ ಅಧಿಕಾರಿವನ್ನು ಗ್ರಾಮಪಂಚಾಯತಿ ಕಾಯ್ದಿರಿಸಿಕೊಂಡಿರುತ್ತದೆ. |

ಈ ಟೆಂಡರ್ ಪ್ರಕ್ರಿಯೆಯು ತಾಂತ್ರಿಕ ತೊಂದರೆ ಮತ್ತು ಇತರೆ ವಿಷಯಗಳಿಂದ ರದ್ದತಿಯಾದರೆ ಮತ್ತೊಮ್ಮೆ ಪತ್ರಿಕಾ ಪ್ರಕಟಣೆ ಮಾಡಲಾಗುವುದಿಲ್ಲ ಹೆಚ್ಚಿನ ಮಾಹಿತಿಗಾಗಿ ಅಧಿಕೃತ ಪೋರ್ಟಲ್ www.kppp.karnataka.gov.in ನಲ್ಲಿ ನೋಡಿಕೊಳ್ಳುವುದು ಕಛೇರಿ ವೇಳೆಯಲ್ಲಿ ಗ್ರಾಮಪಂಚಾಯತಿಯನ್ನು ಸಂಪರ್ಕಿಸುವುದು.

**ಸಹಿ/-**
**ಅಧ್ಯಕ್ಷರು**
**ಗ್ರಾಮ ಪಂಚಾಯಿತಿ ಅತ್ತಿಗೆರೆ**

**ಸಹಿ/-**
**ಪಂಚಾಯಿತಿ ಅಭಿವೃದ್ಧಿ ಅಧಿಕಾರಿ**
**ಗ್ರಾಮ ಪಂಚಾಯಿತಿ ಅತ್ತಿಗೆರೆ**


## ಸಿಎಂ-ಡಿಸಿಎಂ ಭಾಯಿ ಭಾಯಿ : ಬೆಂಬಲಿಗರು ಫುಲ್ ಕನ್‌ಫ್ಯೂಸ್



**ಬೆಂಗಳೂರು:** ಅಧಿಕಾರ ಹಂಚಿಕೆಗೆ ಸಂಬಂಧಪಟ್ಟಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಪರಸ್ಪರ ಉಪಾಹಾರಕೂಟಗಳ ಮೂಲಕ ರಾಜಿಸಂಧಾನದಲ್ಲಿ ತೊಡಗಿಸಿಕೊಂಡಿದ್ದರೆ, ಅವರನ್ನು ಬೆಂಬಲಿಸಿ ಬಹಿರಂಗ ಹೇಳಿಕೆಗಳನ್ನು ನೀಡಿದ್ದ ಸಚಿವರು, ಶಾಸಕರು ಕಕ್ಕಾಬಿಕ್ಕಿಯಾಗಿದ್ದಾರೆ.

ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗಲೇ ಬೇಕು ಎಂದು ಕೆಲವು ಶಾಸಕರು ದೆಹಲಿ ಯಾತ್ರೆ ನಡೆಸಿದ್ದರು, ಬಹಿರಂಗ ಹೇಳಿಕೆಗಳನ್ನು ನೀಡಿ, ಪಕ್ಷದ ಶಿಸ್ತು ಸಮಿತಿಯ ನೋಟೀಸ್‌ಗಳನ್ನು ಲೆಕ್ಕಿಸದೆ ತಮ ವಾದವನ್ನು ಪುನರುಚ್ಚರಿಸಿದ್ದರು. ಅವರ್ಯಾರೂ ಈಗ ಸಂಧಾನ ಪ್ರಕ್ರಿಯೆಗಳಲ್ಲಿ ಭಾಗಿಯಾಗಿಲ್ಲ.

ಇತ್ತ ಸಿದ್ದರಾಮಯ್ಯ ಅವರನ್ನೇ ಅಧಿಕಾರದಲ್ಲಿ ಮುಂದುವರಿಸಬೇಕು. ಯಾವುದೇ ಕಾರಣಕ್ಕೂ ಪದಚ್ಯುತಿಗೊಳಿಸಬಾರದು ಎಂದು ಸಚಿವರಾದ ಪ್ರತಿ ಸತೀಶ್ ಜಾರಕಿಹೊಳಿ, ಹೆಚ್.ಸಿ.ಮಹದೇವಪ್ಪ, ಸಂತೋಷ್ ಲಾಡ್, ದಿನೇಶ್ ಗುಂಡೂರಾವ್ ಸೇರಿದಂತೆ ಹಲವಾರು ಮಂದಿ ಪೇಚಿಗೆ ಸಿಲುಕಿದ್ದಾರೆ.

ಮಾಜಿ ಸಚಿವ ಕೆ.ಎನ್.ರಾಜಣ್ಣ ನೇರವಾಗಿ ಡಿ.ಕೆ.ಶಿವಕುಮಾರ್ ವಿರುದ್ಧ ಹರಿಹಾಯ್ದಿದ್ದರಲ್ಲದೆ, ಇನ್ನೂ ಒಂದು ಹೆಜ್ಜೆ ಮುಂದೆ ಹೋಗಿ ತುಮಕೂರು ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ವಾಷ್ ಔಟ್ ಮಾಡುವುದಾಗಿ ಎಚ್ಚರಿಕೆ ನೀಡಿದ್ದರು.

ಅಧಿಕಾರ ಹಂಚಿಕೆಯ ಗೊಂದಲಗಳು ಕಳೆದ 20 ದಿನಗಳಿಗಿಂತಲೂ ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ನಡುವೆ ಕಾವೇರಿದ ಚರ್ಚೆಗಳಿಗೆ ಕಾರಣವಾಗಿತ್ತು. ಶಾಸಕರು, ಸಚಿವರಷ್ಟೆ ಅಲ್ಲದೆ ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿಯವರು ಪಕ್ಷದ ಶಿಸ್ತು ಉಲ್ಲಂಘನೆ ಮಾಡಿ ಅತಿರೇಕಕ್ಕೆ ಹೋಗುತ್ತಿರುವ ಸಂದರ್ಭದಲ್ಲಿ ಹೈಕಮಾಂಡ್ ನಾಯಕರು ಮಧ್ಯ ಪ್ರವೇಶಿಸಿದರು.

ಇಬ್ಬರನ್ನೂ ದೆಹಲಿಗೆ ಕರೆಸಿಕೊಂಡು ಮಾತುಕತೆ ನಡೆಸುವ ಮೂಲಕ ಎಲ್ಲವನ್ನು ಸುಸೂತ್ರವಾಗಿ ಬಗೆಹರಿಸುವ ಇಂಗಿತ ವ್ಯಕ್ತಪಡಿಸಿದ್ದರು. ಈ ನಡುವೆ ಏಕಾಏಕಿ ಕಾರ್ಯತಂತ್ರ ಬದಲಾಯಿಸಿದ ವರಿಷ್ಠರು, ದೆಹಲಿಯ

ಸಂಧಾನದ ಬದಲಾಗಿ, ಬೆಂಗಳೂರಿನಲ್ಲಿಯೇ ಇಬ್ಬರು ನಾಯಕರು ಪರಸ್ಪರ ಮಾತುಕತೆ ನಡೆಸುವ ಮೂಲಕ ಗೊಂದಲಗಳನ್ನು ಬಗೆಹರಿಸಿಕೊಳ್ಳಬೇಕು, ಆನಂತರ ಅಗತ್ಯವಾದರೆ ದೆಹಲಿಗೆ ಬರಲಿ ಎಂದು ಸಂದೇಶ ರವಾನಿಸಿದ್ದರು.

ಅದರಂತೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿ ಅವರಿಗೆ ಕರೆ ಮಾಡಿ, ಹೈಕಮಾಂಡ್ ಸಂದೇಶವನ್ನು ತಲುಪಿಸಿದ್ದರು. ವರಿಷ್ಠರ ಸೂಚನೆಯ ಮೇರೆಗೆ ಕಳೆದ ಶನಿವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಉಪಹಾರ ಕೂಟಕ್ಕೆ ಆಹ್ವಾನಿಸಿದರು. ಆ ಸಂದರ್ಭದಲ್ಲಿ ಬೇರೆ ಯಾವ ನಾಯಕರಿಗೂ ಮಧ್ಯ ಪ್ರವೇಶಕ್ಕೆ ಅವಕಾಶ ನೀಡಿರಲಿಲ್ಲ.

ಬಳಿಕ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯವರನ್ನು ತಮ್ಮ ನಿವಾಸಕ್ಕೆ ಆಹ್ವಾನಿಸಿ ಇಂದು ಎರಡನೇ ಹಂತದ ಉಪಹಾರಕೂಟ ಮತ್ತು ಸಂಧಾನ ಪ್ರಕ್ರಿಯೆಗಳನ್ನು ನಡೆಸಲಾಗಿದೆ.

ಸಚಿವ ಸಂಪುಟ ವಿಸ್ತರಣೆಯಾಗಲಿದೆ, ತಮಗೆ ಅದೃಷ್ಟ ಒಲಿಯಲಿದೆ ಎಂದು ಕಾದು ಕುಳಿತಿದ್ದ ಹಲವಾರು ಮಂದಿಗೆ ಈ ಸಂಧಾನ ನಿರಾಶೆಯುಂಟು ಮಾಡಿದೆ.

ಅಧಿಕಾರದ

' ಸೂತ್ರ ಯಾರತ್ತ ವಾಲಲಿದೆ ಎಂಬ ಸ್ಪಷ್ಟತೆ ಇಲ್ಲದೆ ಕೆಲವರು ಗೊಂದಲಕ್ಕೆ ಒಳಗಾಗಿ, ಅಡ್ಡಗೋಡೆಯ ಮೇಲೆ ದೀಪ ಇಟ್ಟಂತೆ ಮಾತನಾಡುತ್ತಿದ್ದರು. ಇನ್ನು ಕೆಲವರು ನಿರ್ದಿಷ್ಟವಾಗಿ ಸಿದ್ದರಾಮಯ್ಯ ಮತ್ತು ಡಿಕೆ ಶಿವಕುಮಾರ್ ಅವರ ಬಣಗಳಲ್ಲಿ ಗುರುತಿಸಿಕೊಳ್ಳುವ ಮೂಲಕ ಚಟುವಟಿಕೆಗಳಲ್ಲಿ ಸಕ್ರಿಯರಾಗಿದ್ದರು.

ಡಿ.ಕೆ.ಶಿವಕುಮಾರ್ ನಮಲ್ಲಿ ಯಾವುದೇ ಬಣಗಳಿಲ್ಲ. 140 ಮಂದಿ ಶಾಸಕರು ನನ್ನ ಪರವಾಗಿದ್ದಾರೆ. ಸಿದ್ದರಾಮಯ್ಯ ಮತ್ತು ತಾವು ಅಣ್ಣ-ತಮಂದಿರಂತೆ ಇದ್ದೇವೆ ಎಂದು ಹೇಳುವ ಮೂಲಕ ವಾತಾವರಣ ತಿಳಿಗೊಳಿಸುವ ಪ್ರಯತ್ನ ಮಾಡಿದ್ದಾರೆ.

ಸಿದ್ದರಾಮಯ್ಯ ಪರವಾಗಿ ಧ್ವನಿಯೆತ್ತಿದ ಸಚಿವರಿಗೆ ಈಗ ಇರಿಸು ಮುರಿಸು ಆರಂಭವಾಗಿದೆ.

ಅಧಿಕಾರ ಹಂಚಿಕೆಯ ಸಂಧಾನದಲ್ಲಿ ಡಿ.ಕೆ.ಶಿವಕುಮಾರ್ ಮತ್ತು ಸಿದ್ದರಾಮಯ್ಯ ಇಬ್ಬರು ಮಾತ್ರ ಕಾಣಿಸಿಕೊಳ್ಳುತ್ತಿದ್ದಾರೆ. ಈ ಹಿಂದೆ ಚುನಾವಣೆಯ ಸಂದರ್ಭದಲ್ಲಿ ಸಾಮೂಹಿಕ ನಾಯಕತ್ವದ ಮಂತ್ರ ಜಪಿಸಲಾಗಿತ್ತು. ಅಧಿಕಾರಕ್ಕೆ ಬಂದ ಬಳಿಕ ಎಲ್ಲವೂ ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ಅವರ ಶಕ್ತಿ ಕೇಂದ್ರಗಳ ಸುತ್ತಲೇ ಗಿರಿಕಿ ಹೊಡೆಯುತ್ತಿವೆ ಎಂಬ ಆಕ್ಷೇಪಗಳು ಕೇಳಿಬರುತ್ತಿವೆ.

# ಕ್ರೀಡೆಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ನಮ್ಮ ಸಂಸ್ಥೆ ಸದಾ ಮುಂದೆ : ಅವ್ವಾರು ಮಂಜುನಾಥ್




**ಬಳ್ಳಾರಿ:** ಬಳ್ಳಾರಿ ನಗರದ ಯುವ ಬ್ಯಾಡ್ಮಿಂಟನ್ ಪ್ರತಿಭೆಗಳು ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿದ್ದು ಇವರ ಕ್ರೀಡಾ ಸಾಧನೆ ರಾಷ್ಟ್ರದ ಗಮನ ಸೆಳೆಯುವಂತಾಗಲಿ ಎಂದು ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕೆ ಸಂಸ್ಥೆಯ ಅಧ್ಯಕ್ಷರಾದ ಅವ್ವಾರು ಮಂಜುನಾಥ್ ಅವರು ಶುಭ ಹಾರೈಸಿದ್ದಾರೆ.

ರಾಜ್ಯಮಟ್ಟದ ಬ್ಯಾಡ್ಮಿಂಟನ್ ಕ್ರೀಡಾಕೂಟದಲ್ಲಿ ಪಾಲ್ಗೊಂಡಿದ್ದ ಬಳ್ಳಾರಿ ನಗರದ ಯುವ ಪ್ರತಿಭೆಗಳು ಮತ್ತು ವಿದ್ಯಾರ್ಥಿನಿಯರಾದ ಕೆ. ಹಾಶಿಕಾ ಸಾಯಿ, ಟಿ. ಸಮುದ್ವಿತ ಮತ್ತು ಎಸ್. ಮನೋಜ್ಞಾ ಸಾಯಿ ಅವರು, ಬ್ಯಾಡ್ಮಿಂಟನ್ ಕ್ರೀಡೆಯಲ್ಲಿ ಮಹತ್ತರ ಸಾಧನೆ ಮಾಡಿರುವ ಹಿನ್ನಲೆಯಲ್ಲಿ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕೆ ಸಂಸ್ಥೆಯು ಇವರನ್ನು ಮಂಗಳವಾರ ಅಭಿನಂದಿಸಿ, ಗೌರವಿಸಿ ಪ್ರೋತ್ಸಾಹಿಸಿತು.

ಬಳ್ಳಾರಿ ಕಲೆ, ಕ್ರೀಡೆ, ಸಾಹಿತ್ಯ ಮತ್ತು ವಿವಿಧ ಕ್ಷೇತ್ರಗಳಲ್ಲಿ ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಖ್ಯಾತಿಯನ್ನು ಪಡೆದಿದೆ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳಾದ ಕೆ. ಹಾಶಿಕಾ ಸಾಯಿ, ಟಿ. ಸಮುದ್ವಿತ ಮತ್ತು ಎಸ್. ಮನೋಜ್ಞಾ ಸಾಯಿ ಅವರ ಸಾಧನೆಯು ಗಮನಾರ್ಹವಾದದ್ದು. ಈ ಯುವ ಪ್ರತಿಭೆಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯು ಅಭಿನಂದಿಸುತ್ತಿದೆ ಎಂದರು.

ಅಭಿನಂದಿತ ವಿದ್ಯಾರ್ಥಿನಿಯರಾದ ಕೆ. ಹಾಶಿಕಾ ಸಾಯಿ, ಟಿ. ಸಮುದ್ವಿತ ಮತ್ತು ಎಸ್. ಮನೋಜ್ಞಾ ಸಾಯಿ ಅವರು, ಬ್ಯಾಡ್ಮಿಂಟನ್ ಕ್ರೀಡೆಯಲ್ಲಿ ಅತ್ಯಂತ ಕೆಳ ಹಂತದಿಂದ ನಿರಂತರ ಸಾಧನೆಗಳ ಮೆಟ್ಟಿಲುಗಳನ್ನು ಹತ್ತುತ್ತಿರುವ ನಮಗೆ, ಬಿಡಿಸಿಸಿ&ಐ ಅಭಿನಂದಿಸುತ್ತಿರುವುದಕ್ಕೆ ಕೃತಜ್ಞತೆಗಳನ್ನು ಸಲ್ಲಿಸುತ್ತೇವೆ. ನಿಮ್ಮೆಲ್ಲರ ಶುಭ ಹಾರೈಕೆ ಮತ್ತು ಪ್ರೋತ್ಸಾಹಗಳ ಕಾರಣ ರಾಷ್ಟ್ರಮಟ್ಟದಲ್ಲಿ ವಿಶೇಷ ಸಾಧನೆಗೆ ಪ್ರಾಮಾಣಿಕ ಪ್ರಯತ್ನ ಮಾಡುತ್ತೇವೆ ಎಂದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಗೌರವ ಕಾರ್ಯದರ್ಶಿಗಳಾದ ಕೆ.ಸಿ. ಸುರೇಶಬಾಬು ಅವರು, ಯುವ ಕ್ರೀಡಾಪಟುಗಳು ವಿದ್ಯಾರ್ಥಿ ಜೀವನದಲ್ಲಿಯೇ ಜಿಲ್ಲಾ ಮತ್ತು ರಾಜ್ಯ ಮಟ್ಟದ ವಿವಿಧ ಕ್ರೀಡಾಕೂಟಗಳಲ್ಲಿ ಪಾಲ್ಗೊಂಡು ವಿಶೇಷ ಸಾಧನೆಗಳನ್ನು ಮಾಡಿದ್ದಾರೆ. ಈ ನಿಟ್ಟಿನಲ್ಲಿ ನಮ್ಮ ಸಂಸ್ಥೆಯು ಅವರ ಸಾಧನೆಯನ್ನು ಅಭಿನಂದಿಸಿ, ಭವಿಷ್ಯದ ಸ್ಪರ್ಧೆಗಳಲ್ಲಿ ಸಾಧನೆ ಮಾಡಲು ಪ್ರೋತ್ಸಾಹಿಸುತ್ತಿದೆ ಎಂದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಕಾರ್ಯಕಾರಿ ಸಮಿತಿ ಸದಸ್ಯ ವೇಣುಗೋಪಾಲ್ ಗುಪ್ತ ಅವರು ಕ್ರೀಡಾಪಟುಗಳನ್ನು ಸಭೆಗೆ ಪರಿಚಯಿಸಿದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ನಿಕಟಪೂರ್ವ ಅಧ್ಯಕ್ಷರಾದ ಯಶವಂತರಾಜ್ ನಾಗಿರೆಡ್ಡಿ, ಹಿರಿಯ ಉಪಾಧ್ಯಕ್ಷರಾದ ಎಸ್. ದೊಡ್ಡನಗೌಡ, ಉಪಾಧ್ಯಕ್ಷರಾದ ಸೊಂತ ಗಿರಿಧರ, ಪಿ. ಪಾಲಣ್ಣ, ಜಂಟಿ ಕಾರ್ಯದರ್ಶಿಗಳಾದ ಡಾ. ಮರ್ಚೆಡ್ ಮಲ್ಲಿಕಾರ್ಜುನಗೌಡ, ವಿ. ರಾಮಚಂದ್ರ, ಖಜಾಂಚಿಗಳಾದ ನಾಗಳ್ಳಿ ರಮೇಶ್, ಮಾಜಿ ಅಧ್ಯಕ್ಷರುಗಳಾದ ಸಿ. ಶ್ರೀನಿವಾಸರಾವ್, ಬಿ. ಮಹಾರುದ್ರಗೌಡ ಮತ್ತು ಕಾರ್ಯಕಾರಿ ಸಮಿತಿ ಸದಸ್ಯರು, ಕ್ರೀಡಾಪಟುಗಳ ಪೋಷಕರು ಉಪಸ್ಥಿತರಿದ್ದರು.

# ಶಾಲೆ, ವಸತಿ ನಿಲಯಗಳಲ್ಲಿ ಮಕ್ಕಳ ಸಂಪೂರ್ಣ ಸುರಕ್ಷತೆಗೆ ಆದ್ಯತೆ ನೀಡಿ: ಶಶಿಧರ್ ಕೋಸಂಬೆ



**ರಾಮನಗರ:** ಮಕ್ಕಳಿಗೆ ಉತ್ತಮ ಶಿಕ್ಷಣ, ಆಹಾರ, ಆರೋಗ್ಯ, ವಸತಿ ಸೌಲಭ್ಯ ಕಲ್ಪಿಸಲು ಸರ್ಕಾರವು ಹಲವಾರು ಸೌಲಭ್ಯಗಳನ್ನು ಕಲ್ಪಿಸಿದೆ. ಜಿಲ್ಲೆಯ ಸರ್ಕಾರಿ ಶಾಲೆಗಳು, ವಸತಿ ನಿಲಯಗಳಲ್ಲಿ ಕಡ್ಡಾಯವಾಗಿ ಮಕ್ಕಳ ಸಂಪೂರ್ಣ ಸುರಕ್ಷತೆಗೆ ಆದ್ಯತೆ ನೀಡಬೇಕೆಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರಾದ ಶಶಿಧರ್ ಕೋಸಂಬೆ ಅವರು ಹೇಳಿದರು.

ಅವರು ಡಿ.02ರ ಮಂಗಳವಾರ ನಗರದ ಪ್ರವಾಸಿ ಮಂದಿರದಲ್ಲಿ ಹಮ್ಮಿಕೊಳ್ಳಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಡಾ. ತಿಪ್ಪೇಸ್ವಾಮಿಯವರೊಂದಿಗೆ ಇಂದು ಬೆಂಗಳೂರು ದಕ್ಷಿಣ ಜಿಲ್ಲಾ ಪ್ರವಾಸ ಕೈಗೊಳ್ಳಲಾಗಿತ್ತು, ರಾಮನಗರದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಗೆ ಭೇಟಿ ನೀಡಿ ವಸತಿ ನಿಲಯಕ್ಕೆ ಭೇಟಿ ನೀಡಿ ಮಕ್ಕಳ ಸುರಕ್ಷತಾ ಕ್ರಮಗಳನ್ನು ಪರಿಶೀಲಿಸಲಾಯಿತು, ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಡಾ. ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಯಲ್ಲಿ 197 ಮಕ್ಕಳಿದ್ದು, ಒಂದು ಕೊಠಡಿಯಲ್ಲಿ 50 ಮಕ್ಕಳಿರುವುದು ಕಂಡುಬಂದಿದ್ದು, ಇಕ್ಕಟ್ಟಿನ ಸ್ಥಳದಲ್ಲಿ ಮಕ್ಕಳು ಮಲಗುತ್ತಿದ್ದಾರೆ. ಅವರಿಗೆ ಆಟದ ಮೈದಾನ ಇರುವುದಿಲ್ಲ, ಒಟ್ಟಾರೆ ಮಕ್ಕಳಿಗೆ ಸಂಪೂರ್ಣ ಸೌಲಭ್ಯಗಳು ಸಿಗುತ್ತಿಲ್ಲ. ಮಕ್ಕಳ ಸುರಕ್ಷತಾ ದೃಷ್ಟಿಯಿಂದ ಹೆಚ್ಚು ಸಿ.ಸಿ ಟಿ.ವಿ ಕ್ಯಾಮರಾ ಅಳವಡಿಸಬೇಕು. ವಸತಿ ನಿಲಯದ ಸ್ವಂತ ಕಟ್ಟಡದ ಕಾಮಗಾರಿ ಶೀಘ್ರವಾಗಿ ಪ್ರಾರಂಭಿಸಲು ಸೂಕ್ತ ಕ್ರಮವಹಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರರಿಗೆ ಸೂಚಿಸಿ, ಈ ಬಗ್ಗೆ ಮೂರು ದಿನಗಳಲ್ಲಿ ವಿಸ್ತೃತ ವರದಿ ನೀಡಬೇಕು ಹಾಗೂ ಅಧಿಕಾರಿಗಳು ನಿಯಮಿತವಾಗಿ ವಸತಿ ನಿಲಯಗಳಿಗೆ ಭೇಟಿ ನೀಡಿ ಮಕ್ಕಳಿಗೆ ನೀಡಲಾಗುತ್ತಿರುವ ಆಹಾರ, ವಸತಿ ಸೌಲಭ್ಯಗಳನ್ನು ಪರಿಶೀಲಿಸುವಂತೆ ತಿಳಿಸಲಾಯಿತು ಎಂದರು.

ಪತ್ರಿಕಾಗೋಷ್ಠಿಯಲ್ಲಿ ಮಕ್ಕಳ ರಕ್ಷಣಾಧಿಕಾರಿ ರಜನಿ ಉಪಸ್ಥಿತರಿದ್ದರು.

ಪತ್ರಿಕಾ ಗೋಷ್ಠಿಗೂ ಮುನ್ನ ಅಧಿಕಾರಿಗಳ ಸಭೆ: ಪತ್ರಿಕಾ ಗೋಷ್ಠಿಗೂ ಮುನ್ನ ನಗರದ ಪ್ರವಾಸಿ ಮಂದಿರದಲ್ಲಿ ಅಧಿಕಾರಿಗಳ ಸಭೆಯನ್ನು ಆಯೋಜಿಸಲಾಗಿತ್ತು. ಈ ಸಭೆಯಲ್ಲಿ ಮಕ್ಕಳ ಸುರಕ್ಷತೆಗೆ ಸಂಬಂಧಿಸಿದಂತೆ ಕೈಗೊಳ್ಳಬೇಕಾದ ಸೂಕ್ತ ಕ್ರಮಗಳ ಕುರಿತು ಚರ್ಚಿಸಿ ನಿರ್ದೇಶಿಸಿದರು.

ಈ ಸಂದರ್ಭದಲ್ಲಿ ಡಿವೈಎಸ್‌ಪಿ ಶ್ರೀನಿವಾಸ್, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿದೇಶಕರಾದ ಶಿವಕುಮಾರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿ ಲಕ್ಷ್ಮೀದೇವಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಜನಿ, ಶಾಲಾ ಶಿಕ್ಷಣ ಇಲಾಖೆಯ ಚನ್ನಪಟ್ಟಣ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿ ಸೇರಿದಂತೆ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು

# ಸಹಾಯ ಧನಕ್ಕಾಗಿ ಅರ್ಜಿ ಆಹ್ವಾನ

**ದಾವಣಗೆರೆ :** ಪ್ರಸಕ್ತ ಸಾಲಿನ ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆಯಡಿ ಧರ್ತಿ ಅಭಾ ಜನ ಜಾತಿಯ ಗ್ರಾಮ ಉತ್ಕರ್ಷ ಅಭಿಯಾನದಡಿ ಮೀನುಮಾರಾಟಗಾರರಿಂದ ಸಹಾಯಧನ ಯೋಜನೆಗೆ ಅರ್ಜಿ ಆಹ್ವಾನಿಸಲಾಗಿದೆ.

ಮಲ್ಲಪುರ, ಗಿರಿಯಾಪುರ, ಕಾಟೇನಹಳ್ಳಿ, ಚಿಕ್ಕತೊಗಲೇರಿ, ಹಿರೇ ತೊಗಲೇರಿ, ಕರಿಲಕ್ಕನಹಳ್ಳಿ ಮತ್ತು ಕೋಡಿಹಳ್ಳಿ ಈ ಗ್ರಾಮಗಳಲ್ಲಿನ ಪರಿಶಿಷ್ಟ ಪಂಗಡದ ಮೀನುಗಾರರು ಅರ್ಜಿಯನ್ನು ಡಿಸೆಂಬರ್ 20 ರೊಳಗಾಗಿ ಕಚೇರಿಗೆ ಸಲ್ಲಿಸಬೇಕೆಂದು ಎಂದು ಮೀನುಗಾರಿಕೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

# ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

**ಗದಗ :** 2025–26 ನೇ ಸಾಲಿನಲ್ಲಿ ಪ್ರಧಾನ ಮಂತ್ರಿ ಮತ್ಸ ಸಂಪದ ಯೋಜನೆಯಡಿ ಧರ್ತಿ ಆಭಾ ಜನ ಜಾತಿಯ ಗ್ರಾಮ ಉತ್ಕರ್ಷ ಅಭಿಯಾನ ಕಾರ್ಯಕ್ರಮದಡಿ ಪರಿಶಿಷ್ಟ ಪಂಗಡ ಸಮುದಾಯಕ್ಕೆ ಸೇರಿದ ಗದಗ ಜಿಲ್ಲೆಯ ರೋಣ ತಾಲ್ಲೂಕಿನ ಅಸೂಟಿ ಗ್ರಾಮ ಪಂಚಾಯತ ವ್ಯಾಪ್ತಿಯ ಮೇಲ್ಮಟ ಲಕ್ಷೆ ೀಶ್ವರ ತಾಲ್ಲೂಕಿನ ಗೋವನಾಳ ಗ್ರಾಮದ ಪಂಚಾಯತ ವ್ಯಾಪ್ತಿಯ ವಡೇಯರ ಮಲ್ಲಾಪೂರ, ಶಿರಹಟ್ಟಿ ತಾಲ್ಲೂಕಿನ ಮಾಚೇನಗಳ್ಳಿ ಗ್ರಾಮ ಪಂಚಾಯತ ವ್ಯಾಪ್ತಿಯ ಭಾವನೂರ ಹಾಗೂ ಮುಂಡರಗಿ ತಾಲ್ಲೂಕಿನ ಹಾರೋಗೇರಿ ಗ್ರಾಮ ಪಂಚಾಯತ ವ್ಯಾಪ್ತಿಯ ಕೇಲೂರ ಗ್ರಾಮದ ಮೀನುಗಾರರಿಗೆ ಮಾತ್ರ ಅನ್ವಯಿಸುವಂತೆ ಮೀನು ಮಾರಾಟಕ್ಕಾಗಿ ಐಸ್ ಬಾಕ್ಸ್ ನೊಂದಿಗೆ ದ್ವಿಚಕ್ರ ವಾಹನ ಖರೀದಿಗೆ ಸಹಾಯಧನ ನೀಡಲು ಗದಗ ಜಿಲ್ಲೆಗೆ ದ್ವಿಚಕ್ರ ವಾಹನ 01 ಗುರಿ ನಿಗದಿಪಡಿಸಿದೆ.ಅರ್ಜಿಯನ್ನು ಡಿಸೆಂಬರ್ 20 ರೊಳಗಾಗಿ ಸಂಬಂಧಿಸಿದ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರು ಕಛೇರಿಯಲ್ಲಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ರೋಣ ತಾಲ್ಲೂಕಿನ ಮೀನುಗಾರರು ಮೀನುಗಾರಿಕೆ ಸಹಾಯಕ ನಿರ್ದೇಶಕರು, ಗದಗ ಮೊ.ಸಂ. (8095792530) ಹಾಗೂ ಲಕ್ಷೆ ೀಶ್ವರ, ಶಿರಹಟ್ಟಿ ಹಾಗೂ ಮುಂಡರಗಿ ತಾಲ್ಲೂಕಿನ ಮೀನುಗಾರರು ಮೀನುಗಾರಿಕೆ ಸಹಾಯಕ ನಿರ್ದೇಶಕರು, ಮುಂಡರಗಿ ರವರನ್ನು (8095792530) ಸಂಪರ್ಕಿಸಬಹುದಾಗಿದೆ.


# ಆಕ್ಷೇಪಣೆ ಸಲಹೆ– ಸೂಚನೆ ಇದ್ದಲ್ಲಿ ವರದಿ ಸಲ್ಲಿಸಲು ಸೂಚನೆ

**ಹಾಸನ :** ಹಾಸನ ಮಹಾನಗರಪಾಲಿಕೆ ವ್ಯಾಪ್ತಿಯ ಎನ್. ಆರ್.ವೃತ್ತದಲ್ಲಿ ಮೈಸೂರು ಮಹಾರಾಜರಾದ ದಿವಂಗತ ಶ್ರೀ.ನರಸಿಂಹರಾಜ ಒಡೆಯರ್ ರವರ ಪುತ್ಥಳಿಯನ್ನು ಪ್ರತಿಷ್ಠಾಪಿಸಲು ದಿನಾಂಕ:07–02–2025 ರಂದು ಹಾಸನ ಮಹಾನಗರ ಪಾಲಿಕೆ ಸಾಮಾನ್ಯ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಲಾಗಿರುತ್ತದೆ. ಅದರಂತೆ ಸದರಿ ವಿಷಯದ ಬಗ್ಗೆ ಸಾರ್ವಜನಿಕರಿಂದ ಯಾವುದಾದರೂ ಆಕ್ಷೇಪಣೆ/ಸಲಹೆ/ಸೂಚನೆಗಳು ಇದ್ದಲ್ಲಿ 30 ದಿನಗಳೊಳಗಾಗಿ ಈ ಕಚೇರಿಗೆ ವರದಿ ಸಲ್ಲಿಸಲು ಮಹಾನಗರ ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ.

# ಬೀದಿ ನಾಯಿಗಳ ಉಪಟಳ ತಡೆಯಲು ಕ್ರಮ

**ಚಿಕ್ಕಬಳ್ಳಾಪುರ:** ಚಿಂತಾಮಣಿ ನಗರ ಸ್ಥಳೀಯ ಸಂಸ್ಥೆಯ ವ್ಯಾಪ್ತಿಯಲ್ಲಿನ ಖಾಸಗಿ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳು, ಖಾಸಗಿ ಹಾಗೂ ಸರ್ಕಾರಿ ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣಗಳು, ಬಸ್ ನಿಲ್ದಾಣಗಳು, ರೈಲ್ವೆ ನಿಲ್ದಾಣಗಳ ಮುಖ್ಯಸ್ಥರಿಗೆ ತಿಳಿಸುವುದೇನೆಂದರೆ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸ್ವಯಂ ಪ್ರೇರಿತ ರಿಟ್ ಅರ್ಜಿ ಸಂಖ್ಯೆ 5/2025 ರಲ್ಲಿ ನೀಡಿರುವ ನಿರ್ದೇಶನದಂತೆ ತಮ್ಮ ಸಂಸ್ಥೆಯ ಆವರಣದಲ್ಲಿ ಯಾವುದೇ ಬೀದಿ ನಾಯಿಗಳು ವಾಸವಿದ್ದಲ್ಲಿ ಅದನ್ನು ಪರಿಶೀಲಿಸಿ ಕೂಡಲೇ ಅದರ ಸಂಖ್ಯೆಯನ್ನು ಲೆಕ್ಕ ಮಾಡಿ ನಗರಸಭೆಯ ಪೌರಾಯುಕ್ತರಿಗೆ ತಿಳಿಸುವುದು. ತಮ್ಮ ಸಂಸ್ಥೆಯ ಆವರಣದಲ್ಲಿ ಬೀದಿ ನಾಯಿಗಳ ಉಪಟಳ ತಡೆಯಲು ಹಾಗೂ ಅವುಗಳ ಪ್ರದೇಶ ನಿಯಂತ್ರಿಸಲು ಕ್ರಮ ವಹಿಸುವುದು. ನಗರ ಸ್ಥಳೀಯ ಸಂಸ್ಥೆಯಿಂದ ಬೀದಿ ನಾಯಿಗಳನ್ನು ಸ್ಥಳಾಂತರಿಸಲು ಸಹಕರಿಸಲು ಹಾಗೂ ಅವುಗಳ ಪ್ರವೇಶ ನಿರ್ಬಂಧಿಸುವುದನ್ನು ಮೇಲ್ವಿಚಾರಣೆ ಮಾಡಲು ತಮ್ಮ ಸಂಸ್ಥೆ ವತಿಯಿಂದ ಒಬ್ಬ ಜವಾಬ್ದಾರಿಯುತ ನೌಕರರನ್ನು ನೋಡಲ್ ಅಧಿಕಾರಿಯಾಗಿ ನೇಮಕ ಮಾಡುವುದು ಹಾಗೂ ಕೈಗೊಂಡ ಕ್ರಮದ ಬಗ್ಗೆ ವರದಿ ನೀಡುವುದು. ಮಾನ್ಯ ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ತಮ್ಮ ಸಂಸ್ಥೆಯ ವ್ಯಾಪ್ತಿಯಲ್ಲಿ ಪುನಃ ನಾಯಿಗಳು ವಾಸ ಮಾಡಲು ಅವಕಾಶ ಕೊಟ್ಟಲ್ಲಿ ಅವನ್ನು ಸ್ಥಳಾಂತರಿಸುವ ವೆಚ್ಚವನ್ನು ತಮ್ಮ ಸಂಸ್ಥೆಯಿಂದ ವಸೂಲಿ ಮಾಡಲಾಗುವುದು. ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶ ಉಲ್ಲಂಘನೆ ಮಾಡಿದಲ್ಲಿ ನ್ಯಾಯಾಲಯದ ಆದೇಶದಂತೆ ತಮ್ಮ ವಿರುದ್ಧ ಕಾನೂನು ಕ್ರಮ ವಹಿಸಲಾಗುವುದು.

# ಕುರ್ಕಿ ಗ್ರಾಮ ಪಂಚಾಯತ್‌ಗೆ ಗಾಂಧಿ ಗ್ರಾಮ ಪುರಸ್ಕಾರ



**ದಾವಣಗೆರೆ:** 2023–2024ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರಕ್ಕೆ ದಾವಣಗೆರೆ ತಾಲೂಕು ಕುರ್ಕಿ ಗ್ರಾಮ ಪಂಚಾಯಿತಿ ಆಯ್ಕೆಯಾಗಿದ್ದು ಮುಖ್ಯಮಂತ್ರಿಗಳು ಹಾಗೂ ಉಪಮುಖ್ಯಮಂತ್ರಿಗಳು ಪ್ರಶಸ್ತಿ ವಿತರಿಸಿದರು.

ಈ ಸಂದರ್ಭದಲ್ಲಿ ಸಿಎಂ ಸಿದ್ದರಾಮಯ್ಯ ಮಾತನಾಡಿ, ನಮ್ಮದು ಹಳ್ಳಿಗಳ ದೇಶ. ಗ್ರಾಮ ಭಾರತ ಅಭಿವೃದ್ಧಿ ಆಗದೆ ದೇಶ ಅಭಿವೃದ್ಧಿ ಸಾಧ್ಯವಿಲ್ಲ. ಹಳ್ಳಿಗಳ ಅಭಿವೃದ್ಧಿಯಲ್ಲಿ ಗ್ರಾಮಸ್ಥರ ಪಾಲ್ಗೊಳ್ಳುವಿಕೆ ಬಹಳ ಮುಖ್ಯ, ಪುರಸ್ಕೃತಗೊಂಡ ದಾವಣಗೆರೆ ತಾಲೂಕು ಕುರ್ಕಿ ಗ್ರಾಮ ಪಂಚಾಯಿತಿ ಬೇರೆ ಗ್ರಾಮ ಪಂಚಾಯತ್‌ಗಳಿಗೆ ಮಾದರಿಯಾಗಲಿ ಎಂದು ಆಶಿಸಿದರು.

ಕುರ್ಕಿ ಗ್ರಾಮ ಪಂಚಾಯಿತಿ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಆಯ್ಕೆಯಾಗಿರುವುದಕ್ಕೆ ಗ್ರಾ. ಪಂ. ಅಧ್ಯಕ್ಷರಾದ ಕೆ.ಜಿ ನಾಗಮ್ಮ, ಪಿಡಿಒ ಐ.ಬಿ ಸುರೇಖಾ, ಗ್ರಾಪಂ ಸದಸ್ಯರುಗಳಿಗೆ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್. ಎಸ್ ಮಲ್ಲಿಕಾರ್ಜುನ್, ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕ ಕೆ. ಎಸ್. ಬಸವಂತಪ್ಪ ಅಭಿನಂದಿಸಿದ್ದಾರೆ.

# ಡಿ.6 ಕಾರ್ಯಕ್ರಮಕ್ಕೆ ಮುಖ್ಯ ಮಂತ್ರಿ ಅವರಿಗೆ ಆಹ್ವಾನ



**ಹಾಸನ :** ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ರವರು, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರವರು ಹಾಗೂ ಗೃಹ ಸಚಿವರಾದ ಡಾ.ಜಿ.ಪರಮೇಶ್ವರ್ ಅವರನ್ನು ಡಿ.6 ರಂದು ಹಾಸನದಲ್ಲಿ ನಡೆಯುವ ಕಾರ್ಯಕ್ರಮಕ್ಕೆ ಇಂದು ಜಿಲ್ಲಾಡಳಿತದಿಂದ ಆಹ್ವಾನಿಸಲಾಯಿತು.

ಕಂದಾಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೃಷ್ಣಬೈರೇಗೌಡ, ರಾಜ್ಯ ಗೃಹ ಮಂಡಳಿ ಅಧ್ಯಕ್ಷರು ಹಾಗೂ ಶಾಸಕರಾದ ಕೆ.ಎಂ.ಶಿವಲಿಂಗೇಗೌಡ, ಜಿಲ್ಲಾಧಿಕಾರಿ ಲತಾ ಕುಮಾರಿ ಅವರು ಖುದ್ದು ಆಹ್ವಾನ ಪತ್ರಿಕೆ ನೀಡಿ ಶ್ರೀಯುತರನ್ನು ಆಹ್ವಾನಿಸಿದರು.

ವಿಧಾನ ಪರಿಷತ್ ಮಾಜಿ ಸದಸ್ಯರಾದ ಎಂ.ಎ. ಗೋಪಾಲಸ್ವಾಮಿ, ಉಪ ವಿಭಾಗಾಧಿಕಾರಿ ಜಗದೀಶ್ ಗಂಗಣ್ಣನವರ್ ಹಾಜರಿದ್ದರು.

# ಚೀಲೂರಿನ ನ್ಯಾಷನಲ್ ಇಂಗ್ಲೀಷ್ ಸ್ಕೂಲ್‌ನಲ್ಲಿ ಶಾಲಾ ವಾರ್ಷಿಕೋತ್ಸವ

**ನ್ಯಾಮತಿ :** ನ್ಯಾಮತಿ ತಾಲೂಕಿನ ಚೀಲೂರಿನ ನ್ಯಾಷನಲ್ ಇಂಗ್ಲೀಷ್ ಸ್ಕೂಲ್‌ನಲ್ಲಿ ಶಾಲಾ ವಾರ್ಷಿಕೋತ್ಸವದ ಎನ್ ಇ ಎಸ್ ಹಬ್ಬದಲ್ಲಿ 2024–25 ನೇ ಸಾಲಿನಲ್ಲಿ 10 ನೇ ತರಗತಿಯ ಪರೀಕ್ಷೆಯಲ್ಲಿ ಅಧಿಕ ಅಂಕಗಳಿಸಿದ 16 ವಿದ್ಯಾರ್ಥಿಗಳಿಗೆ ರಾಷ್ಟ್ರೀಯ ಶಿಕ್ಷಣ ಸಮಿತಿಯ ಕಾರ್ಯದರ್ಶಿ ನಾಗರಾಜ್ ಎಸ್ ಎನ್ , ನಿರ್ದೇಶಕ ಶಿವಕುಮಾರ , ಕರ್ನಾಟಕ ರಾಜ್ಯ ಸರಕಾರಿ ಪ್ರೌಢಶಾಲಾ ಶಿಕ್ಷಕರ ಸಂಘ ಅಧ್ಯಕ್ಷ ಸಿದ್ದಬಸಪ್ಪ ಬಿ , ಪ್ರಾಂಶುಪಾಲ ಆದರ್ಶ ಜಿ ಸಿ, ಕನ್ನಡ ಮಾಧ್ಯಮ ಶಾಲೆಯ ಮುಖ್ಯ ಶಿಕ್ಷಕಿ ಪೂರ್ಣಿಮಾ , ಗ್ರಾಮ ಪಂಚಾಯಿತಿ ಅಧ್ಯಕ್ಷೆ ರೂಪ ಕೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.




# ಕೊಬ್ಬರಿ ಶೇಖರಣಾ ಘಟಕ ನಿರ್ಮಾಣಕ್ಕೆ ಆರ್ಥಿಕ ಸಹಾಯ ಲಭ್ಯ

**ಹಾಸನ :** ಕನಿಷ್ಠ 2.5 ಎಕರೆ ತೆಂಗಿನ ತೋಟ ಹೊಂದಿರುವ ರೈತರಿಗೆ ಕೊಬ್ಬರಿ ಸಂಸ್ಕರಣಾ/ಶೇಖರಣಾ ಘಟಕ (ಪ್ರಾಥಮಿಕ ಸಂಸ್ಕರಣಾ ಘಟಕ) ನಿರ್ಮಾಣಕ್ಕೆ ತೆಂಗು ಅಭಿವೃದ್ಧಿ ಮಂಡಳಿಯಿಂದ ಆರ್ಥಿಕ ಸಹಾಯ ಲಭ್ಯವಿದ್ದು, ಆಸಕ್ತಿ ಹೊಂದಿರುವವರು ಈ ಯೋಜನೆಯ ಸದುಪಯೋಗಪಡಿಸಿಕೊಳ್ಳಬೇಕಾಗಿ ಕೋರಲಾಗಿದೆ. ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕ ಡಿಸೆಂಬರ್ 15 ಆಗಿದ್ದು, ಅರ್ಜಿಗಳನ್ನು ಉಪ ನಿರ್ದೇಶಕರು (ಮಾರ್ಕೆಟಿಂಗ್), ಪ್ರಾದೇಶಿಕ ಕಚೇರಿ, ತೆಂಗು ಅಭಿವೃದ್ಧಿ ಮಂಡಳಿ, ಕೆರಾ ಭವನ, ರಾಯಲ್ ಮೀನಾಕ್ಷಿ ಮಾಲ್ ಎದುರು, ಬನ್ನೇರುಘಟ್ಟ ರಸ್ತೆ, ಹುಳಿಮಾವು, ಬೆಂಗಳೂರು 560076. ದೂರವಾಣಿ–080–26593750 ವಿಳಾಸಕ್ಕೆ ಕಳುಹಿಸಬೇಕಾಗಿ ತಿಳಿಸಲಾಗಿದೆ.

# ಮಕ್ಕಳ ಗ್ರಾಮ ಸಭೆ ಆಯೋಜನೆ

**ರಾಮನಗರ:** ದಿನಾಂಕ 29–11–2025 ರಾಮನಗರ ಬೆಂಗಳೂರು ದಕ್ಷಿಣ ಜಿಲ್ಲೆ ಜಿಲ್ಲೆಯ ಚನ್ನಪಟ್ಟಣ ತಾಲೂಕಿನ ಮಳೂರು ಪಂಚಾಯತ್ ನ್ನ ಉಊಖ ಭೈರ ಪಟ್ಟಣ ಶಾಲೆಯಲ್ಲಿ ಮಕ್ಕಳ ಗ್ರಾಮ ಸಭೆಯನ್ನು ಆಯೋಜಿಸಲಾಗಿತ್ತು 3 ಶಾಲೆಯಿಂದ 70ಮಕ್ಕಳು ಇದರಲ್ಲಿ ಭಾಗವಹಿಸಿ, ಸ್ಥಳೀಯ ಜನಪ್ರತಿನಿಧಿಗಳು,ಅಧಿಕಾರಿಗಳೊಂದಿಗೆ ಸಂವಾದ ನಡೆಸಿ,ತೊಡಗಿಸಿಕೊಂಡರು ಹಾಗು ಅವರ ದೈನಂದಿನ ಜೀವನದಲ್ಲಿ ಎದುರುಸುತ್ತಿರುವ ಸಮಸ್ಯೆಗಳ /ವಿಷಯಗಳ ಬಗ್ಗೆ ಚರ್ಚೆ ನಡೆಸಿದರು ,ಈ ಸಭೆಯನ್ನು ಗ್ರಾಮೀಣ ಅಭಿವೃದಿ ಮತ್ತು ಪಂಚಾಯತ್ ರಾಜ್ ಇಲಾಖೆ , ಮಳೂರು ಗ್ರಾಮ ಪಂಚಾಯತ್ ಆಶ್ರಯದಲ್ಲಿ ನಡೆಸಲಾಗಿದ್ದು ,ಸಿಎಂಸಿಎ ಸಂಸ್ಥೆಯು ಇದನ್ನು ಸುಗಮಗೊಳಿಸಿತು ,ಸಿಎಂಸಿಎ ಕಳೆದ 25 ವರ್ಷಗಳಿಂದ ಮಕ್ಕಳಿಗೆ ಉತ್ತೇಜನಕಾರಿ ,ಅನುಭವಾತ್ಮಕ ಕಲಿಕೆಯ ಮೂಲಕ ಜೀವನ ಕೌಶಲ್ಯಗಳು ಹಾಗು ಸಕ್ರಿಯ ನಾಗರಿಕತ್ವ ಮೌಲ್ಯಗಳನ್ನು ಮಕ್ಕಳಲ್ಲಿ ರೂಪಿಸುತ್ತಿರುತ್ತದೆ ಲಾಭಾಪೇಕ್ಷೆಯಿಲ್ಲದೆ ಒಂದು ಸ್ವಯಂಸೇವಾ ಸಂಸ್ಥೆ ಯಾಗಿದೆ . ರಾಮನಗರದಲ್ಲಿ ನಮ್ಮ ಕಾರ್ಯಕ್ರಮಗಳನ್ನು ನ್ಯಾಚುರಲ್ ರೆಮಿಡೀಸ್ ಸಂಸ್ಥೆ ಬೆಂಬಲಿಸುತ್ತಿದೆ.

ಪಿ.ಡಿ.ಒ ಎಂ ಗೋಪಾಲಸ್ವಾಮಿ ರವರು ಪ್ರಾಸ್ತಾವಿಕ ಭಾಷಣದಲ್ಲಿ ಮಳೂರು ಪಂಚಾಯತಿಯು ಮಕ್ಕಳ ಹಕ್ಕುಗಳಿಗಾಗಿ ಸದಾಕಾಲ ಶ್ರಮಿಸುತ್ತದೆ, 2024–25 ನೇ ಸಾಲಿನ ಮಕ್ಕಳ ಗ್ರಾಮ ಸಭೆಯಲ್ಲಿ ಮಕ್ಕಳು ಕೇಳಿದ ಪ್ರಶ್ನೆಗಳನ್ನು ಪರಿಹರಿಸಲಾಗಿದ್ದು, ಶಾಲೆಗಳಿಗೆ ಕ್ರಿಡಾಂಗಣ, ನೀರಿನ ವ್ಯವಸ್ಥೆ ಇನ್ನೂ ಮುಂತಾದ ಕೆಲಸಗಳನ್ನು ಮಾಡಲಾಗಿರುತ್ತದೆ, ಎಂದು ತಿಳಿಸಿದರು,

ನಂತರ ನಾವು ನಿಮಗೆ "ಮೂಲಭೂತ ಸೌಕರ್ಯಗಳನ್ನು ಒದಗಿಸುವುದು ನಮ್ಮ ಜವಬ್ದಾರಿ ಅವುಗಳನ್ನು ಜವಬ್ದಾರಿಯುತವಾಗಿ ಬಳಸಿಕೊಳುವುದು ಮಕ್ಕಳಾದ ನಿಮ್ಮ ಜವಬ್ದಾರಿಯಾಗಿರುತ್ತದೆ" ಎಂದು ತಿಳಿಸಿದರು.

ಸಿ ಎಂ ಸಿ ಎ ಸಂಸ್ಥೆಯಿಂದ ಅತಿಥಿಯಾಗಿ ಬಂದ ಶ್ರೀಮತಿ ಸುನಿತಾ ರವರು ಮಾತನಾಡಿ ಮಕ್ಕಳ ಹಕ್ಕುಗಳಿಗಾಗಿ ಮತ್ತು ಅವರ ಸಮಸ್ಯೆಗಳ ಪರಿಹಾರಕ್ಕಾಗಿ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಪ್ರತಿ ವರ್ಷವೂ ಮಕ್ಕಳ ಗ್ರಾಮ ಸಭೆ ನಡೆಸುವುದರ ಮೂಲಕ ಮಕ್ಕಳಿಗೆ ತಮ್ಮ ಅಭಿಪ್ರಾಯಗಳನ್ನು ತಮ್ಮ ಸಮಸ್ಯೆಗಳನ್ನು ತಮ್ಮ ಹಕ್ಕುಗಳನ್ನು ಪಡೆದುಕೊಳ್ಳುವ ಸಲುವಾಗಿ ಈ ಒಂದು ಗ್ರಾಮ ಮಕ್ಕಳ ಗ್ರಾಮ ಸಭೆ ಉತ್ತಮವಾದ ವೇದಿಕೆಯಾಗಿದೆ, ಈ ವರ್ಷ ರಾಮನಗರ ಜಿಲ್ಲೆಯಲ್ಲಿ 100ಕ್ಕೂ ಹೆಚ್ಚು ಗ್ರಾಮ ಪಂಚಾಯತಿ ವ್ಯಾಪ್ತಿಯ ಶಾಲೆಗಳಲ್ಲಿ ಮಕ್ಕಳ ಗ್ರಾಮ ಸಭೆ ಬಗ್ಗೆ ಜಾಗೃತಿ ಸೆಷನ್ ಮಾಡುವ ಗುರಿಯನ್ನು ಸಿಎಂಸಿಎ ಸಂಸ್ಥೆ ಹೊಂದಿದೆ, ಇದರಿಂದ ಮಕ್ಕಳಿಗೆ ಗ್ರಾಮ ಸಭೆಯ ಅರಿವು ಮತ್ತು ಸಕ್ರಿಯವಾಗಿ ಭಾಗವಹಿಸುವ ಅವಕಾಶ ಸಿಗುತ್ತದೆ ಮತ್ತು ಸಂವಿಧಾನದಲ್ಲಿ ಮಕ್ಕಳಿಗಾಗಿಯೇ ವಿಶೇಷವಾಗಿ 4 ಪ್ರಮುಖ ಹಕ್ಕುಗಳಿವೆ ಅವುಗಳೆಂದರೆ 1. ಜೀವಿಸುವ ಹಕ್ಕು 2. ಅಭಿವೃದ್ಧಿ ಹೊಂದುವ ಹಕ್ಕು 3.ರಕ್ಷಣೆಯ ಹಕ್ಕು 4. ಭಾಗವಹಿಸುವ ಹಕ್ಕು ಈ ಹಕ್ಕುಗಳ ಮೂಲಕ ಮಕ್ಕಳನ್ನು ರಕ್ಷಣೆ ಮಾಡಲಾಗುತ್ತಿದೆ ಮಕ್ಕಳು ಯಾವುದೇ ಅಂಜಿಕೆಯಿಲ್ಲದಯೇ ತಮ್ಮ ಈ ಹಕ್ಕುಗಳಲ್ಲಿ ಯಾವುದಾದರೂ ಸಮಸ್ಯೆಗಳಾದರೆ ಇಂದು ಸ್ಥಳೀಯ ಸರ್ಕಾರದ ಗಮನಕ್ಕೆ ತರಬೇಕೆಂದು ತಿಳಿಸಿದರು.



ಕಲ್ಪನಾ ಜಿಲ್ಲಾ ಸಂಯೋಜಕರು ಆರೋಗ್ಯ ಇಲಾಖೆ ಅವರು ಮಾತಾಡಿ, ಮೆದುಳಿಗೆ ಸಂಬಂಧಪಟ್ಟ ಎಲ್ಲ ತೊಂದರೆಗಳಿಗೆ ರಾಮನಗರ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುವುದು ಎಂದು ತಿಳಿಸಿದರು.

ಈ ಸಭೆಗೆ ಮುಖ್ಯ ಅತಿಥಿಯಾಗಿ ಆಗಮಿಸಿದ ಶ್ರೀಮತಿ ಕೌಶಲ್ಯ ಮುಖ್ಯ ಶಿಕ್ಷಕರು ಬೈರಪಟ್ಟ ಪ್ರೌಢಶಾಲೆ.ಮಕ್ಕಳ ಗ್ರಾಮ ಸಭೆ ನವೆಂಬರ್ ತಿಂಗಳಲ್ಲಿ ನಡೆಯುತ್ತದೆ ಇದು ನಿಮಗೆ ಬಹಳ ಮುಖ್ಯವಾದ ವೇದಿಕೆಯಾಗಿರುತ್ತದೆ ಹೇಗಿದೆ ಚೆಂದ ನಮ್ಮ ಶಾಲೆಗೆ ಹಲವಾರು ಸೌಕರ್ಯಗಳು ದೊರೆತಿವೆ. ಮಕ್ಕಳು ದೇವರ ಸಮಾನ ಇಂದಿನ ಮಕ್ಕಳು ಮುಂದಿನ ಪ್ರಜೆಗಳಾಗಿದ್ದು ಇಲ್ಲಿರುವ ಮಕ್ಕಳು ಮುಂದೆ ಜಿಲ್ಲಾಧಿಕಾರಿಯಾಗಬಹುದು,ರಾಜಕಾರಣಿ,ಡಾಕ್ಟರ್,ಇಂಜಿನಿಯರ್,ಆಗಬಹುದು,ಹಾಗಾಗಿ ಮಕ್ಕಳಲ್ಲಿ ಮೌಲ್ಯಯುತ ಶಿಕ್ಷಣ ನಿಡುವುದು ಅಗತ್ಯವೆಂದರು, ಮತ್ತು ಮಕ್ಕಳು ಸಹ ಓದಿನಲ್ಲಿ ಮುಂದಿರಬೇಕು ಕಲಿಕೆಯನ್ನು ರೂಢಿಸಿಕೊಳ್ಳಬೇಕೆಂದರು, ಹಾಗೂ ಮಕ್ಕಳಿಗೆ ಹಿಂಸೆ, ಮುಜುಗರವಾಗುವಂತಹ ಘಟನೆಗಳು ಜರುಗಿದರೆ ತಕ್ಷಣ ತಂದೆ,ತಾಯಿ/ಶಿಕ್ಷಕರ ಗಮನಕ್ಕೆ ತರಬೇಕು ಎಂದು ಮಕ್ಕಳಿಗೆ ತಿಳಿಸಿದರು, ಮಕ್ಕಳು ಶಾಲೆ ಆವರಣವನ್ನು ಸ್ವಚ್ಛತೆಯಿಂದ ಕಸವನ್ನು ಚೆಲ್ಲದೆ ಕಸದ ಬುಟ್ಟಿಯಲ್ಲಿ ಹಾಕಿರುವುದನ್ನ ಗಮನಿಸಿ ಅವರಿಗೆ ಅಭಿನಂದಿಸಿ ಗ್ರಾಮಸ್ಥರು ಕೂಡ ಈ ಮಕ್ಕಳ ನಡೆಯನ್ನು ಕಲಿಯಬೇಕು ಎಂದು ಮನವಿ ಮಾಡಿದರು ಹಾಗೂ ಕಾರ್ಯಕ್ರಮದಲ್ಲಿ ಮಕ್ಕಳ ಸಮಸ್ಯೆಗಳನ್ನು ಆಲಿಸಿದರು.

ಮೊದಲಿಗೆ , ಪುನೀತ್ ಗೌಡ ಸರ್ಕಾರಿ ಪ್ರೌಢಶಾಲೆ ಬೈರಪಟ್ಣ ನಮ್ಮ ಶಾಲೆಗೆ ಸೈಕಲ್ ಸ್ಟ್ಯಾಂಡ್ ಮಾಡಿಕೊಡಬೇಕೆಂದು ಮತ್ತು ಶಾಲಾ ಕಾಂಪೌಂಡ್ ಗೆ ಗೇಟ್ ಹಾಕಿಸಿ ಕೊಡಬೇಕೆಂದು ಕೇಳಿದರು ಗ್ರಾಮ ಪಂಚಾಯಿತಿ ಅಧ್ಯಕ್ಷರು ಸಂಬಂಧ ಪಟ್ಟ ಅಧಿಕಾರಿಗಳ ಜೊತೆ ಮಾತನಾಡಿ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು,

ಗ್ರಾಮ ಪಂಚಾಯಿತಿ ಅಧ್ಯಕ್ಷರು ಈ ವಾರದಲ್ಲೇ ಸಮಸ್ಯೆ ಪರಿಹರಿಸುವುದಾಗಿ ತಿಳಿಸಿದರು.

ಶಾಲೆಗೆ ಕಾಂಪೌಂಡ್ ,ಮಾಡುವುದು ಸೇರಿ ಒಟ್ಟು 15 ಕ್ಕೂ ಹೆಚ್ಚು ಪ್ರಶ್ನೆಗಳನ್ನು ಮಕ್ಕಳು ಕೇಳಿರುತ್ತಾರೆ.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಶ್ರೀ ದಿಲೀಪ್ ಬಿ ಟಿ,ಕಾರ್ಯದರ್ಶಿ ಶ್ರೀ ನಾಗರಾಜು, ಉಪಾಧ್ಯಕ್ಷರು ಶ್ರೀಮತಿ ಅನಿತಾ ಮತ್ತು ಗ್ರಾಮದ ಪಂಚಾಯತ್ ಸದಸ್ಯರುಗಳು, ಸಿಎಂಸಿಎ ಕನಸಲ್ಟೆಂಟ್ ಶ್ರೀಮತಿ ವಸಂತ, ಮುಖ್ಯ ಶಿಕ್ಷಕರು, ಹಾಗೂ ಪ್ರಾಥಮಿಕ ಶಾಲೆಯ ಶಿಕ್ಷಕರುಗಳು ಹಾಜರಿದ್ದರು.

## ಉದ್ದಿಮೆದಾರರು ವ್ಯಾಪಾರ ಅವಕಾಶಗಳ ಕುರಿತು ಅರಿವು ಹೊಂದಿ: ನರೇಂದ್ರ ಬಾಬು.ಟಿ

**ಬಳ್ಳಾರಿ:** ಉದ್ದಿಮೆದಾರರು ವ್ಯಾಪಾರ ಅವಕಾಶಗಳ ಕುರಿತು ಅರಿವು ಹೊಂದಬೇಕು ಎಂದು ಅಲ್ಲಂ ಕರಿಬಸಪ್ಪ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಕಾಲೇಜಿನ ಅಧ್ಯಕ್ಷ ನರೇಂದ್ರ ಬಾಬು.ಟಿ ಅವರು ಹೇಳಿದರು.

ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ, ವತಿಯಿಂದ ಆರ್‌ಎಎಂಪಿ ಯೋಜನೆಯಡಿ ವ್ಯಾಪಾರ ಅಭಿವೃದ್ಧಿ ಸೇವಾ ಪೂರೈಕೆದಾರರು ಯೋಜನೆ ಕುರಿತು ನಗರದ ಕಂಟೋನ್‌ಮೆಂಟ್‌ನ ವೀರಶೈವ ವಿದ್ಯಾವರ್ಧಕ ಸಂಘದ ಅಲಂ ಕರಿಬಸಪ್ಪ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಕಾಲೇಜು ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಿದ್ದ ಒಂದು ದಿನದ ಜಾಗೃತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ವ್ಯವಹಾರ ಯೋಜನೆ ಸಿದ್ಧತೆಗೆ ಸಹಕಾರ, ತಂತ್ರಜ್ಞಾನದ ಉನ್ನತೀಕರಣ ಮತ್ತು ಗುಣಮಟ್ಟದ ಪ್ರಮಾಣೀಕರಣಕ್ಕೆ ಬೆಂಬಲ, ವಿಳಂಬಿತ ಪಾವತಿಗಳ ಸಮಸ್ಯೆಗಳ ಬಗ್ಗೆ ಹಾಗೂ ಬ್ರಾಂಡಿಂಗ್ ಮತ್ತು ರಫ್ತು ಪ್ರಚಾರದ ಕುರಿತು ಮಾತನಾಡಿದರು.

ಕಾರ್ಯಾಗಾರದಲ್ಲಿ ವ್ಯಾಪಾರ ಅಭಿವೃದ್ಧಿ ಸೇವಾ ಪೂರೈಕೆದಾರರು (ಬಿ.ಡಿ.ಎಸ್.ಪಿ) ಸೌಲಭ್ಯಗಳು, ಯಶಸ್ಸಿನ ಕಥೆಗಳ ಬಗ್ಗೆ ಅರಿವು ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಸೋಮಶೇಖರ್.ಬಿ., ಅಲ್ಲಂ ಕರಿಬಸಪ್ಪ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್‌ನ ನಿರ್ದೇಶಕ ಡಾ.ಗೋಪಿ ಕೆ.ಟಿ., ಕಾಲೇಜಿನ ಸಹ ಪ್ರಾಧ್ಯಾಪಕರಾದ ಡಾ.ಶೈಲಜಾ ಬಿ., ಎಂಸಿಎ ವಿಭಾಗದ ಎಚ್‌ಒಡಿ ಸತ್ಯನಾರಾಯಣ, ನಿರ್ವಹಣ ಅಧ್ಯಯನ ವಿಭಾಗದ ಎಚ್‌ಒಡಿ ಡಾ.ಎ ತಿಮ್ಮಣ್ಣಗೌಡ, ಪ್ರಮಾಣೀಕೃತ ರಾಷ್ಟ್ರೀಯ ತರಬೇತುದಾರರ ಮತ್ತು ಮಕ್ಕಳ ಸಲಹೆಗಾರರಾದ ಜೆಎಫ್‌ಎಂ ಮಂಜುನಾಥ್ ಬಳ್ಳುಳ್ಳಿ, ಎಂಸಿಎ ಶಿವಾನಂದ, ಸಿಡಾಕ್‌ನ ತರಬೇತಿ ಅಧಿಕಾರಿ ವಿನೋದ್ ಕುಮಾರ್ ಸೇರಿದಂತೆ ಉದ್ದಿಮೆದಾರರು ಭಾಗವಹಿಸಿದ್ದರು.

## ಡಿಪ್ಲೋಮಾ ಇನ್ ಕೋ ಆಪರೇಟಿವ್ ಮ್ಯಾನೇಜ್‌ಮೆಂಟ್ ಪ್ರವೇಶ: ಅರ್ಜಿ ಆಹ್ವಾನ

**ಬಳ್ಳಾರಿ:**ಕರ್ನಾಟಕ ಇನ್ಸಿ ಟಿಟ್ಯೂಟ್ ಮ್ಯಾನೇಜ್ಮೆಂಟ್ ತರಬೇತಿ ಸಂಸ್ಥೆಯಲ್ಲಿ ಜನವರಿ ಒಂದು 2026 ರಿಂದ ಪ್ರಾರಂಭವಾಗುವ ಡಿಪ್ಲೋಮಾ ಇನ್ ಕೋ ಆಪರೇಟಿವ್ ಮ್ಯಾನೇಜ್ಮೆಂಟ್ ರೆಗ್ಯುಲರ್ ಮತ್ತು ದೂರ ಶಿಕ್ಷಣದ ಕೋರ್ಸ್ ಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ತರಬೇತಿ ಪಡೆಯಲು ಆಸಕ್ತಿ ಹೊಂದಿರುವ ಅಭ್ಯರ್ಥಿಗಳು ಡಿಸೆಂಬರ್ 15 ರೊಳಗೆ ಅರ್ಜಿಯನ್ನು ಸಲ್ಲಿಸಬಹುದು.

ತರಬೇತಿ ಪಡೆಯಲು ಕನಿಷ್ಠ ವಿದ್ಯಾರ್ಹತೆ ಪಿಯುಸಿ ಉತ್ತೀರ್ಣರಾಗಿರಬೇಕು. ಪಿಯುಸಿ ಮೇಲ್ಪಟ್ಟ ಅಭ್ಯರ್ಥಿಗಳು ಸಹ ಅರ್ಜಿಯನ್ನು ಸಲ್ಲಿಸಬಹುದು. ಸದರಿ ತರಬೇತಿಯು ಸಹಕಾರ ಕ್ಷೇತ್ರದ ನೇಮಕಾತಿ ಪರೀಕ್ಷೆಗಳಿಗೆ ಅನುಕೂಲಕರ ಹಾಗೂ ತರಬೇತಿ ಪಡೆಯುವ ಎಲ್ಲಾ ಅಭ್ಯರ್ಥಿಗಳಿಗೂ ಮಾಹೆಯಾನ ಶಿಷ್ಯವೇತನ ನೀಡಲಾಗುವುದು.

ಅರ್ಜಿಯನ್ನು ಪಡೆಯುವ ವಿಳಾಸ: ಕರ್ನಾಟಕ ಇನ್ಸಿ ಟಿಟ್ಯೂಟ್ ಆಫ್ ಕೋರ್ಟಿ ಮ್ಯಾನೇಜ್ಮೆಂಟ್ ನಂಬರ್ 1/2, ಎರಡನೇ ಮಹಡಿ ಮೂರನೇ ಮುಖ್ಯರಸ್ತೆ, ಚಾಮರಾಜಪೇಟೆ, ಬೆಂಗಳೂರು -18.

ಹೆಚ್ಚಿನ ಮಾಹಿತಿಗಾಗಿ ಮೊ.9449007661 ಹಾಗೂ 08035541407 ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಜಿಲ್ಲಾ ಮಟ್ಟದ ಟಾಸ್ಕ್ ಫೋರ್ಸ್ ಸಭೆ

**ಬಳ್ಳಾರಿ:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ, ಕೆ.ಪಿ.ಎಂ.ಇ ಕಾಯ್ದೆ, ಜಿಲ್ಲೆ ಅಂಧತ್ವ ನಿವಾರಣಾ ಕಾರ್ಯಕ್ರಮಗಳ ಕುರಿತು ವಿವಿಧ ಇಲಾಖೆಗಳ ನೇತೃತ್ವದಲ್ಲಿ ನಗರದ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಡಿ.05 ರಂದು ಮಧ್ಯಾಹ್ನ 03 ಗಂಟೆಗೆ ನಗರದ ನೂತನ ಜಿಲ್ಲಾಡಳಿತ ಭವನದ ವಿಸಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಟಾಸ್ಕ್ ಫೋರ್ಸ್ ಸಭೆ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ ಬಾಬು ಅವರು ತಿಳಿಸಿದ್ದಾರೆ.

## ಇಪಿಎಫ್‌ಓ: ಡಿ.15 ರಂದು ಪಿಂಚಣಿ ಅದಾಲತ್

**ಬಳ್ಳಾರಿ:** ಕಾರ್ಮಿಕರ ಭವಿಷ್ಯ ನಿಧಿ ಸಂಸ್ಥೆಯ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ ಪಿಂಚಣಿದಾರರ ಕುಂದು ಕೊರತೆ ಆಲಿಸಿ, ಪರಿಹರಿಸಲು ಡಿಸೆಂಬರ್ 15 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 01 ಗಂಟೆಯವರೆಗೆ ನಗರದ ಪ್ರಾದೇಶಿಕ ಕಚೇರಿಯಲ್ಲಿ ಪಿಂಚಣಿ ಅದಾಲತ್ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪ್ರಾದೇಶಿಕ ಕಚೇರಿಯ ಪ್ರಾದೇಶಿಕ ಭವಿಷ್ಯ ನಿಧಿ ಆಯುಕ್ತ ಕೆ.ವಿ ಪ್ರವೀಣ್ ಅವರು ತಿಳಿಸಿದ್ದಾರೆ.

ಬಳ್ಳಾರಿ, ವಿಜಯನಗರ, ಕೊಪ್ಪಳ, ಚಿತ್ರದುರ್ಗ ಜಿಲ್ಲೆಗಳ ಪಿಂಚಣಿದಾರರು ತಮ್ಮ ಕುಂದುಕೊರತೆಗಳಿದ್ದಲ್ಲಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಸಾರ್ವಜನಿಕ ಸಂಪರ್ಕ ಅಧಿಕಾರಿಗೆ ಪತ್ರ ಅಥವಾ ಇ-ಮೇಲ್ ಮೂಲಕ ಪಿ.ಪಿ.ಓ ಸಂಖ್ಯೆ, ವಿಳಾಸ, ದೂರವಾಣಿ, ಮೊಬೈಲ್ ಸಂಖ್ಯೆ ಮತ್ತು ಕುಂದು ಕೊರತೆಯ ಸ್ವರೂಪ ಹಾಗೂ ಇತ್ಯಾದಿಗಳನ್ನು ಅಂಚೆ ಪತ್ರದ ಮೂಲಕ ಡಿಸೆಂಬರ್ 10 ರೊಳಗಾಗಿ ತಿಳಿಸಬಹುದು. ಪತ್ರ ಲಕೋಟೆ ಮೇಲೆ ಪಿಂಚಣಿ ಅದಾಲತ್ ಎಂದು ಬರೆಯಬೇಕು.

ಹೆಚ್ಚಿನ ಮಾಹಿತಿಗಾಗಿ ದೂ.08392-268943 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಿ.ಎಡ್ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನಕ್ಕಾಗಿ ಅರ್ಜಿ ಆಹ್ವಾನ

**ದಾವಣಗೆರೆ:** ಪ್ರಸಕ್ತ ಸಾಲಿನಲ್ಲಿ ನ್ಯಾಷನಲ್ ಕೌನ್ಸಿಲ್ ಫಾರ್ ಟೀಚರ್ ಎಜುಕೇಶನಿಂದ ಮಾನ್ಯತೆ ಪಡೆದಿರುವ ದಾವಣಗೆರೆ ಜಿಲ್ಲೆಯ ಸರ್ಕಾರಿ, ಅರೆ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಕಾಲೇಜುಗಳಲ್ಲಿ ದಾಖಲಾತಿ ಹೊಂದಿ ಬಿ.ಎಡ್ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ(ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ, ಮತ್ತು ಪಾರ್ಸಿ) ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ವಿದ್ಯಾರ್ಥಿಗಳಿಗೆ ರೂ. 25000/-ಗಳ ವಿಶೇಷ ಪ್ರೋತ್ಸಾಹಧನವನ್ನು ಸಂಬಂಧಪಟ್ಟ ವಿದ್ಯಾರ್ಥಿಗಳ ಖಾತೆಗೆ ಡಿಬಿಟಿ ಮುಖಾಂತರ ಜಮಾ ಮಾಡಲಾಗುವುದು. ಆಸಕ್ತರು ಅಲ್ಪಸಂಖ್ಯಾತರ ಸಮುದಾಯದ ಬಿ.ಎಡ್ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಎಲ್ಲಾ ದಾಖಲಾತಿಗಳ ಸಹಿತ ಸೇವಾಸಿಂಧು ಪೋರ್ಟಲ್ (https://sevasindhu.karnataka.gov.in) ಮುಖಾಂತರ ಆನ್ ಲೈನ್ ನಲಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಡಿಸೆಂಬರ್ 31 ಕೊನೆಯ ದಿನವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ದಾವಣಗೆರೆ. ದೂ.ಸಂ: 08192-250022 ಹಾಗೂ ವಿಸ್ತರಣಾಧಿಕಾರಿಗಳು ಅಲ್ಪಸಂಖ್ಯಾತರಕಲ್ಯಾಣ ಇಲಾಖೆ ದಾವಣಗೆರೆ ಉಪ ವಿಭಾಗ, ದೂ.ಸಂ: 08192-250066 ಸಂಪರ್ಕಿಸಬೇಕೆಂದು

### ಕಾಂಗ್ರೆಸ್ ಪ್ರಣಾಳಿಕೆ ದಹಿಸಿ ಅತಿಥಿ ಉಪನ್ಯಾಸಕರ ಆಕ್ರೋಶ

# ಬೆಳಗಾವಿಗೆ ಬಂದರೆ ಮತ್ತೊಂದು ನರಗುಂದ ಬಂಡಾಯ ನಿಶ್ಚಿತ

**ಗದಗ:** ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ನಗರದಲ್ಲಿ ಕಳೆದ ಎಂಟು ದಿನಗಳಿಂದ ನಡೆಯುತ್ತಿರುವ ಅತಿಥಿ ಉಪನ್ಯಾಸಕರ ಅನಿರ್ದಿಷ್ಟಾವಧಿ ಪ್ರತಿಭಟನೆ ಪಟ್ಟು ಸಡಿಲಿಸುವ ಲಕ್ಷಣಗಳು ಗೋಚರಿಸುತ್ತಿಲ್ಲ. ಮಂಗಳವಾರ ಕಾಂಗ್ರೆಸ್ ಪ್ರಕಟಿಸಿದ್ದ ಪ್ರಣಾಳಿಕೆ ಪಟ್ಟಿಯನ್ನು ದಹಿಸಿ ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಂಘಟನೆಯ ರಾಜ್ಯಾಧ್ಯಕ್ಷ ಡಾ.ಹನುಮಂತಗೌಡ ಕಲ್ಮನಿ, ಸುಮಾರು ಹತ್ತು-ಹದಿನೈದು ವರ್ಷಗಳಿಂದ ಕಡಿಮೆ ಗೌರವಧನಕ್ಕೆ ಸರಕಾರಿ ಪದವಿ ಕಾಲೇಜುಗಳಲ್ಲಿ ಸೇವೆ ಸಲ್ಲಿಸಿದ ಅತಿಥಿ ಉಪನ್ಯಾಸಕರು ಇಂದು ಅಕ್ಷರಶಃ ಬೀದಿಗೆ ಬೀಳುತ್ತಿದ್ದಾರೆ. ಇದಕ್ಕೆ ಸರಕಾರ ಕೈಗೊಂಡಿರುವ ಅಮಾನವೀಯ,



ಅವೈಜ್ಞಾನಿಕ ನೀತಿಯೇ ಕಾರಣ ಎಂದು ಕಿಡಿ ಕಾರಿದರು.

ವಿಧಾನಸಭೆ ಚುನಾವಣೆಗೂ ಮುನ್ನ ಕಾಂಗ್ರೆಸ್ ತನ್ನ ಪ್ರಣಾಳಿಕೆಯಲ್ಲಿ ರಾಜ್ಯದ ಸರಕಾರಿ ಪದವಿ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆ ನೀಡುವ ಭರವಸೆ ನೀಡಿತ್ತು. ಈವರೆಗೆ ಪ್ರಣಾಳಿಕೆಯ ಬಹುತೇಕ ಅಂಶಗಳ ವಿಚಾರದಲ್ಲಿ ರಾಜ್ಯದಲ್ಲಿ ಅಸ್ತಿತ್ವದಲ್ಲಿರುವ ಕಾಂಗ್ರೆಸ್ ಸರಕಾರ ನುಡಿದಂತೆ ನಡೆದಿದೆ. ಆದರೆ ಅತಿಥಿ ಉಪನ್ಯಾಸಕರ ಸೇವಾಭದ್ರತೆ ವಿಷಯದಲ್ಲಿ ಉದಾಸೀನಧೋರಣೆ ತಾಳಿರುವುದು ಸರಿಯಲ್ಲ ಎಂದು ದೂರಿದರು.

ಕೂಡಲೇ ಸರಕಾರ ಸೇವಾನುಭವ ಇರುವ ಅತಿಥಿ ಉಪನ್ಯಾಸಕರ ಸೇವೆಗೆ ಭದ್ರತೆ ನೀಡಬೇಕು.

ಈಗ ನಡೆಯುತ್ತಿರುವ ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಯ ಕೌನ್ಸೆಲಿಂಗ್‌ನ್ನು ತಕ್ಷಣ ನಿಲ್ಲಿಸಬೇಕು. ಇಲ್ಲದಿದ್ದರೆ ಈ ಹೋರಾಟ ಮತ್ತೊಂದು ನರಗುಂದ ಬಂಡಾಯವಾಗುವ ನಿಟ್ಟಿನಲ್ಲಿ ಚಳವಳಿ ರೂಪಿಸಬೇಕಾಗುತ್ತದೆ. ಬೆಳಗಾವಿ ಅಧಿವೇಶನ ಆರಂಭ ಆಗುವುದರೊಳಗೆ ನಮ್ಮ ಬೇಡಿಕೆ ಈಡೇರಬೇಕು. ಇಲ್ಲದಿದ್ದರೆ ಬೆಳಗಾವಿಯಲ್ಲಿ ನಡೆಯಲಿರುವ ನಮ್ಮ ಹೋರಾಟ ಸರಕಾರಕ್ಕೆ ನಡುಕ ಹುಟ್ಟಿಸುವುದು ನಿಶ್ಚಿತ ಎಂದು ಎಚ್ಚರಿಕೆ ನೀಡಿದರು.

ಅತಿಥಿ ಉಪನ್ಯಾಸಕರ ಹೋರಾಟಕ್ಕೆ ಮುಂಡರಗಿ ಹೋರಾಟ ಸಮಿತಿಯ ಅಧ್ಯಕ್ಷ ಬಸವರಾಜ ದೇಸಾಯಿ, ಪಂಚಾಕ್ಷರಿ ಗವಾಯಿಗಳ ಕಾಲೇಜಿನ ಪ್ರಾಚಾರ್ಯ ಡಾ.ಆರ್.ಎಸ್. ದಂಡತಿ ಪ್ರತಿಭಟನೆಯಲ್ಲಿ ಪಾಲ್ಗೊಂಡು ಬೆಂಬಲ ಸೂಚಿಸಿದರು. ಇಂದು ನಡೆದ ಪ್ರಣಾಳಿಕೆ ದಹನ ಹೋರಾಟದಲ್ಲಿ ವಿಜಯಪುರದ ರಾಮನಗೌಡ ಕಲ್ಲಿ, ಬೆಳ್ತಂಗಡಿಯ ಸಂತೋಷಕುಮಾರ, ಧರ್ಮಸ್ಥಳದ ಗಿರೀಶ್ ನಾಯಕ, ಉಡುಪಿಯ ಪವನಕುಮಾರ, ಧಾರವಾಡದ ದಾನೇಶ್ವರಿ, ಶಿರೂರು, ಕುಂದಗೋಳ, ಮಂಗಳೂರು ಸೇರಿದಂತೆ ವಿವಿಧ ಜಿಲ್ಲೆಗಳ ಅತಿಥಿ ಉಪನ್ಯಾಸಕರು ಇದ್ದರು.

## ಶಾಲಾ ವಾರ್ಷಿಕೋತ್ಸವದ ಸಂಭ್ರಮ



**ನ್ಯಾಮತಿ :** ನ್ಯಾಮತಿ ತಾಲೂಕಿನ ಚೀಲೂರಿನ ನ್ಯಾಷನಲ್ ಇಂಗ್ಲೀಷ್ ಸ್ಕೂಲ್‌ನಲ್ಲಿ ಶಾಲಾ ವಾರ್ಷಿಕೋತ್ಸವದ ಸಂಭ್ರಮ ಎನ್ ಇ ಎಸ್ ಹಬ್ಬವನ್ನು ಉಧ್ಘಾಟಿಸುತ್ತೀರುವ ರಾಷ್ಟ್ರೀಯ ಶಿಕ್ಷಣ ಸಮಿತಿಯ ಕಾರ್ಯದರ್ಶಿ ನಾಗರಾಜ್ ಎಸ್ ಎನ್ , ನಿರ್ದೇಶಕ ಶಿವಕುಮಾರ , ಕರ್ನಾಟಕ ರಾಜ್ಯ ಸರಕಾರಿ ಪ್ರೌಢಶಾಲಾ ಶಿಕ್ಷಕರ ಸಂಘ ಅಧ್ಯಕ್ಷ ಸಿದ್ದಬಸಪ್ಪ ಬಿ , ಪ್ರಾಂಶುಪಾಲ ಆದರ್ಶ ಜಿ ಸಿ, ಕನ್ನಡ ಮಾಧ್ಯಮ ಶಾಲೆಯ ಮುಖ್ಯ ಶಿಕ್ಷಕಿ ಪೂರ್ಣಿಮಾ , ಗ್ರಾಮ ಪಂಚಾಯಿತಿ ಅಧ್ಯಕ್ಷೆ ರೂಪ ಕೆ ಇದ್ದರು.

## ಸಂಗಾತಿಯ ಕೊಂದು ಪ್ರಿಯಕರ ಆತ್ಮಹತ್ಯೆ

**ಬೆಂಗಳೂರು:** ಲಿವಿಂಗ್- ಟು-ಗೆದರ್‌ನಲ್ಲಿದ್ದ ಸಂಗಾತಿ ಯನ್ನು ಕೊಲೆ ಮಾಡಿ ಪ್ರಿಯಕರನೂ ಆತಹತ್ಯೆ ಮಾಡಿಕೊಂಡಿರುವ ಘಟನೆ ರಾಜಗೋಪಾಲನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.ಹೈದರಾಬಾದ್ ಮೂಲದ ಗದಗ ಲಲಿತಾ (49) ಎಂಬಾಕೆ ಯನ್ನು ಕೊಲೆ ಮಾಡಿ ಲಕ್ಷ್ಮಿ ನಾರಾಯಣ (51) ಎಂಬಾತ ಆತಹತ್ಯೆ ಮಾಡಿಕೊಂಡ ವ್ಯಕ್ತಿ.ಗದಗ ಲಲಿತಾಗೆ ಈಗಾಗಲೇ ಮದುವೆಯಾಗಿ ಮಕ್ಕಳಿದ್ದು,ಯಾವುದೋ ಕಾರಣಕ್ಕೆ ಕುಟುಂಬದಿಂದ ಬೇರೆಯಾಗಿ ನಗರದ ರಬ್ಬರ್ ಕಾರ್ಖಾನೆಯೊಂದರಲ್ಲಿ ಕೆಲಸ ಮಾಡಿಕೊಂಡು ವಾಸವಾಗಿದ್ದರು. ಕೊರಟಗೆರೆ ಮೂಲದ ಲಕ್ಷ್ಮಿನಾರಾಯಣನಿಗೂ ಈಗಾಗಲೇ ಮದುವೆಯಾಗಿ ಮಕ್ಕಳಿದ್ದಾರೆ. ಆತನೂ ಸಹ ಸಂಸಾರ ಬಿಟ್ಟು ಬಂದು ಕಾರ್ಖಾನೆಯೊಂದರಲ್ಲಿ ಕೆಲಸ ಮಾಡುತ್ತಿದ್ದರು.

ತದ ನಂತರದ ದಿನಗಳಲ್ಲಿ ಇವರಿಬ್ಬರಿಗೂ ಪರಿಚಯವಾಗಿದೆ. ಪರಿಚಯ ಸ್ನೇಹಕ್ಕೆ ತಿರುಗಿ ಪ್ರೀತಿಯಾಗಿದೆ. ಇವರಿಬ್ಬರೂ 8 ತಿಂಗಳಿನಿಂದ ದೊಡ್ಡ ಕೈಗಾರಿಕಾ ಪ್ರದೇಶದ ಇಂದಿರಾ ಪ್ರಿಯದರ್ಶಿನಿ ನಗರದಲ್ಲಿ ಬಾಡಿಗೆ ಮನೆ ಮಾಡಿಕೊಂಡು ಸಹ ಜೀವನ (ಲಿವಿಂಗ್-ಟು-ಗೆದರ್) ನಡೆಸುತ್ತಿದ್ದರು.

ಪ್ರತಿ ನಿತ್ಯ ಎಂದಿನಂತೆ ಇಬ್ಬರು ಬೆಳಗ್ಗೆ ತಮ ತಮ ಕಾರ್ಖಾನೆಗಳಿಗೆ ಕೆಲಸಕ್ಕೆ ಹೋಗುತ್ತಿದ್ದರು. ರಾತ್ರಿ ಇವರಿಬ್ಬರೂ ಮದ್ಯಸೇವಿಸಿದ್ದು, ಯಾವುದೋ ವಿಚಾರಕ್ಕೆ ಜಗಳವಾಗಿದೆ. ಇದು ಅಕ್ಕಪಕ್ಕದ ಮನೆಯವರಿಗೂ ಕೇಳಿಸಿದೆ.ಇವರಿಬ್ಬರ ಗಲಾಟೆ ವಿಕೋಪಕ್ಕೆ ತಿರುಗಿದಾಗ ಕೋಪದ ಕೈಗೆ ಬುದ್ಧಿಕೊಟ್ಟು ಲಲಿತಾ ಧರಿಸಿದ್ದ ವೇಲ್‌ನ್ನು ಕಿತ್ತುಕೊಂಡ ಲಕ್ಷ್ಮಿನಾರಾಯಣ ಅದರಿಂದಲೇ ಆಕೆಯ ಕುತ್ತಿಗೆ ಬಿಗಿದು ಕೊಲೆ ಮಾಡಿದ್ದಾನೆ.ನಂತರ ಅದೇ ವೇಲ್‌ನಿಂದ ಮನೆಯ ತೀರಿಗೆ ನೇಣು ಬಿಗಿದುಕೊಂಡು ಆತ ಆತಹತ್ಯೆ ಮಾಡಿಕೊಂಡಿದ್ದಾನೆ. ಇಂದು ಬೆಳಗ್ಗೆ ಇವರ ಮನೆಯ ಬಾಗಿಲು ತೆರೆದಿಲ್ಲ. ರಾತ್ರಿ ಇವರ ಮನೆಯಲ್ಲಿ ಗಲಾಟೆಯಾಗಿರುವುದನ್ನು ಕೇಳಿಸಿಕೊಂಡಿದ್ದ ನೆರೆಹೊರೆಯವರಿಗೆ ಅನುಮಾನ ಬಂದು ಅವರ ಮನೆಯ ಬಳಿ ಹೋಗಿ ಕಿಟಕಿ ಮೂಲಕ ನೋಡಿದಾಗ ಇಬ್ಬರು ಸಾವನ್ನಪ್ಪಿರುವುದು ಕಂಡು ತಕ್ಷಣ ಪೊಲೀಸರಿಗೆ ವಿಷಯ ತಿಳಿಸಿದ್ದಾರೆ.

### ಕೆಳದಿ ಶಿವಪ್ಪನಾಯಕ ವಿವಿಯಿಂದ ಹೊಸ ಭತ್ತ ತಳಿ ಅಭಿವೃದ್ಧಿ | ಅಧಿಕೃತ ಬಿಡುಗಡೆ

# ಸಣ್ಣ ಕೆಂಪಕ್ಕಿ ಸಹ್ಯಾದ್ರಿ ಸಿಂಧೂರ

**ಶಿವಮೊಗ್ಗ:** ದಕ್ಷಿಣ ಭಾರತದಲ್ಲಿ ಮೊತ್ತ ಮೊದಲ ಬಾರಿಗೆ ಸಣ್ಣ ಕೆಂಪಕ್ಕಿ ಭತ್ತದ ತಳಿ 'ಸಹ್ಯಾದ್ರಿ ಸಿಂಧೂರ'ವನ್ನು ಶಿವಮೊಗ್ಗದ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ ಅಭಿವೃದ್ಧಿಪಡಿಸಿದೆ.

ಕೆಂಪಕ್ಕಿಯಲ್ಲಿ ಜ್ಯೋತಿ, ವಾಳ್ಯ, ರತ್ನಚೂಡಿ, ಕಾರ್ಕಳ ಜಯ, ಇತ್ತೀಚೆಗೆ ಸಹ್ಯಾದ್ರಿ ಕೆಂಪು ಮುಕ್ತಿ ಸೇರಿ ಹಲವು ತಳಿಗಳಿದ್ದರೂ ಇವೆಲ್ಲವೂ ದಪ್ಪ ಅಕ್ಕಿ. ದಕ್ಷಿಣ ಭಾರತದಲ್ಲಿ ಸ್ಥಳೀಯ ಹವಾಗುಣಕ್ಕೆ ಹೊಂದಿಕೆಯಾಗುವಂತಹ, ಪೌಷ್ಟಿಕಾಂಶಗಳಿಂದ ಕೂಡಿದ ಸಣ್ಣ ಕೆಂಪಕ್ಕಿ ಇರಲಿಲ್ಲ. ಹೀಗಾಗಿ ದಪ್ಪ ಕೆಂಪಕ್ಕಿಯನ್ನು ಮಕ್ಕಳು ಊಟ ಮಾಡುವುದಿಲ್ಲ ಎಂದು ಕೆಲವರು ಸೋನಾ ಮಸೂರಿಯಂತಹ ಬಿಳಿ ಸಣ್ಣಕ್ಕಿಯನ್ನೇ ಬಳಸುತ್ತಿದ್ದಾರೆ. ರೈತರು ಮತ್ತು ಗ್ರಾಹಕರ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿವಿ ಸಂಶೋಧನಾ ನಿರ್ದೇಶಕ ಡಾ.

ಬಿ.ಎಂ.ದುಷ್ಯಂತ್ ಕುಮಾರ್ ನೇತೃತ್ವದ ವಿಜ್ಞಾನಿಗಳ ತಂಡ ಪ್ರಯೋಗಾಲಯ ಮತ್ತು ರೈತರ ತಾಕುಗಳಲ್ಲಿ ಹಲವು ವರ್ಷಗಳ ಕಾಲ ಪ್ರಯೋಗ ನಡೆಸಿ ದಕ್ಷಿಣ ಭಾರತದ ಮೊತ್ತ ಮೊದಲ ಸಣ್ಣ ಕೆಂಪಕ್ಕಿ 'ಸಹ್ಯಾದ್ರಿ ಸಿಂಧೂರ' ತಳಿಯನ್ನು ಅಭಿವೃದ್ಧಿಪಡಿಸಿದೆ.

ಈ ತಳಿ ಅಧಿಕ ಕಬ್ಬಿಣ, ಸತು, ಪ್ರೋಟೀನ್, ವಿಟಮಿನ್ ಸಿ ಮತ್ತು ರೋಗ ನಿರೋಧಕ ಶಕ್ತಿ ಹೆಚ್ಚಿಸುವಂತಹ ಅಂಶಗಳನ್ನು



ಸಹ್ಯಾದ್ರಿ ಸಿಂಧೂರ ಸಣ್ಣ ಕೆಂಪಕ್ಕಿ.

ಒಳಗೊಂಡಿದೆ. ಕಡಿಮೆ ಗ್ಲೈಸೆಮಿಕ್ ಸೂಚ್ಯಂಕ ಅಲ್ಲದೆ ಬೆಂಕಿ ರೋಗಕ್ಕೆ ಮಧ್ಯಮ ಪ್ರತಿರೋಧಕತೆ ಹೊಂದಿದೆ. "120 ದಿನಗಳಲ್ಲಿ ಕಟಾವಿಗೆ ಬರುವ ಈ ತಳಿಯು ಹೆಕ್ಟೇರ್‌ಗೆ 53ರಿಂದ 55 ಕ್ವಿಂಟಾಲ್ ಇಳುವರಿ ನೀಡುತ್ತದೆ. ಅತ್ಯಧಿಕವಾಗಿ ಹುಲ್ಲೂ ದೊರೆಯುತ್ತದೆ. ಅತಿಹೆಚ್ಚು ತೆಂಡೆ ಒಡೆಯುವುದಲ್ಲದೆ ದಿಂಡು ದಪ್ಪ ಇರುತ್ತದೆ. ಹೀಗಾಗಿ ಭತ್ತ ನೆಲಕ್ಕೆ ಒರಗುವ ಸಾಧ್ಯತೆ ಕಡಿಮೆ. ಕಾಂಡ ಕೊರಕ, ಬಿಳಿ ಹೇನು ಕೀಟಗಳ ಬಾಧೆಯನ್ನೂ ತಡೆಯುವ ಶಕ್ತಿ ಇದಕ್ಕಿದೆ ಎನ್ನುತ್ತಾರೆ ಈ ತಳಿಯ ಬಿತ್ತನೆ ಬೀಜವನ್ನು ಇತರ ರೈತರಿಗೆ ವಿತರಣೆ ಮಾಡುತ್ತಿರುವ ದಾವಣಗೆರೆ ತಾಲೂಕು ಚಂದನಳ್ಳಿ ಗ್ರಾಮದ ರೈತ ಮಲ್ಲಿಕಾರ್ಜುನ.

10 ಕ್ವಿಂಟಾಲ್ ಬಿತ್ತನೆ ಬೀಜ ವಿತರಣೆ: ತಳಿಯನ್ನು ಎನ್‌ಡಿಪಿಸಿಆರ್‌ನಲ್ಲಿ ನೋಂದಣಿ ಮಾಡಿದ್ದು ವಿಶ್ವವಿದ್ಯಾಲಯದ ಆವರಣದಲ್ಲಿ ನ.7ರಂದು ಆರಂಭವಾಗುವ ಕೃಷಿ ಮತ್ತು

> ಸಣ್ಣ ಕೆಂಪಕ್ಕಿಗೆ ಇರುವ ಭಾರಿ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡು ಸಹ್ಯಾದ್ರಿ ಸಿಂಧೂರ ಸಣ್ಣ ಕೆಂಪಕ್ಕಿ ಭತ್ತದ ತಳಿಯನ್ನು ಅಭಿವೃದ್ಧಿಪಡಿಸಃ ಲಾಗಿದೆ. ಅಧಿಕೃತ ಉದ್ಘಾಟನೆಗೆ ಮುನ್ನವೆ ಬಿತ್ತನೆ ಬೀಜಕ್ಕೆ ಹೆಚ್ಚು ಬೇಡಿಕೆ ಸೃಷ್ಟಿಯಾಗಿದೆ.
>
> -ಡಾ. ಬಿ.ಎಂ.ದುಷ್ಯಂತ್‌ಕುಮಾರ್ ನಂಶೋಧನಾ ನಿರ್ದೇಶಕ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿವಿ

ತೋಟಗಾರಿಕೆ ಮೇಳದಲ್ಲಿ ಅಧಿಕೃತವಾಗಿ ಬಿಡುಗಡೆ ಆಗುತ್ತದೆ.

ಮಾಡಿಕೊಳ್ಳುತ್ತಿದ್ದಾರೆ.

ವಿಶ್ವವಿದ್ಯಾಲಯವು ಈ ವರ್ಷ ಇದೇ ತಳಿಯ 10 ಕ್ವಿಂಟಾಲ್ ಬಿತ್ತನೆ ಬೀಜವನ್ನು ರೈತರಿಗೆ ಒದಗಿಸಿದೆ. ಅಚ್ಚರಿ ಎಂದರೆ ಉದ್ಘಾಟನೆಗೂ ಮುನ್ನವೇ ಬೆಂಗಳೂರು, ಮಂಗಳೂರು ಮತ್ತು ಕೇರಳದಲ್ಲಿ ಸಣ್ಣ ಕೆಂಪಕ್ಕಿ ಭತ್ತಕ್ಕೆ ಭಾರಿ ಬೇಡಿಕೆ ಸೃಷ್ಟಿಯಾಗಿದೆ. ಕೆಲ ರೈತರು ಸಾವಯವ ಪದ್ಧತಿಯಲ್ಲಿ ಈ ಭತ್ತವನ್ನು ಬೆಳೆದು ಅಕ್ಕಿ ಮಾಡಿಸಿ 5, 10 ಕೆ.ಜಿ. ಪ್ಯಾಕೆಟ್ ಮಾಡಿ ಮಾರಾಟ ಮಾಡುತ್ತಿದ್ದಾರೆ. ಬೇಡಿಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ರೈತರು ವಿಶ್ವವಿದ್ಯಾಲಯ ಮತ್ತು ಪ್ರಯೋಗಾರ್ಥವಾಗಿ ಬೆಳೆದ ರೈತರಿಂದ ಬಿತ್ತನೆ ಬೀಜವನ್ನು ಪಡೆದು ಅಧಿಕ ಬೀಜೋತ್ಪಾದನೆ

## ಜಿಲ್ಲಾ ವಾಲಿ ಬಾಲ್ ಅಸೋಸಿಯೇಷನ್‌ನಿಂದ ಬಿ.ವಿ. ರಾಜಶೇಖರ್ ರವರಿಗೆ ಸನ್ಮಾನ

**ದಾವಣಗೆರೆ:** ವಾಲಿಬಾಲ್ ಕ್ರೀಡಾಪಟು, ಕನ್ನಡಪರ ಹೋರಾಟಗಾರರು, ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾದ ಬಿ.ವಿ. ರಾಜಶೇಖರರವರಿಗೆ ಜಿಲ್ಲಾ ವಾಲಿಬಾಲ್ ಅಸೋಸಿಯೇಷನ್‌ನಿಂದ ಇಂದು ಜಿಲ್ಲಾ ಕ್ರೀಡಾಂಗಣದಲ್ಲಿ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಸಂಸ್ಥೆಯ ಪದಾಧಿಕಾರಿಗಳಾದ ಪ್ರಕಾಶ್ ಎಲ್ ದೈವಜ್ಞ, ತ್ಯಾವಣಗಿ ಶಿವಣ್ಣ, ರಮೇಶ್, ರಾಕೇಶ್, ಗುರುರಾಜ್, ಫರೀದ್, ರಿಷಬ್, ಪ್ರಶಾಂತ್, ಪ್ರಕಾಶ್, ನಟರಾಜ್, ಹರೀಶ್, ಕೊಟ್ರಯ್ಯ, ಮೃತ್ಯುಂಜಯ, ಷಣ್ಮುಖಪ್ಪ, ಕಂಚಪ್ಪ, ಬೀರೇಶ್, ರವಿ, ಮೂರ್ತಿ ಮತ್ತು ಇತರರು ಉಪಸ್ಥಿತರಿದ್ದರು.

## ಸೋಂಕಿತ ವ್ಯಕ್ತಿಯ ಒಪ್ಪಿಗೆ ಇಲ್ಲದೆ ಗೌಪ್ಯತೆ ಬಹಿರಂಗ ಪಡಿಸುವಂತಿಲ್ಲ: ಸಂತೋಷ್.ಎಠಿ. ಎಸ್

**ಶಿವಮೊಗ್ಗ:** ಹೆಚ್‌ಐವಿ ಸೋಂಕಿಗೆ ಒಳಗಾದ ವ್ಯಕ್ತಿಗಳ ಒಪ್ಪಿಗೆ ಇಲ್ಲದೆ ಅವರ ಗೌಪ್ಯತೆಯನ್ನು ಬಹಿರಂಗ ಪಡಿಸುವಂತಿಲ್ಲ. ಒಂದು ವೇಳೆ ಬಹಿರಂಗ ಪಡಿಸಿದರೆ ಸಂರಕ್ಷಿತ ವ್ಯಕ್ತಿಯ ಹಕ್ಕುಗಳ ರಕ್ಷಣೆ ಉಲ್ಲಂಘನೆಯಾಗುತ್ತದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಂತೋಷ್.ಎಠಿ.ಎಸ್ ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಭಾರತೀಯ ವೈದ್ಯಕೀಯ ಸಂಘ, ಕರ್ನಾಟಕ ಸರ್ಕಾರಿ ವೈದ್ಯಾಧಿಕಾರಿಗಳ ಸಂಘ ಶಿವಮೊಗ್ಗ, ಜಿಲ್ಲಾ ನ್ಯಾಯಾವಾದಿಗಳ ಸಂಘ, ಜಿಲ್ಲಾ ಏಡ್ಸ್ ತಡೆಗಟ್ಟುವ ಮತ್ತು ನಿಯಂತ್ರಣ ಘಟಕ ಶಿವಮೊಗ್ಗ, ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಎಫ್‌ಪಿಎಐ ಶಿವಮೊಗ್ಗ, ಬಾಪೂಜಿ ನರ್ಸಿಂಗ್ ಕಾಲೇಜ್ ಶಿವಮೊಗ್ಗ ಹಾಗೂ ಸರ್ಕಾರೇತರ ಸಂಸ್ಥೆಗಳು ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ "ಹೆಚ್‌ಐವಿ/ಏಡ್ಸ್ ಹರುಡುವಿಕೆಯನ್ನು ನಿಯಂತ್ರಿಸಲು ಇರುವ ಅಡೆತಡೆಗಳನ್ನು ಕೊನೆಗಾಣಿಸೋಣ" ಎಂಬ ಧ್ಯೇಯವಾಕ್ಯದೊಂದಿಗೆ ಸೋಮವಾರ ಮೆಗ್ಗಾನ್ ಆಸ್ಪತ್ರೆಯ ಐಎಂಎ ಹಾಲ್ ನಲ್ಲಿ ಆಯೋಜಿಸಿದ್ದ ವಿಶ್ವ ಏಡ್ಸ್ ದಿನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು




ಮಾತನಾಡಿದರು.

ಸಮಾಜದಲ್ಲಿ ಸಂರಕ್ಷಿತ ವ್ಯಕ್ತಿಯ ಹಕ್ಕುಗಳ ರಕ್ಷಣೆ ಮುಖ್ಯವಾಗಿದ್ದು, ಹೆಚ್‌ಐವಿ ಸೋಂಕಿತ ವ್ಯಕ್ತಿಗಳ ಗೌಪ್ಯತೆಯನ್ನು ಒಪ್ಪಿಗೆ ಇಲ್ಲದೆ ಎಲ್ಲೂ ಬಹಿರಂಗ ಪಡೆಸಬಾರದು. ಅದರಂತೆ ಕಾನೂನಿನ ಕಾಲಂ 2 ಎಸ್ ನಲ್ಲಿ ಸಂರಕ್ಷಿತ ವ್ಯಕ್ತಿ ಯಾರೆಂದು ವ್ಯಾಖ್ಯಾನಿಸಲಾಗಿದ್ದು, ಹೆಚ್‌ಐವಿ ಸೋಂಕಿತರು,

ಅವರ ಜೊತೆ ಹಿಂದೆ ಇದ್ದ ವ್ಯಕ್ತಿ ಹಾಗೂ ಈಗ ಇರುವವರು ಈ ಮೂವರು ಕಲಂ 2 ಎಸ್ ಗೆ ಒಳಪಡುತ್ತಾರೆ ಎಂದು ಮಾಹಿತಿ ನೀಡಿದರು.

ಸಂರಕ್ಷಿತ ವ್ಯಕ್ತಿಯ ಹಕ್ಕುಗಳ ರಕ್ಷಣೆ ನಮ್ಮೆಲ್ಲರ ಜವಾಬ್ದಾರಿಯಾಗಿದ್ದು, ಅದನ್ನು ಉಲ್ಲಂಘಿಸಿದರೆ ಕಾನೂನು ಕ್ರಮ ಜರುಗಿಸಲಾಗುವುದು. ಕನಿಷ್ಠ ಮೂರು ತಿಂಗಳು ಜೈಲು ಶಿಕ್ಷೆಯ (ಎರಡು ವರ್ಷದವರೆಗೆ ಶಿಕ್ಷೆ ವಿಧಿಸಬಹುದು), 1 ಲಕ್ಷ ರೂ.ವರೆಗೆ ದಂಡ ಪಾವತಿಸಬೇಕಾಗಬಹುದು. ಸೋಂಕಿತರಿಗೆ ಲೀಗಲ್ ಸರ್ವಿಸಸ್ ಕ್ಲಿನಿಕ್ ಇದ್ದು, ಇದಕ್ಕೆ ಪ್ರಾಧಿಕಾರದ ಪ್ಯಾನಲ್ ವಕೀಲರಿಂದ ಸಲಹೆ ಪಡೆಯಲು ಅವಕಾಶವಿದೆ ಎಂದು ತಿಳಿಸಿದರು.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷರಾದ ಮಂಜುನಾಥ್ ಜಿ.ಎ ಅವರು ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿ ಜಾಥಾ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಜಾಥಾ ಕೋರ್ಟ್ ಆವರಣದಿಂದ ಪ್ರಾರಂಭವಾಗಿ ಗೋಪಿ ವೃತ್ತ ಮೂಲಕ ಸಾಗಿ ಐಎಂಎ ಹಾಲ್‌ಗೆ ತಲುಪಿತು.

ಕಾರ್ಯಕ್ರಮದಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿ ಚಂದ್ರಶೇಖರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಶಶಿರೇಖಾ, ಆರೋಗ್ಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು, ನರ್ಸಿಂಗ್ ವಿದ್ಯಾರ್ಥಿಗಳು, ಹೆಚ್‌ಐವಿ ನಿಯಂತ್ರಣದ ಬಗ್ಗೆ ಕಾರ್ಯನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳು ಹಾಗೂ ಸರ್ಕಾರ ಮತ್ತು ಸರ್ಕಾರೇತರ ಸಂಸ್ಥೆಗಳು ಹಾಜರಿದ್ದರು.

## ನಾಮನಿರ್ದೇಶನಗಳಿಗೆ ಅರ್ಜಿ ಆಹ್ವಾನ

**ಚಿತ್ರದುರ್ಗ:** ರಾಷ್ಟ್ರೀಯ ನೇರಳೆ ಉತ್ಸವ-ಕರ್ನಾಟಕ 2025ರ ನೇರಳೆ ಉತ್ಸವ ರಾಯಭಾರಿಗಳ ಆಯ್ಕೆ ನಾಮನಿರ್ದೇಶನಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.ವಿಕಲಚೇತನ ವ್ಯಕ್ತಿಗಳನ್ನು ಸಮಾಜದಲ್ಲಿ ಒಳಗೊಳ್ಳುವಂತೆ ಮಾಡುವುದು, ಅವರ ಘನತೆ ಮತ್ತು ಸಬಲೀಕರಣವನ್ನು ಸಾಬೀತು ಪಡಿಸುವುದರ ಮೂಲಕ ಅವರನ್ನು ಸಮಾಜದ ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ರಾಜ್ಯ ಆಯುಕ್ತರು, ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ ಬೆಂಗಳೂರು ಕಛೇರಿಯಿಂದ ದಿನಾಂಕ:05-12-2025 ರಿಂದ ದಿ:07-12-2025ರ ವರೆಗೆ ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ರಾಷ್ಟ್ರೀಯ ನೇರಳೆ ಉತ್ಸವ ಕಾರ್ಯಕ್ರಮವನ್ನು ಆಚರಿಸಲಾಗುತ್ತಿದೆ. ನೇರಳೆ ಬಣ್ಣವು ವಿಕಲಚೇತನರ ಹಕ್ಕುಗಳ ಚಳುವಳಿಯ ಮನೋಭಾವನೆಯನ್ನು ಪ್ರತಿನಿಧಿಸುತ್ತದೆ. ಇದು ನಮ್ಮ ರಾಷ್ಟ್ರಕ್ಕೆ ದಿವ್ಯಾಂಗ ಜನರ ಸೃಜನಶೀಲತೆ ಮತ್ತು ಕೊಡುಗೆಗಳ ಆಚರಣೆಯಾಗಿದೆ. ಈ ಹಿನ್ನೆಲೆಯಲ್ಲಿ ವಿಕಲಚೇತನ ವ್ಯಕ್ತಿಗಳಿಗೆ ಸಮಾನ ಅವಕಾಶ ಕಲ್ಪಿಸುವ ಮೂಲಕ ಅವರನ್ನು ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ಜಿಲ್ಲೆಗಳಲ್ಲಿ ಶ್ರಮಿಸುತ್ತಿರುವ ವಿಕಲಚೇತನ ವ್ಯಕ್ತಿಗಳು ಅಥವಾ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ವಿಕಲಚೇತನ ವ್ಯಕ್ತಿಗಳನ್ನು ಈ ಕಾರ್ಯಕ್ರಮದ ರಾಯಭಾರಿಗಳನ್ನಾಗಿ ಆಯ್ಕೆ ಮಾಡುವ ನಿಟ್ಟಿನಲ್ಲಿ ರಾಯಭಾರಿಗಳ ನಾಮ ನಿರ್ದೇಶನಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಆದ್ದರಿಂದ ಚಿತ್ರದುರ್ಗ ಜಿಲ್ಲೆಯಲ್ಲಿ ವಿಕಲಚೇತನ ವ್ಯಕ್ತಿಗಳಿಗೆ ಸಮಾನ ಅವಕಾಶ ಕಲ್ಪಿಸುವ ಮೂಲಕ ಅವರನ್ನು ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ಶ್ರಮಿಸುತ್ತಿರುವ ವಿಕಲಚೇತನ ವ್ಯಕ್ತಿಗಳು ಅಥವಾ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ವಿಕಲಚೇತನ ವ್ಯಕ್ತಿಗಳು ಜಿಲ್ಲಾ ಕಛೇರಿಯಿಂದ ರಾಷ್ಟ್ರೀಯ ನೇರಳೆ ಉತ್ಸವ ಕರ್ನಾಟಕ-2025 ರಾಯಭಾರಿ ಅರ್ಜಿ ನಮೂನೆ ಪಡೆದು ದಿ:16-11-2025ರ ಒಳಗಾಗಿ ಗೂಗಲ್ ಫಾರ್ಮ್ https://forms.gle/7pMqcgCySATFvNVm6 ಮೂಲಕ ಅಥವಾ ರಾಜ್ಯ ಆಯುಕ್ತರು,ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ, ಬೆಂಗಳೂರು ಕಛೇರಿಗೆ ಖುದ್ದಾಗಿ ಸಲ್ಲಿಸಲು ಕೋರಿದೆ.

# ದತ್ತಮಾಲಾಧಾರಿಗಳಿಂದ ಸಂಭ್ರಮದ ಬೃಹತ್ ಶೋಭಾಯಾತ್ರೆ

**ಚಿಕ್ಕಮಗಳೂರು:** ಶ್ರೀ ಗುರು ಇನಾಂ ದತ್ತಾತ್ರೇಯ ಬಾಬಾಬುಡನ್‌ಸ್ವಾಮಿ ದರ್ಗಾದಲ್ಲಿ ಡಿ.4 ರಂದು ಗುರುವಾರ ತೆರೆ ಕಾಣಲಿರುವ 26ನೇ ವರ್ಷದ ದತ್ತಮಾಲಾ ಅಭಿಯಾನ ಮತ್ತು ದತ್ತಜಯಂತಿ ಅಂಗವಾಗಿ ನಗರದಲ್ಲಿ ಇಂದು ನಡೆದ ದತ್ತಮಾಲಾಧಾರಿಗಳಿಂದ ಶೋಭಾಯಾತ್ರೆ ಶಾಂತಿಯುತವಾಗಿ ಸಂಭ್ರಮದಿಂದ ನಡೆಯಿತು.

ಪೂರ್ವ ನಿಗದಿಯಂತೆ ಶೋಭಾಯಾತ್ರೆ ಇಲ್ಲಿನ ಶ್ರೀ ಕಾಮಧೇನು ಗಣಪತಿ ದೇವಸ್ಥಾನದಿಂದ ಹೊರಟಿತು. ಆರಂಭದಲ್ಲಿ ದತ್ತಮಾಲಾಧಾರಿಗಳ ಸಂಖ್ಯೆ ಕಡಿಮೆಯಂತೆ ಕಂಡು ಬಂದರೂ ಟೌನ್‌ಕ್ಯಾಂಟಿನ್ ವೃತ್ತದಿಂದ ಬಸವನಹಳ್ಳಿ ಮುಖ್ಯ ರಸ್ತೆಯಲ್ಲಿ ಸಾಗಿ, ಹನುಮಂತಪ್ಪ ವೃತ್ತಕ್ಕೆ ಬರುತ್ತಿದ್ದಂತೆ ಸಾವಿರಾರು ಸಂಖ್ಯೆಯಲ್ಲಿ ಮಾಲಾಧಾರಿಗಳು ರಸ್ತೆಯ ಉದ್ದಕ್ಕೂ ಕಂಡುಬಂದಿತು.

ತಂಡೋಪ ತಂಡವಾಗಿ ಯಾತ್ರೆಯಲ್ಲಿ ಸಾಗಿದ ಯುವಕರು ಮುಗಿಲು ಮುಟ್ಟುವಂತೆ ಘೋಷಣೆ ಹಾಕುತ್ತಿದ್ದರು, ಜೈ ಶ್ರೀರಾಮ್, ಜೈ ಹನುಮಾನ್ ಘೋಷಣೆಗೆ ರಸ್ತೆಯ ಉದ್ದಕ್ಕೂ ನಿಂತಿದ್ದ ಸಾರ್ವಜನಿಕರು ಧ್ವನಿಗೂಡಿಸುತ್ತಿದ್ದರು. ಶೋಭಾಯಾತ್ರೆಯಲ್ಲಿ ಡಿಜೆ, ಗೊಂಬೆ ಮೇಳ, ಹಳ್ಳಿವಾದ್ಯಗಳು ಮಾತ್ರ ಇದ್ದವು. ಆದರೆ, ಕಳೆದ ವರ್ಷಗಳಿಗೆ ಹೋಲಿಕೆ ಮಾಡಿದರೆ ಕಲಾತಂಡಗಳ ಸಂಖ್ಯೆ ಕಡಿಮೆಯಾಗಿತ್ತು. ನಿರೀಕ್ಷೆಯಂತೆ ಮಾಲಾಧಾರಿಗಳು ಭಾಗವಹಿಸಿರುವುದು ಕಂಡುಬಂತು. ನಗರ ಪ್ರದೇಶದ ಯುವಕ–ಯುವತಿಯರು ಹಾಗೂ ಬಿಜೆಪಿಯ ಮುಖಂಡರು ಶೋಭಾಯಾತ್ರೆಯಲ್ಲಿ ಪಾಲ್ಗೊಂಡಿದ್ದರು.

ಯಾತ್ರೆಯ ಮುಂಚೂಣಿಯಲ್ಲಿ ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ, ಮುಖಂಡರಾದ ಪ್ರಮೋದ್ ಮಧ್ವರಾಜ್, ಶ್ರೀರಾಮಸೇನೆಯ ಮುಖಂಡ ಪ್ರಮೋದ್ ಮುತಾಲಿಕ್, ವಿಎಚ್‌ಪಿ ಹಾಗೂ ಭಜರಂಗದಳ ಮುಖಂಡರಾದ ಶ್ರೀಕಾಂತ್ ಪೈ, ಯೋಗೀಶ್ ರಾಜ್ ಅರಸ್, ಮಹೇಂದ್ರ, ರಂಗನಾಥ್ ಇದ್ದರು. ಚಿಕ್ಕಮಗಳೂರು ನಗರ ಸಂಪೂರ್ಣ ಕೇಸರಿಮಯವಾಗಿ ಅಲಂಕಾರಗೊಂಡಿತ್ತು.

ಮಣಿಕಂಡ ನಾಸಿಕ್‌ಡೋಲ್ ಮತ್ತು ಮಹಾವಿಷ್ಣು ಡ್ರಮ್ಸ್‌ಗೆ ಯುವಕ–ಯುವತಿಯರು ವಿಭಿನ್ನ ಸ್ಟೆಪ್ ಹಾಕಿದರೆ, ಡಿಜೆ ಹಾಡಿಗೆ ಯವಜನರು ಕುಣಿದು ಕುಪ್ಪಳಿಸಿದರು. ಉಡುಪಿಯ ಶೆಟ್ಟಿಗಾರ್ ಗ್ರಾಮದ ಗೊಂಬೆಗಳು, ನಂದಿ ಕೀಲುಕುದುರೆ ನೃತ್ಯಗಳು ಶೋಭಾಯಾತ್ರೆಗೆ ಕಳೆನೀಡಿದರೆ, ಗಿಡ್ಡವೇಷಧಾರಿ ತನ್ನ ಹಾವಭಾವದಿಂದ ಮಕ್ಕಳನ್ನು ನಗಿಸುತ್ತಿದ್ದುದು ಕಂಡುಬಂತು. ಒಟ್ಟಾರೆಯಾಗಿ ಸಹಸ್ರಾರು ಮಂದಿ ಪಾಲ್ಗೊಂಡಿದ್ದ ಶೋಭಾಯಾತ್ರೆ ಶಾಂತಿಯುತ, ಯಶಸ್ವಿಯಾಗಿ ಮುಕ್ತಾಯಗೊಂಡಿತು.

ಯಾತ್ರೆಯ ವೈಭವ ನೋಡಲು ರಸ್ತೆಯ ಉದ್ದಕ್ಕೂ ಮಾತ್ರವಲ್ಲ ಆಸುಪಾಸಿನ ಕಟ್ಟಡಗಳ ಮೇಲೆ ಸಾವಿರಾರು ಸಂಖ್ಯೆಯಲ್ಲಿ ಜನರು ಗಂಟೆಗಟ್ಟಲೆ ನಿಂತು ಕಣ್ತುಂಬಿಕೊಂಡರು.





ಹನುಮಂತಪ್ಪ ವೃತ್ತದ ಮೂಲಕ ಎಂ.ಜಿ. ರಸ್ತೆಯಿಂದ ಆಜಾದ್ ಪಾರ್ಕ್ ವೃತ್ತಕ್ಕೆ ತಲುಪಿದ ಬಳಿಕ ಯಾತ್ರೆ ಮುಕ್ತಾಯಗೊಂಡಿತು.

ಶ್ರೀರಾಮಸೇನೆಯ ರಾಷ್ಟ್ರೀಯ ಅಧ್ಯಕ್ಷ ಪ್ರಮೋದ್ ಮುತಾಲಿಕ್, ಸುಂದ್ರೇಶ ನರಗಲ್, ವಿಶ್ವ ಹಿಂದೂ ಪರಿಷತ್ ಮತ್ತು ಬಜರಂಗ ದಳದ ಮುಖಂಡರಾದ ಶ್ರೀಕಾಂತ್‌ಪೈ, ಮಾಜಿ ಶಾಸಕ ಡಿ.ಎನ್ ಜೀವರಾಜ್, ಕಾರ್ಕಳ ಶಾಸಕ ವಿ.ಸುನಿಲ್ ಕುಮಾರ್, ಸಕಲೇಶಪುರ ರಘು, ರಂಗನಾಥ, ಯೋಗೀಶ ರಾಜ್ ಅರಸ್, ಆರ್.ಡಿ.ಮಹೇಂದ್ರ, ಶಶಾಂಕ್ ಹೆರೂರು, ಸಿ.ಡಿ.ಶಿವಕುಮಾರ್, ಅಮಿತ್‌ಗೌಡ, ಶ್ಯಾಮ್ ವಿ.ಗೌಡ, ಶ್ರೀರಾಮಸೇನೆಯ ವಿಭಾಗೀಯ ಸಂಚಾಲಕ ರಂಜಿತ್‌ಶೆಟ್ಟಿಇದ್ದರು.

ಇಂದು ತೆರೆ: ಮೂರು ದಿನಗಳ ದತ್ತ ಜಯಂತಿ ಉತ್ಸವಕ್ಕೆ ಗುರುವಾರ ತೆರೆ ಬೀಳಲಿದೆ. ರಾಜ್ಯದ ವಿವಿಧೆಡೆಯಿಂದ ಸಾವಿರಾರು ದತ್ತಭಕ್ತರು ಮಾಲೆಯನ್ನು ಧರಿಸಿ ಆಗಮಿಸಿದ್ದಾರೆ. ಬೆಳಿಗ್ಗೆ ಆಗಮಿಸಲಿರುವ ಭಕ್ತರು ದತ್ತಪೀಠಕ್ಕೆ ತೆರಳಿ ದತ್ತ ಗುಹೆಯೊಳಗೆ ತೆರಳಿ ದತ್ತಪಾದುಕೆಗಳ ದರ್ಶನ ಪಡೆದು ನಂತರ ನಿರ್ಗಮಿಸಲಿದ್ದಾರೆ.

ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ದೃಷ್ಟಿಯಿಂದ 5 ಸಾವಿರಕ್ಕೂ ಹೆಚ್ಚು ಪೊಲೀಸರು, ಇದರ ಜತೆಗೆ ಕೆಎಸ್‌ಆರ್‌ಪಿ, ಡಿಎಆರ್ ತುಕಡಿಗಳನ್ನು ನಿಯೋಜನೆ ಮಾಡಲಾಗಿದೆ. 26 ಚೆಕ್ ಪೋಸ್ಟ್‌ಗಳು, 52 ಮಂದಿ ವಿಶೇಷ ಕಾರ್ಯನಿರ್ವಹಕ ದಂಡಾಧಿಕಾರಿಗಳನ್ನು ನಿಯೋಜನೆ ಮಾಡಲಾಗಿದೆ. ಕಾನೂನು ಮತ್ತು ಸುವ್ಯವಸ್ಥೆಯ ಹಿರಿಯ ಪೊಲೀಸ್ ಅಧಿಕಾರಿಗಳು ಚಿಕ್ಕಮಗಳೂರಿನಲ್ಲಿ ಮೊಕ್ಕಂ ಹೂಡಿದ್ದಾರೆ.

**ದತ್ತಜಯಂತಿ ಪ್ರಯುಕ್ತ ಪಡಿ ಸಂಗ್ರಹ :** ದತ್ತಜಯಂತಿ ಅಂಗವಾಗಿ ನಗರದ ನಾರಾಯಣಪುರ, ಮತ್ತು ರಾಘವೇಂದ್ರಸ್ವಾಮಿ ಮಠದ ರಸ್ತೆ ಸೇರಿದಂತೆ ವಿವಿಧ ಬಡಾವಣೆಯಲ್ಲಿ ಇಂದು ಬೆಳಗ್ಗೆ ದತ್ತಮಾಲಾಧಾರಿ ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ನೇತೃತ್ವದಲ್ಲಿ ದತ್ತಮಾಲಾಧಾರಿಗಳು ಪಡಿ ಸಂಗ್ರಹ(ಬಿಕ್ಷಾಟನೆ) ಮಾಡಿದರು.

ನಾರಾಯಣಪುರದ 9 ಮನೆಗಳಿಗೆ ತೆರಳಿದ 20ಕ್ಕೂ ಹೆಚ್ಚು ಮಾಲಾಧಾರಿಗಳು ಅಕ್ಕಿ, ತೆಂಗಿನಕಾಯಿ, ಬೆಲ್ಲ ಸೇರಿದಂತೆ ಇತರೆ ಆಹಾರ ಪದಾರ್ಥಗಳನ್ನು ಪಡಿ ರೂಪದಲ್ಲಿ ಸಂಗ್ರಹಿಸಿದರು.

ತಮ್ಮ ಮನೆಗೆ ಪಡಿ ಸಂಗ್ರಹಿಸಲು ಬಂದ ದತ್ತಮಾಲಾಧಾರಿಗಳ ಪಾದ ತೊಳೆದ ಮಹಿಳೆಯರು ಪಡಿ ನೀಡುತ್ತಿದ್ದ ದೃಷ್ಯ ಎಲ್ಲೆಡೆ ಸಾಮಾನ್ಯವಾಗಿತ್ತು. ಮಾಜಿ ಸಚಿವ ಸಿ.ಟಿ.ರವಿ ನೇತೃತ್ವದಲ್ಲಿ ಮಾತ್ರವಲ್ಲದೆ ನಗರದ ಇತರ ಬಡಾವಣೆಗಳಲ್ಲಿಯೂ ದತ್ತಮಾಲಾಧಾರಿಗಳು ಪಡಿ ಸಂಗ್ರಹಿಸಿದರು.

ದತ್ತಮಾಲಾಧಾರಿಗಳು ಪಡಿ ಸಂಗ್ರಹಕ್ಕೆ ಬರುತ್ತಿದ್ದ ಹಿನ್ನೆಲೆಯಲ್ಲಿ ವಿವಿಧ ಬಡಾವಣೆಗಳ ಮನೆಗಳ ಎದುರು ರಂಗೋಲಿ ಹಾಕಿ ಸಿಂಗರಿಸಲಾಗಿತ್ತು. ಇದರಿಂದಾಗಿ ನಗರದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು.

ದತ್ತಜಯಂತಿಯ ಅಂಗವಾಗಿ ಗುರುವಾರ ದತ್ತಪೀಠದಲ್ಲಿ ದತ್ತ ಪಾದುಕೆ ದರ್ಶನ ಹಾಗೂ ವಿವಿಧ ಹೋಮಹವನಗಳು ನಡೆಯಲಿದ್ದು, ಈ ವೇಳೆ ದತ್ತಮಾಲಾಧಾರಿಗಳು ತಾವು ಸಂಗ್ರಹಿಸಿದ ಪಡಿಯನ್ನು ಅಲ್ಲಿಗೆ ಅರ್ಪಣೆ ಮಾಡಲಿದ್ದಾರೆ. ಶ್ರೀ ಗುರು ದತ್ತಾತ್ರೆಯರಿಗೆ ಪಡಿ ಸಂಗ್ರಹಣೆ ಅತ್ಯಂತ ಪ್ರಿಯವಾಗಿದೆ ಎಂದರು.

ದತ್ತಮಾಲೆ ಧಾರಣೆ ಮಾಡಿದ ಬಳಿಕ ಬಿಕ್ಷಾಟನೆ ಮಾಡಿ ಪಡಿ ಸಂಗ್ರಹಿಸಿದರೆ ಮನಸ್ಸಿನಲ್ಲಿರುವ ಲೋಭ, ಮದ, ಮತ್ಸರ, ಅಹಂಕಾರ ಎಲ್ಲವೂ ನಿವಾರಣೆಯಾಗುತ್ತದೆ ಎಂಬುದು ಗುರುಗಳ ಅಭಿಪ್ರಾಯವಾಗಿತ್ತು. ಹೀಗಾಗಿಯೇ ದತ್ತಮಾಲಾಧಾರಿಗಳು ಪ್ರತಿ ವರ್ಷವೂ ಮಾಲಾಧಾರಣೆ ಬಳಿಕ ಪಡಿ ಸಂಗ್ರಹ ಮಾಡುವುದು ವಿಶೇಷ ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ತಿಳಿಸಿದರು.

# 29 ಕೋಟಿ ಡ್ರಗ್ಸ್ ವಶ ವಿದೇಶಿ ಮಹಿಳೆ ಸೇರಿ ಇಬ್ಬರ ಸೆರೆ

**ಬೆಂಗಳೂರು:** ಮಾದಕ ವಸ್ತುಗಳ ವಿರುದ್ಧ ಸಮರ ಸಾರಿರುವ ಸಿಸಿಬಿ ಪೊಲೀಸರು ಮಹಿಳೆ ಸೇರಿ ಇಬ್ಬರು ವಿದೇಶಿ ಡ್ರಗ್ ಫೆಡ್ಲರ್ ಗಳನ್ನು ಬಂಧಿಸಿ 28.75 ಕೋಟಿ ಮೌಲ್ಯದ ಮಾದಕವಸ್ತುಗಳನ್ನು ವಶಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ.

ತಾಂಜೇನಿಯಾದ ಮಹಿಳೆ ನಾನ್ಸಿ ಒಮೆರ್ರೈ ಲಾವ(29) ಹಾಗೂ ನೈಜೀರಿಯಾದ ಇಮಾನುಯಲ್ ಆರೇಂಜ್(28)ಬಂಧಿತ ಆರೋಪಿಗಳಾಗಿದ್ದಾರೆ ಎಂದು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

10 ಕೆಜಿ ಎಂಡಿಎಂಎ ಜಪ್ತಿ:

**ಬಂಧಿತರಿಂದ 28.75 ಕೋಟಿ ಮೌಲ್ಯದ**

10 ಕೆ.ಜಿ 369 ಗ್ರಾಂ ಎಂಡಿಎಂಎ ಕ್ರಿಸ್ಟೆಲ್, 8 ಕೆ.ಜಿ ಹೈಡ್ರೋಗಾಂಜಾ ಹಾಗೂ ಇತರೆ ವಸ್ತುಗಳನ್ನು ವಶಪಡಿಸಿಕೊಂಡು ಹೆಚ್ಚಿನ ತನಿಖೆ ಕೈಗೊಳ್ಳಲಾಗಿದೆ ಎಂದು ಹೇಳಿದರು.

ಸಂಪಿಗೆಹಳ್ಳಿಯ ರಾಚೇನಹಳ್ಳಿಯಲ್ಲಿ ಬಾಡಿಗೆಗೆ ಮನೆ ಮಾಡಿಕೊಂಡು ವಾಸಿಸುತ್ತಿದ್ದ

ನಾನ್ಸಿ ಒಮೆರ್ರೈ ಲಾವ ಹೇರ್ ಡಿಸೈನರ್ ಆಗಿ ಕೆಲಸ ಮಾಡುತ್ತಿದ್ದು, ಹಣದಾಸೆಗೆ ಡ್ರಗ್ ಮಾರಾಟ ದಂಧೆಯಲ್ಲಿ ತೊಡಗಿದ್ದಳು ಎಂದು ತಿಳಿಸಿದರು.

ಆರೋಪಿ ಮಹಿಳೆಯು ಮನೆಯಲ್ಲಿ ಎಂಡಿಎಂಎ ಡ್ರಗ್ಸ್ ನ್ನು ದಾಸ್ತಾನು ಮಾಡಿಕೊಂಡು ನೂತನ ವರ್ಷಾಚರಣೆ ಸಂದರ್ಭದಲ್ಲಿ ಪರಿಚಯಸ್ಥ



ಗಿರಾಕಿಗಳಿಗೆ ಮಾರಾಟ ಮಾಡಲು ಸಂಚು ರೂಪಿಸಿದ್ದ ಖಚಿತ ಮಾಹಿತಿ ಆಧರಿಸಿ ದಾಳಿ ನಡೆಸಿ ಬಂಧಿಸಲಾಗಿದೆ ಎಂದು ಹೇಳಿದರು.

**ಹೇರ್ ಡಿಸೈನ್ ಕೆಲಸ:** ಬಂಧಿತಳಿಂದ 18.50 ಕೋಟಿ ಮೌಲ್ಯದ 9 ಕೆ.ಜಿ 254 ಗ್ರಾಂ ಎಂ.ಡಿ.ಎಂ.ಎ ಕ್ರಿಸ್ಟೆಲ್ ಹಾಗೂ ಕೃತ್ಯಕ್ಕೆ ಬಳಸಲಾಗಿದ್ದ ಮೊಬೈಲ್ ಫೋನ್ ಮತ್ತಿತರೆ ವಸ್ತುಗಳನ್ನು ವಶಕ್ಕೆ ಪಡೆದುಕೊಳ್ಳಲಾಗಿರುತ್ತದೆ.

ವಶಕ್ಕೆ ಪಡೆದ ವಿದೇಶಿ ಮಹಿಳೆಯನ್ನು ವಿಚಾರಣೆಗೊಳಪಡಿಸಲಾಗಿ, 2023 ರಲ್ಲಿ ಪ್ರವಾಸಿ ವೀಸಾ ಪಡೆದು ದೆಹಲಿಗೆ ಬಂದಿದ್ದು, ನಂತರದ ಸಂಪಿಗೆಹಳ್ಳಿಯ ಪಿ ಆಂಡ್ ಟಿ ಲೇಔಟ್‌ನಲ್ಲಿ ಮನೆಯೊಂದನ್ನು ಬಾಡಿಗೆಗೆ ಪಡೆದು, ಹೇರ್ ಡಿಸೈನ್ ಕೆಲಸ ಮಾಡಿಕೊಂಡಿದ್ದಳು.

ಕೆಲಸದ ಜೊತೆಗೆ ಸ್ಥಳೀಯ ಡ್ರಗ್‌ಪೆಡ್ಲರ್ಗಳನ್ನು ಪರಿಚಯ ಮಾಡಿಕೊಂಡು, ದೆಹಲಿ ಮತ್ತಿತರೆ ಕಡೆಗಳಿಂದ ಎಂಡಿಎಂಎ ಕ್ರಿಸ್ಟೆಲ್‌ನ್ನು ಕಡಿಮೆ ಬೆಲೆಗೆ ಖರೀದಿಸಿಕೊಂಡು ಬಂದು, ಪರಿಚಯಸ್ಥ ಗಿರಾಕಿಗಳಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡುವ ಮೂಲಕ ಅಕ್ರಮ ಹಣ ಸಂಪಾದನೆಯಲ್ಲಿ ತೊಡಗಿದ್ದು ತನಿಖೆಯನ್ನು ಮುಂದುವರೆಸಲಾಗಿದೆ ಎಂದರು.

ಸಿದ್ದಾಪುರದ ಲಾಲ್‌ಭಾಗ್ ಸೌತ್‌ಗೇಟ್‌ನ ಬಾಸ್ಕೆಟ್ ಬಾಲ್ ಕೋರ್ಟ್ ಬಳಿ ಪ್ರತಿ ದಿನ ಶಂಕಾಸ್ಪದ ಓಡಾಡಿಕೊಂಡು, ಡ್ರಗ್ ಪೆಡ್ಲಿಂಗ್ ಮಾಡುತ್ತಿದ್ದ ಖಚಿತವಾದ ಮಾಹಿತಿಯನ್ನು ಆಧರಿಸಿ ದಾಳಿ ಮಾಡಿ ನೈಜೀರಿಯಾದ ಇಮಾನುಯಲ್ ಆರೇಂಜ್ ನನ್ನು ಬಂಧಿಸಲಾಗಿದೆ.


ಬಂಧಿತನಿಂದ 2.25 ಕೋಟಿ ಮೌಲ್ಯದ 1 ಕೆ.ಜಿ 115 ಗ್ರಾಂ ಎಂಡಿಎಂಎ ಕ್ರಿಸ್ಟೆಲ್ ಹಾಗೂ ಕೃತ್ಯಕ್ಕೆ ಬಳಸಲಾಗುತ್ತಿದ್ದ ಇತರೆ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಆರೋಪಿಯು 2021 ರಲ್ಲಿ ಬ್ಯುಸಿನೆಸ್ ವೀಸಾ ಪಡೆದು ದೆಹಲಿಗೆ ಬಂದು 2022 ರಲ್ಲಿ ಬೆಂಗಳೂರಿಗೆ ಬಂದು ವಾಸವಾಗಿರುತ್ತಾನೆ. ಈತನು ದೆಹಲಿ, ಗೋವಾ ಹಾಗೂ ಸ್ಥಳೀಯ ವಿದೇಶಿ ಡ್ರಗ್‌ಪೆಡ್ಲರ್ಗಳಿಂದ ಎಂಡಿಎಂಎ ಕ್ರಿಸ್ಟೆಲ್‌ನ್ನು ಕಡಿಮೆ ಬೆಲೆಗೆ ಖರೀಧಿಸಿ ಬೆಂಗಳೂರಿನಲ್ಲಿ ನೆಲೆಸಿರುವ ಮತ್ತೊರ್ವ ವಿದೇಶಿ ಪ್ರಜೆಯ ಮೂಲಕ ಪರಿಚಯಸ್ಥ ಗಿರಾಕಿಗಳಿಗೆ ಡ್ರಾಪ್‌ಲೊಕೇಷನ್ ಮೂಲಕ ಸರಬರಾಜು ಮಾಡಿ ಅಕ್ರಮ ಹಣದ ಸಂಪಾದನೆಯಲ್ಲಿ ತೊಡಗಿರುತ್ತಾನೆ. ಈತನ ವಿರುದ್ಧ 2024ರ ಫೆಬ್ರವರಿ ತಿಂಗಳಿನಲ್ಲಿ ಗೋವಿಂದಪುರ ಪೊಲೀಸ್ ಠಾಣೆಯಲ್ಲಿ ಎನ್‌ಡಿಪಿಎಸ್ ಕಾಯ್ದೆ ರೀತ್ಯಾ ಪ್ರಕರಣ ದಾಖಲಾಗಿ ನ್ಯಾಯಾಂಗ ಬಂಧನದಲ್ಲಿದ್ದು, 2025 ಏಪ್ರಿಲ್ ತಿಂಗಳಿನಲ್ಲಿ ಜೈಲಿನಿಂದ ಬಿಡುಗಡೆಯಾಗಿ ಬಂದ ನಂತರವೂ ಸಹ ಮತ್ತೆ ಡ್ರಗ್‌ಪೆಡ್ಲಿಂಗ್‌ನಲ್ಲಿ ತೊಡಗಿಸಿಕೊಂಡಿರುತ್ತಾನೆ. ಆರೋಪಿಯನ್ನು ಮಾನ್ಯ ನ್ಯಾಯಾಲಕ್ಕೆ ಹಾಜರುಪಡಿಸಿದ್ದು, ಮಾನ್ಯ ನ್ಯಾಯಾಲಯವು ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಳಪಡಿಸಲಾಗಿದೆ

**ಹೈಡ್ರೋಗಾಂಜಾ ಜಪ್ತಿ:** ಚಾಮರಾಜಪೇಟೆಯಲ್ಲಿರುವ ಫಾರಿನ್ ಪೋಸ್ಟ್ ಆಫೀಸ್‌ನ ಕೆಲವು ಪಾರ್ಸೆಲ್‌ಗಳಲ್ಲಿ ನಿಷೇದಿತ ಮಾದಕ ವಸ್ತುಗಳಿರುವ ಬಗ್ಗೆ ಕಸ್ಟಮ್ಸ್‌ನ ಅಧಿಕಾರಿಗಳು ನೀಡಿದ ಮಾಹಿತಿ ಆಧಾರದ ಮೇಲೆ ದಾಳಿ ನಡೆಸಿ 8 ಕೋಟಿ ಮೌಲ್ಯದ 8 ಕೆ.ಜಿ ಹೈಡ್ರೋಗಾಂಜಾ ವಶಪಡಿಸಿಕೊಳ್ಳಲಾಗಿದೆ.

ಆರೋಪಿಗಳು ವಿದೇಶಿ ಮೂಲಗಳಿಂದ ಹೈಡ್ರೋಗಾಂಜಾವನ್ನು ಖರೀಧಿಸಿ, ಅವುಗಳನ್ನು ವ್ಯವಸ್ಥಿತವಾಗಿ ಟೀ ಪಟ್ಟಣದಲ್ಲಿ ಪ್ಯಾಕ್ ಮಾಡಿ, ವಿದೇಶಿ ಅಂಚೆ ಮೂಲಕ ಬೆಂಗಳೂರಿಗೆ ತರಿಸಿಕೊಂಡಿರುತ್ತಾರೆ.

ಈ ಬಗ್ಗೆ ಸಿಸಿಬಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಆರೋಪಿಗಳ ಪತ್ತೆಕಾರ್ಯ ಮುಂದುವರೆದಿದೆ ಎಂದು ಹೇಳಿದರು. ಜಂಟಿ ಪೊಲೀಸ್ ಆಯುಕ್ತ ಅಜಯ್ ಹಿಲೋರಿ ನೇತೃತ್ವದಲ್ಲಿ ಡಿಸಿಪಿ ರಾಜಾ ಇಮಾಮ್ ಖಾಸೀಂ ನೇತೃತ್ವದ ಎಸಿಪಿ ಹೆಚ್. ಕೆ.ಮಹಾನಂದ್, ಇನ್ಸ್ ಪೆಕ್ಟರ್ ಗಳಾದ ವಿ.ಡಿ.ಶಿವರಾಜು,ಲಕ್ಷ್ಮಿನಾರಾಯಣ್.ಕೆ, ರಕ್ಷಿತ್. ಎಕೆ ಮತ್ತವರ ಸಿಬ್ಬಂದಿ ಪ್ರಕರಣಗಳನ್ನು ಪತ್ತೆಹಚ್ಚುವಲ್ಲಿ ಯಶಸ್ವಿಯಾಗಿದ್ದು,ತಂಡಕ್ಕೆ 50 ಸಾವಿರ ನಗದು ಬಹುಮಾನ ನೀಡಲಾಗುವುದು ಎಂದು ತಿಳಿಸಿದರು.

## ರಷ್ಯಾ–ಉಕ್ರೇನ್ ಶಾಂತಿ ಒಪ್ಪಂದ ವಿಫಲ



**ಮಾಸ್ಕೋ/ವಾಷಿಂಗ್ಟನ್:** ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಮತ್ತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಹಿರಿಯ ಸಮಾಲೋಚಕರ ನಡುವೆ ಸರಿ ಸುಮಾರು ಐದು ಗಂಟೆಗೂ ಅಧಿಕ ಸಮಯ ನಡೆದ ಮಾತುಕತೆಯ ಹೊರತಾಗಿಯೂ ರಷ್ಯಾ– ಉಕ್ರೇನ್ ಯುದ್ಧ ನಿಲ್ಲಿಸುವ ಶಾಂತಿ ಒಪ್ಪಂದ ಅಂತಿಮಗೊಳಿಸಲು ವಿಫಲವಾಗಿದೆ.

ರಷ್ಯಾದ ರಾಜಧಾನಿ ಮಾಸ್ಕೋದಲ್ಲಿ ನಡೆದ ಮಹತ್ವದ ಸಭೆಯಲ್ಲಿ ಅಮೆರಿಕಾ ಪ್ರಸ್ತಾಪಿಸಿದ ಶಾಂತಿ ಒಪ್ಪಂದಕ್ಕೆ ರಷ್ಯಾ ಸಮ್ಮತಿಸಿ ಸೂಚಿಸಿಲ್ಲ, ಬದಲಾಗಿ ಉಕ್ರೇನ್‌ನ ಕೆಲ ಭಾಗಗಳು ರಷ್ಯಾಗೆ ಬರಬೇಕು ಅವುಗಳನ್ನು ಬಿಟ್ಟುಕೊಡಬೇಕು ಅಲ್ಲಿಯ ತನಕ ಯಾವುದೇ ಒಪ್ಪಂದಕ್ಕೆ ಒಪ್ಪಿಕೊಳ್ಳುವುದಿಲ್ಲ ಎಂದು ರಷ್ಯಾದ ವಕ್ತಾರರು ತಿಳಿಸಿದ್ದಾರೆ.

# ವಿದ್ಯಾರ್ಥಿಗಳಲ್ಲಿ ಜೀವನ ಮೌಲ್ಯದ ಶಿಕ್ಷಣದ ಕೊರತೆ : ಸಂತೋಷ್ ಹೆಗ್ಡೆ

**ಚಿಕ್ಕಮಗಳೂರು:** ಶಾಲೆಗಳಲ್ಲಿ ಮಕ್ಕಳಿಗೆ ಇಂದು ಉತ್ತಮ ಶಿಕ್ಷಣ ದೊರೆಯುತ್ತಿದೆ. ಆದರೆ, ಜೀವನ ಮೌಲ್ಯ ಶಿಕ್ಷಣದ ಕೊರತೆ ಎದ್ದು ಕಾಣುತ್ತಿದೆ ಎಂದು ನಿವೃತ್ತ ನ್ಯಾಯಾಧೀಶ ಹಾಗೂ ನಿವೃತ್ತ ಲೋಕಾಯುಕ ನ್ಯಾಯಮೂರ್ತಿ ಸಂತೋಷ್ ಹೆಗ್ಡೆ ವಿಷಾಧ ವ್ಯಕ್ತಪಡಿಸಿದರು.

ಇತ್ತೀಚೆಗೆ ನಗರದ ಹೊರವಲಯದ ಉಂಡೇದಾಸರಹಳ್ಳಿಯಲ್ಲಿನ ವಿಶ್ವಧರ್ಮ ಪೀಠತಪೋವನದಲ್ಲಿ ಆಯೋಜಿಸಿದ್ದ ಬಸವತತ್ವ ಸಮಾವೇಶ ಮತ್ತು ಸ್ಮರಣೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಇಂದು ನಮ್ಮಲ್ಲಿ ಮಾನವೀಯ ಮೌಲ್ಯಗಳು ಕ್ಷೀಣಿಸುತ್ತಿದೆ. ಜೀವನ ಮೌಲ್ಯಗಳಿಗೆ ಬೆಲೆ ಕೊಡದವರು ಇಂದಿನ ಪರಿಸ್ಥಿತಿಯಲ್ಲಿ ಇದ್ದಾರೆ. ಜೈಲಿಗೆ ಹೋಗಿ ಜಾಮೀನು ಪಡೆದು ಬಂದವರಿಗೆ ಹಾರ ಹಾಕಿ ಬರಮಾಡಿಕೊಳ್ಳುತ್ತಿರುವ ಕೆಟ್ಟ ಸಂಸ್ಕೃತಿ ಬೆಳೆಯುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.



ಪೋಷಕರು ತಮ್ಮ ಮಕ್ಕಳಲ್ಲಿ ಜೀವನ ಮೌಲ್ಯ ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸಲು ಮುಂದಾಗಬೇಕು. ಆಗ ಮಾತ್ರ ಈ ಸಮಾಜ ಸರಿದಾರಿಯಲ್ಲಿ ನಡೆಯಲು ಸಾಧ್ಯ ಎಂದು ಅಭಿಪ್ರಾಯಿಸಿದರು.

ಶ್ರೀಮಂತನಾಗಬೇಕು, ವೈಭವದ ಜೀವನ ಸಾಗಿಸಬೇಕು ಎಂದು ಆಸೆಪಡುವುದು ತಪ್ಪಲ್ಲ. ಆದರೆ, ಸರಿದಾರಿಯಲ್ಲಿ ನಡೆದು ಶ್ರೀಮಂತನಾಗಬೇಕು. ವೈಭವದ ಜೀವನ ನಡೆಸಬೇಕು ಎಂದು ಕಿವಿಮಾತು ಹೇಳಿದ ಅವರು, ಹಿಂದೆತಾನು ನಿರ್ವಹಿಸುವ ಜವಬ್ದಾರಿ ತಿಳಿದು ಕರ್ತವ್ಯ ನಿರ್ವಹಿಸುತ್ತಿದ್ದರು ಎಂದು ಹೇಳಿದರು.

ಆದರೆ, ಇಂದು ಎಲ್ಲ ಕಡೆಗಳಲ್ಲಿ ಭ್ರಷ್ಟಾಚಾರ ತಾಂಡವ ಆಡುತ್ತಿದೆ. ಹಣ ನೀಡದಿದ್ದರೆ ಯಾವುದೇ ಕೆಲಸ ಆಗದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ದುರಾಸೆಗೆ ಮದ್ದಿಲ್ಲ, ಇದರಿಂದ ಸಮಾಜ ಹೊರಬರಲು ಮೌಲ್ಯ ಮತ್ತು ತೃಪ್ತಿಯ ಗುಣವನ್ನು ಬೆಳೆಸಿಕೊಳ್ಳಬೇಕು. ಆಗ ಮಾತ್ರ ಸರಿದಾರಿಗೆ ಬರಲು ಸಾಧ್ಯ ಎಂದು ತಿಳಿಸಿದರು.

ಹಿಂದೆ ಶಾಲೆಗಳಲ್ಲಿ ಮಕ್ಕಳಿಗೆ ನೀತಿ ಪಾಠಗಳನ್ನು ಹೇಳಿಕೊಡಲಾಗುತ್ತಿತ್ತು. ಆದರೆ, ಇಂದು ಶಾಲೆಗಳಲ್ಲಿ ಉತ್ತಮ ಶಿಕ್ಷಣ ದೊರೆಯುತ್ತಿದೆ. ಆದರೆ, ಮೌಲ್ಯಗಳನ್ನು ನಮ್ಮ ಮಕ್ಕಳಿಗೆ ಹೇಳಿ ಕೊಡುತ್ತಿಲ್ಲ. ಪೋಷಕರು ಮತ್ತು ಶಿಕ್ಷಕರು ಮಕ್ಕಳಲ್ಲಿ ಮೌಲ್ಯ ಪಾಠಗಳನ್ನು ಹೇಳಿಕೊಡುವ ಅಗತ್ಯ ಇಂದು ಇದೆ ಎಂದು ಹೇಳಿದರು.

ಇಂದು ಎಲ್ಲಾ ಕ್ಷೇತ್ರಗಳಲ್ಲೂ ಭ್ರಷ್ಟಾಚಾರ ಹರಡಿಕೊಂಡಿದೆ. ಭ್ರಷ್ಟಾಚಾರದಿಂದ ದೇಶ ಅಭಿವೃದ್ಧಿ ಹೊಂದಲು ಸಾಧ್ಯವಿಲ್ಲ. ಆಡಳಿತದಲ್ಲಿ ಬಸವತತ್ವವನ್ನು ಅವಳಡಿಸಿಕೊಳ್ಳುವ ಅಗತ್ಯವಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ನಿವೃತ್ತ ನ್ಯಾಯಾಧೀಶ ಕೆಂಪೇಗೌಡ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿಶ್ವಧರ್ಮ ಪೀಠದ ಡಾ. ಜಯಬಸವಾನಂದ ಸ್ವಾಮೀಜಿ ಅಧ್ಯಕ್ಷತೆ ವಹಿಸಿದ್ದರು. ಪಾಂಡೋಮಟ್ಟಿ ವಿರಕ್ತ ಮಠದ ಡಾ. ಗುರುಬಸವ ಮಹಾಸ್ವಾಮಿ, ಮಾಡಾಳು ನಿರಂಜನ ಮಠದ ರುದ್ರಮುನಿ ಮಹಾಸ್ವಾಮಿ, ಕೋಳುಗುಂದ ಕೇದಿಗೆ ಮಠದ ಜಯಚಂದ್ರಶೇಖರ ಮಹಾಸ್ವಾಮಿ ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದರು.

ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ, ನಗರಸಭೆ ಪೌರಾಯುಕ್ತ ಬಿ.ಸಿ.ಬಸವರಾಜ್, ರಘುರಾವ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಉಪಹಾರ ಸಭೆ ಬಳಿಕ ಎಲ್ಲವೂ ತಿಳಿಯಾಗಿದೆ : ಸಚಿವ ಪರಮೇಶ್ವರ್

**ಬೆಂಗಳೂರು:** ಉಪಹಾರ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ



ಡಿ.ಕೆ ಶಿವಕುಮಾರ್ ಏನು ಚರ್ಚೆ ಎಂಬುದು ಗೊತ್ತಿಲ್ಲ, ಆದರೆ ಎಲ್ಲವೂ ತಿಳಿಯಾಗಿದೆ ಎಂದು ಗೃಹ ಸಚಿವ ಪರಮೇಶ್ವರ್ ತಿಳಿಸಿದರು.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ನಮ್ಮಲ್ಲಿ ಯಾವುದೇ ಸಮಸ್ಯೆ ಇಲ್ಲ, ಆದರೆ ಅನಾವಶ್ಯಕವಾಗಿ ಗೊಂದಲ ಸೃಷ್ಟಿಯಾಗಿತ್ತು ಅದಕ್ಕೆ ಮಾಧ್ಯಮಗಳು ಸಹಾಯ ಮಾಡಿವೆ. ಈಗ ಎಲ್ಲವೂ ತಿಳಿಯಾಗಿದೆ ಎಂದು ಅಂದುಕೊಂಡಿರುವುದಾಗಿ ಹೇಳಿದರು.

ಉಪಹಾರ ಸಭೆಯ ಬಗ್ಗೆ ಹೆಚ್ಚು ಪ್ರತಿಕ್ರಿಯೆ ನೀಡಲು ನಿರಾಕರಿಸಿದ ಅವರು ಪಕ್ಷದಲ್ಲಿದ್ದ ಸಣ್ಣಪುಟ್ಟ ವ್ಯತ್ಯಾಸ ಸೇರಿದಂತೆ ಎಲ್ಲವೂ ಇತ್ಯರ್ಥವಾಗಿದೆ ಎಂದರು.

ರಾಜಕೀಯ ಶಾಶ್ವತ ಅಲ್ಲ ಎಂದು ವಿಧಾನಸೌಧದ ಬಳಿ ಶಾಸಕ ಗೋಪಾಲಕೃಷ್ಣ ಜೊತೆ ಮುಖ್ಯಮಂತ್ರಿಗಳು ಪ್ರಸ್ತಾಪಿಸಿರುವ ಕುರಿತು ಪ್ರತಿಕ್ರಿಯಿಸಿದ ಅವರು, ರಾಜಕೀಯ ಶಾಶ್ವತ ಅಲ್ಲ ಎಂಬುದು ಎಲ್ಲರಿಗೂ ಗೊತ್ತಿರುವ ವಿಚಾರ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಯಾವ ಕಾರಣಕ್ಕಾಗಿ ಹೇಳಿಕೆ ನೀಡಿದ್ದಾರೆ ಎಂಬುದನ್ನು ಅವರನ್ನೇ ಕೇಳಬೇಕು ಎಂದಿದ್ದಾರೆ.

ಬೆಳಗಾವಿ ಅಧಿವೇಶನದಲ್ಲಿ ಪ್ರತಿಪಕ್ಷಗಳು ಜ್ವಲಂತ ಸಮಸ್ಯೆಗಳನ್ನ ಮುಂದಿಟ್ಟುಕೊಂಡು ಚರ್ಚಿಸಲು ವಿಪಕ್ಷಗಳು ತಯಾರಾಗಿದ್ದಾರೆ, ನಾವು ನಾವು ಅವರನ್ನುವಿಶ್ವಾಸಕ್ಕೆ ತಗೊಂಡು ಕೆಲಸ ಮಾಡುತ್ತೇವೆ ಎಂದು ಹೇಳಿದರು.

# ಮಾನವನಷ್ಟೇ ಪರಿಸರವೂ ಸೂಕ್ಷ್ಮ, ಪ್ಲಾಸ್ಟಿಕ್‌ನಿಂದ ಉಸಿರುಗಟ್ಟಿದೆ : ಡಿಸಿ

**ದಾವಣಗೆರೆ :** ಮಾನವ ಎಷ್ಟು ಸೂಕ್ಷ್ಮತೆ ಹೊಂದಿದ್ದಾನೆಯೋ ಅದೇ ರೀತಿ ಪರಿಸರವೂ ಕೂಡ ಅಷ್ಟೇ ಸೂಕ್ಷ್ಮ. ಮಾನವ ಉಸಿರಾಟ ತೊಂದರೆಯಾದಾಗ ಸಾವು ಸಂಭವಿಸುತ್ತದೆ. ಅದರಂತೆ ಈಗಾಗಲೇ ಪ್ಲಾಸ್ಟಿಕ್ ಹೆಚ್ಚಳದಿಂದಾಗಿ ಉಸಿರುಗಟ್ಟಿದೆ ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಹೇಳಿದರು.

ನಗರದ ನಿಟುವಳ್ಳಿ ರಾಷ್ಟ್ರೋತ್ಥಾನ ಶಾಲಾ ಆವರಣದಲ್ಲಿ ಮಂಗಳವಾರ ಪ್ಲಾಸ್ಟಿಕ್ ಮುಕ್ತ ಸಮಾಜ ನಿರ್ಮಾಣ ಮಾಡುವಲ್ಲಿ ಶಾಲಾ ವಿದ್ಯಾರ್ಥಿಗಳಿಗೆ ಹಾಗೂ ಶಿಕ್ಷಕ ವರ್ಗದವರಿಗೆ ಜಾಗೃತಿ ಮೂಡಿಸುವ ವಿಶೇಷ ಅಭಿಯಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಪ್ಲಾಸ್ಟಿಕ್ ಬಳಕೆ ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಸಾಧ್ಯವಿಲ್ಲ. ಆದರೆ ಅದನ್ನು ವೈಜ್ಞಾನಿಕವಾಗಿ, ಸಮರ್ಪಕವಾಗಿ ಸರಿಯಾದ ರೀತಿಯಲ್ಲಿ ನಿರ್ವಹಣೆ ಮಾಡಿದಲ್ಲಿ ಪರಿಸರಕ್ಕೆ ಯಾವುದೇ ರೀತಿಯಲ್ಲಿ



ಧಕ್ಕೆಯುಂಟುಗಾಗುವುದಿಲ್ಲ. ಆದರೆ ಕೆಲವರು ಇದೆಲ್ಲ ಗೊತ್ತಿದ್ದು ಸಹ ಸರಿಯಾದ ರೀತಿಯಲ್ಲಿ ನಿರ್ವಹಣೆ ಮಾಡುತ್ತಿಲ್ಲ. ಜಿಲ್ಲೆಯ ಹೃದಯ ಭಾಗದಲ್ಲಿಯೇ ಸುಮಾರು 1 ಲಕ್ಷ ಗಿಳಿ, 10 ರಿಂದ 15 ಸಾವಿರ ಬಾವಲಿಗಳು ಅವಸ್ಥಾನವಾಗಿದೆ. ಆದರೆ ಪರಿಸರ ಮಾಲಿನ್ಯ, ವಾಯುಮಾಲಿನ್ಯ ಮತ್ತು ಶಬ್ದ ಮಾಲಿನ್ಯದಿಂದ ಅವುಗಳ ಸಂತತಿ ಕ್ಷೀಣಿಸುತ್ತಿದೆ.

ದೇಶವು ನೈಸರ್ಗಿಕವಾಗಿ ಸಮೃದ್ಧವಾಗಿ ಇರಬೇಕಾದರೆ ಶೇಕಡಾ 33ರಷ್ಟು ಅರಣ್ಯ ಹೊಂದಿರಬೇಕು. ಪ್ರಸ್ತುತ ಕಡಿಮೆ ಇದೆ. ಸಮುದ್ರದಲ್ಲಿ ಶೇಕಡಾ 70ರಷ್ಟು ಅರಣ್ಯ ಹೊಂದಿದ್ದು, ಹೆಚ್ಚು ಆಮ್ಲಜನಕ ಹೊರಸೂಸುತ್ತದೆ. ಪ್ಲಾಸ್ಟಿಕ್‌ನ್ನು ಎಲ್ಲೆಂದರಲ್ಲಿ ಬಳಸಿ ಬಿಸಾಡುವುದರಿಂದ ನದಿ ಮೂಲಗಳಿಂದ ಸಮುದ್ರ ಸೇರುತ್ತಿದೆ. ಇದರಿಂದ ಜಲ ಮೂಲ ಕಲುಷಿತಗೊಳ್ಳುವುದಲ್ಲದೇ ಜಲಚರ ಪ್ರಾಣಿಗಳ ಜೀವಕ್ಕೂ ಕುತ್ತು ತರುತ್ತಿದೆ ಎಂದರು.

ಜಿಲ್ಲೆಯಲ್ಲಿ ಸುಮಾರು 6 ಲಕ್ಷ ಜನಸಂಖ್ಯೆ ಹೊಂದಿದ್ದು, ಸ್ವಚ್ಚತೆಗಾಗಿ ಕೇವಲ 300 ಜನ ಪೌರಕಾರ್ಮಿಕರಿದ್ದಾರೆ. ಅವರಿಂದ ನಗರವನ್ನು ಸ್ವಚ್ಚಗೊಳಿಸಲು ಸಾಧ್ಯವಿಲ್ಲ. ಆದ್ದರಿಂದ ವಿದ್ಯಾರ್ಥಿಗಳು ತಮ್ಮ ಮನೆಗಳಲ್ಲಿ ಬಳಸಿ ಬಿಸಾಡುವ ಎಲ್ಲಾ ರೀತಿಯ ಪ್ಲಾಸ್ಟಿಕ್ ಮತ್ತು ಇನ್ನಿತರೆ ತ್ಯಾಜ್ಯವನ್ನು ಹಸಿಕಸ ಮತ್ತು ಒಣಕಸ ರೀತಿಯಲ್ಲಿ ವೈಜ್ಞಾನಿಕವಾಗಿ ವಿಂಗಡಿಸಿ ಸ್ಥಳೀಯ ಸಂಸ್ಥೆಗಳಿಗೆ ಅಥವಾ ಶಾಳೆಗಳಿಗೆ ನೀಡಬೇಕೆಂದು ವಿದ್ಯಾರ್ಥಿಗಳನ್ನುದ್ದೇಶಿ ಮಾತನಾಡಿದರು. ಪರಿಸರ ಉಳಿಯಬೇಕಾದರೆ, ಈ ರೀತಿಯ ಉತ್ತಮ ಅಂಶಗಳನ್ನು ಪ್ರತಿಯೊಬ್ಬರು ಮೈಗೂಡಿಸಿಕೊಂಡಲ್ಲಿ ಉತ್ತಮ ಸಮಾಜ ನಿರ್ಮಾಣ ಖಂಡಿತಾ ಸಾಧ್ಯ. ತಮ್ಮ ಸಹಕಾರ ಅತ್ಯಗತ್ಯ ಎಂದರು.

ಈ ವೇಳೆ ಡಿಡಿಪಿಐ ಕೊಟ್ರೇಶ್, ಸಿಆರ್‌ಪಿ ತೀರ್ಥಾಚಾರ್ಯ, ರಾಷ್ಟ್ರೋತ್ಥಾನ ವಿದ್ಯಾಸಂಸ್ಥೆಯ ಕಾರ್ಯದರ್ಶಿ ಜಯಣ್ಣ, ಪ್ರಾಂಶುಪಾಲರಾದ ಸುಗುಣ ಸೇರಿದಂತೆ ಶಾಲೆಯ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಇದ್ದರು.

## ಡಿ.6: ಸಚಿವರ ಅಧ್ಯಕ್ಷತೆಯಲ್ಲಿ ನಗರದಲ್ಲಿ ಜನಸಂಪರ್ಕ ಸಭೆ

**ಚಿಕ್ಕಮಗಳೂರು, ಡಿ.3:** ಮಾನ್ಯ ಇಂಧನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಕೆ.ಜೆ.ಜಾರ್ಜ್ ಅವರ ಅಧ್ಯಕ್ಷತೆಯಲ್ಲಿ ಜಿಲ್ಲೆಯ ಚುನಾಯಿತ ಜನಪ್ರತಿನಿಧಿಗಳನ್ನು ಒಳಗೊಂಡಂತೆ ಡಿಸೆಂಬರ್ 6 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಕುವೆಂಪು ಕಲಾಮಂದಿರದಲ್ಲಿ ಜನಸಂಪರ್ಕ ಸಭೆಯನ್ನು ಹಮ್ಮಿಕೊಳ್ಳಲಾಗಿದೆ.

ಸಾರ್ವಜನಿಕರು ತಮ್ಮ ಅಹವಾಲುಗಳನ್ನು ಡಿಸೆಂಬರ್ 5ರವರೆಗೆ ತಹಸೀಲ್ದಾರ್ ಕಚೇರಿಯಲ್ಲಿ ಸಲ್ಲಿಸಬಹುದು. ಅನಂತರ ಡಿಸೆಂಬರ್ 6 ರಂದು ಬೆಳಿಗ್ಗೆ 11 ಗಂಟೆಗೆ ಕುವೆಂಪು ಕಲಾಮಂದಿರದಲ್ಲಿ ಸಹ ಅರ್ಜಿ ಸಲ್ಲಿಸಬಹುದು ಎಂದು ಚಿಕ್ಕಮಗಳೂರು ತಾಲ್ಲೂಕು ತಹಸೀಲ್ದಾರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಾ.ಅಂಬೇಡ್ಕರ್ ಪರಿನಿರ್ವಾಣ ದಿನಾಚರಣೆ

**ಚಿಕ್ಕಮಗಳೂರು, ಡಿ.3:** ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 69ನೇ ಪರಿನಿರ್ವಾಣ ದಿನಾಚರಣೆಯನ್ನು ಡಿಸೆಂಬರ್ 6 ರಂದು ಬೆಳಿಗ್ಗೆ 9.30 ಗಂಟೆಗೆ ಜಿಲ್ಲಾ ಪಂಚಾಯಿತಿ ಆವರಣದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಅವರ ಪುತ್ಥಳಿಗೆ ಪುಷ್ಪಾರ್ಚನೆ ಸಲ್ಲಿಸಲು ಮೂಲಕ ಆಚರಿಸಲು ತೀರ್ಮಾನಿಸಲಾಗಿದ್ದು, ಈ ಕಾರ್ಯಕ್ರಮಕ್ಕೆ ವಿವಿಧ ಸಂಘಟನೆಗಳ ಎಲ್ಲ ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಕೋರಿದ್ದಾರೆ.

## ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹ ಧನ

ಚಿಕ್ಕಮಗಳೂರು, ಡಿ.3: ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಬಿ.ಇಡಿ. ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹ ಧನಕ್ಕಾಗಿ ಸೇವಾಸಿಂಧು ಪೋರ್ಟಲ್‌ನಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. 2025–26ನೇ ಸಾಲಿನಲ್ಲಿ ಬಿ.ಇಡಿ. ನಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ) ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಹಾಗೂ ಗ್ರಾಮೀಣ ಮತ್ತು ನಗರ ಭಾಗದಲ್ಲಿ ಆರ್ಥಿಕವಾಗಿ ಹಿಂದುಳಿದ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸ ಮುಂದುವರೆಸಲು ಪ್ರೋತ್ಸಾಹಿಸಲಾಗಿದೆ.

## ದರ್ಶನ್ ಮನೆಯಲ್ಲಿ ದೊರೆತಿರುವ 82 ಲಕ್ಷ ರೂ. ತೆರಿಗೆ ಇಲಾಖೆಗೆ ವರ್ಗಾವಣೆ

**ಬೆಂಗಳೂರು:** ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲು ಪಾಲಾಗಿರುವ



ನಟ ದರ್ಶನ್ ನಿವಾಸದಲ್ಲಿ ಪತ್ತೆಯಾಗಿರುವ 82 ಲಕ್ಷ ರೂಗಳನ್ನು ಆದಾಯ ತೆರಿಗೆ ಇಲಾಖೆಯಲ್ಲೇ ಇರಲಿ ಎಂದು 57ನೇ ಸಿಸಿಎಚ್ ಕೋರ್ಟ್ ಆದೇಶಿಸಿದೆ.

ಕೊಲೆ ಪ್ರಕರಣದ ತನಿಖೆಯ ಸಂದರ್ಭದಲ್ಲಿ ಕಾಮಾಕ್ಷಿಪಾಳ್ಯ ಪೊಲೀಸರು ದರ್ಶನ್ ಮನೆ ಮತ್ತು ಪ್ರದೋಷ್ ಮನೆಯಲ್ಲಿ ಹಣ ವಶಕ್ಕೆ ಪಡೆದು ಆದಾಯ ತೆರಿಗೆ ಇಲಾಖೆಗೆ ವರ್ಗಾವಣೆ ಮಾಡಿದ್ದರು.

ತನಿಖೆ ನಡೆಸಿದ ಐಟಿ ಇನ್ನೂ ಸ್ಪಷ್ಟವಾದ ಮಾಹಿತಿ ನೀಡಿರಲಿಲ್ಲ. ಈ ಸಂದರ್ಭದಲ್ಲಿ ದರ್ಶನ್ 82 ಲಕ್ಷ ರೂ. ಹಣ ವಾಪಸ್ ನೀಡಲು ಕೋರ್ಟ್‌ಗೆ ಮನವಿ ಮಾಡಿದ್ದರು.

ದರ್ಶನ್ ಅರ್ಜಿಗೆ ಆಕ್ಷೇಪಣೆ ಎತ್ತಿದ ಐಟಿ ದರ್ಶನ್ ಇದೂವರೆಗೂ ಸ್ಪಷ್ಟ ಮಾಹಿತಿ ನೀಡಿಲ್ಲ. ಹೀಗಾಗಿ ತನಿಖೆ ಮುಂದುವರೆಸಬೇಕಾಗಿದೆ ಎಂದಿತ್ತು. ವಾದ–ಪ್ರತಿವಾದ ಆಲಿಸಿದ ನ್ಯಾಯಾಲಯ 82 ಲಕ್ಷ ಹಣ ಐಟಿ ಬಳಿಯಲ್ಲೇ ಇರಲಿ, ತನಿಖೆ ಮುಂದುವರೆಸಲಿ ಎಂದು ಆದೇಶ ನೀಡಿದೆ.

ಈ ಹಣ ದರ್ಶನ್ ಮನೆಗೆ ಹೇಗೆ ಬಂತು ಎನ್ನುವುದಕ್ಕೆ ದರ್ಶನ್ ಪರ ವಕೀಲರು ವಾದಿಸಿದ್ದರು. ದರ್ಶನ್ ಅವರು ಮೋಹನ್ ರಾಜ್‌ಗೆ ಸಾಲವಾಗಿ ಹಣ ನೀಡಿದ್ದರು.

ಮೋಹನ್ ರಾಜ್ ಅವರು ದರ್ಶನ್‌ಗೆ ಮರಳಿಸಿದ್ದರು. ದರ್ಶನ್ ಇದನ್ನು ಮನೆಯಲ್ಲಿಟ್ಟಿದ್ದರು ಎಂದು ದರ್ಶನ್ ವಕೀಲರು ಹೇಳಿದ್ದರು. ಇದಕ್ಕೆ ಆದಾಯ ತೆರಿಗೆ ಇಲಾಖೆ ದರ್ಶನ್ ಈ ಹಣಕ್ಕೆ ಸೂಕ್ತ ದಾಖಲೆಯನ್ನು ಸಲ್ಲಿಕೆ ಮಾಡಿಲ್ಲ. ಇದು ವಂಚನೆಯ ಹಣ ಎಂದು ವಾದಿಸಿತ್ತು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**